ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 53
8–8–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 53

## ಸಂಸದ ಕೆ. ಸುಧಾಕರ್ ಹೆಸರು ಬರೆದು ಕಾರು ಚಾಲಕ ಆತ್ಮಹತ್ಯೆ



**ಚಿಕ್ಕಬಳ್ಳಾಪುರ:** ಮಾಜಿ ಸಚಿವ ಬಿಜೆಪಿ ಸಂಸದ ಸುಧಾಕರ್ ಹೆಸರನ್ನು ಡೆತ್‌ನೋಟ್‌ನಲ್ಲಿ ಉಲ್ಲೇಖಿಸಿ ಕಾರು ಚಾಲಕರೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಚಿಕ್ಕಬಳ್ಳಾಪುರದ ಬಾಪೂಜಿನಗರದ ನಿವಾಸಿ ಬಾಬು (32) ಆತ್ಮಹತ್ಯೆಗೆ ಶರಣಾಗಿದ್ದಾರೆ. ಜಿಲ್ಲಾ ಪಂಚಾಯತಿ ಸಿಇಒ ಕಾರು ಚಾಲಕನಾಗಿದ್ದ ಬಾಬು ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಜಿಲ್ಲಾ ಪಂಚಾಯತಿ ಸಭಾಂಗಣದ ಹಿಂಭಾಗದಲ್ಲಿರುವ ಮರದಲ್ಲಿ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ನನ್ನ ಸಾವಿಗೆ ಸಂಸದ ಡಾ ಕೆ ಸುಧಾಕರ್ ಕಾರಣ. ಚಿಕ್ಕಕಾಡಿಗಾನಹಳ್ಳಿ ನಾಗೇಶ್ ಸರ್ಕಾರಿ ಕೆಲಸ ಕೊಡಿಸುವುದಾಗಿ ಹೇಳಿ 25 ಲಕ್ಷ ಹಣ ಪಡೆದು ವಂಚನೆ ಮಾಡಿದ್ದಾರೆ. ಅಷ್ಟೇ ಅಲ್ಲದೇ ಜಿಲ್ಲಾ ಪಂಚಾಯತಿ ಲೆಕ್ಕ ಸಹಾಯಕರ ವಿರುದ್ದವೂ ಡೆತ್ ನೋಟ್‌ನಲ್ಲಿ ಬಾಬು ಹಲವು ಆರೋಪ ಮಾಡಿದ್ದಾರೆ. ಸ್ಥಳಕ್ಕೆ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲಿಸುತ್ತಿದ್ದಾರೆ.

ಇನ್ನೂ ಚಾಲಕ ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣದಲ್ಲಿ ರಾಜಕೀಯ ಒತ್ತಡವಿಲ್ಲದೆ ತನಿಖೆ ಆಗಲಿದೆ ಎಂದು ಚಿಕ್ಕಬಳ್ಳಾಪುರ ಉಸ್ತುವಾರಿ ಸಚಿವ ಎಂ.ಸಿ ಸುಧಾಕರ್ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಚಾಲಕ ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ ಬೆಳಿಗ್ಗೆ ಮಾಹಿತಿ ಬಂದಿದೆ. ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಗುತ್ತಿಗೆ ಚಾಲಕನಾಗಿ ಕೆಲಸ ಮಾಡುತ್ತಿದ್ದ ಬಾಬು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

### ಕುಂದುವಾಡ ಮುಖ್ಯ ರಸ್ತೆ ವಿವಾದ, ದೂರುದಾರ, ಪಾಲಿಕೆ ಅಧಿಕಾರಿಗಳು–ಗ್ರಾಮಸ್ಥರ ನಡುವೆ ವಾಗ್ವಾದ

# ರಸ್ತೆ ನಿರ್ಮಿಸದಿದ್ದರೆ ಪಾಲಿಕೆಗೆ ಮುತ್ತಿಗೆ ಹಾಕುವ ಎಚ್ಚರಿಕೆ ನೀಡಿದ ಗ್ರಾಮಸ್ಥರು

**ದಾವಣಗೆರೆ:** ನಗರದ ಹಳೇ ಕುಂದುವಾಡ ಮುಖ್ಯ ರಸ್ತೆ ಜಾಗ ವಿವಾದದ ಸ್ವರೂಪ ಪಡೆದಿದ್ದು, ಇಂದು ಮಹಾನಗರ ಪಾಲಿಕೆ ಅಧಿಕಾರಿಗಳ ತಂಡ ಪರಿಶೀಲನೆಗೆ ಆಗಮಿಸಿದ್ದ ವೇಳೆ ಸಂಚಾರ ಬಂದ್ ಮಾಡಿದ್ದ ವ್ಯಕ್ತಿ ಹಾಗೂ ಗ್ರಾಮಸ್ಥರ ನಡುವೆ ವಾಗ್ವಾದ ನಡೆದು ಪ್ರತಿಭಟನೆಗೆ ತಿರುಗಿದೆ.

ನಗರದ ಹಳೇ ಕುಂದುವಾಡ ಮುಖ್ಯ ರಸ್ತೆಯ ಕೆರೆ ಸಮೀಪದ ಜಾಗ ನನ್ನದು ಎಂದು ಈ ಹಿಂದೆ ರಸ್ತೆಗೆ ಶಿವಕುಮಾರ್ ಎಂಬಾತ ಬೇಲಿ ಹಾಕಿದ್ದರು, ಆ ವೇಳೆ ತಂತಿ ಬೇಲಿಯನ್ನು ಗ್ರಾಮಸ್ಥರು ಕಿತ್ತು ಹಾಕಿದ್ದರು, ಬಳಿಕ ಕೋರ್ಟ್ ನಲ್ಲಿ ಶಿವಕುಮಾರ್ ದಾವೆ ಹೂಡಿದ್ದರು, ಈ ಹಿನ್ನಲೆ ರಸ್ತೆ ನಿರ್ಮಾಣ ಕಾರ್ಯ ಅರ್ಧಕ್ಕೆ ನಿಂತು ಸಂಚಾರಿ ಮಾರ್ಗ ಗುಂಡಿ ಬಿದ್ದಿತ್ತು, ಮಳೆ ಬಂದರೆ ರಸ್ತೆ ಕೆರೆ–ಯಂತಾಗುತ್ತಿತ್ತು, ವಿದ್ಯಾರ್ಥಿಗಳು ಜನರು ಜೀವ ಕೈಯಲ್ಲಿ ಹಿಡಿದು ಸಂಚಾರಿಸುವ ಪರಿಸ್ಥಿತಿ ಎದುರಾಗಿತ್ತು, ಹೀಗಾಗಿ ಪಾಲಿಕೆಗೆ ಗ್ರಾಮಸ್ಥರು, ಮುಖಂಡರು ಒತ್ತುವರಿ ತೆರವು ಮಾಡಿ ಸಂಚಾರ–ಕ್ಕೆ ಅನುವು ಮಾಡಿಕೊಡುವಂತೆ ಮನವಿ ಮಾಡಿದ್ದರು,



ಮನವಿ ಹಿನ್ನಲೆ ಪಾಲಿಕೆ ಆಯುಕ್ತರಾದ ರೇಣುಕಾ ಹಾಗೂ ಅಧಿಕಾರಗಳ ತಂಡ ಇಂದು ಆಗಮಿಸಿ ಪರಿಶೀಲನೆ ನಡೆಸಿತು. ಈ ವೇಳೆ ಮಾತನಾಡಿದ ಪಾಲಿಕೆ ಆಯುಕ್ತೆ ರೇಣುಕಾ, ಸಾರ್ವಜನಿಕರ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿದೆ, ಈ ಹಿನ್ನಲೆ ವಿವಾದದ ಜಾಗ ಬಿಟ್ಟು ಮಧ್ಯೆ 30 ಅಡಿ ರಸ್ತೆ ನಿರ್ಮಿಸುವುದಾಗಿ ಹೇಳಿದರು, ಈ ಮಾತನ್ನು ಕೇಳದ ಶಿವಕುಮಾರ್, ಬದಲಿ ರಸ್ತೆ ಮಾಡಿ ಎಂದು ಹೇಳಿದರು, ಇದರಿಂದ ಕೋಪಗೊಂಡ ಗ್ರಾಮಸ್ಥರು, ಎರಡು ವರ್ಷದಿಂದ ಇದೇ ಕಥೆ ಹೇಳುತ್ತಾ ಬಂದಿದ್ದೀರಿ, ಅವರ ಬಳಿ ಪದೇ ಪದೇ ಮನವಿ ಮಾಡಿಕೊಳ್ಳುವುದು ಯಾಕೆ, ರೂಲ್ಸ್ ಪ್ರಕಾರವೇ ರಸ್ತೆ ಮಾಡಿ ಯಾರು ಬರುತ್ತಾರೊ ನಾವು ನೋಡುತ್ತೇವೆ ಎಂದು ವಾಗ್ವಾದಕ್ಕೆ ಇಳಿದು ದಿಢೀರ್ ರಸ್ತೆ ಬಂದ್ ಮಾಡಿ ಪ್ರತಿಭಟನೆಗಿಳಿದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರನ್ನ ಮನವೊಲಿಸಿದ ಪಾಲಿಕೆ ಆಯುಕ್ತರು, ಪಕ್ಕದ ಜಾಗದ ಮಾಲೀಕ ಶಿವಕುಮಾರ್ ಅವರಿಗೆ ಮನವರಿಕೆ ಮಾಡಿಕೊಡಲಾಗಿದೆ, ಸಾರ್ವಜನಿಕರಿಗೆ ತೊಂದರೆ ಆಗುತ್ತಿದ್ದು, 30 ಅಡಿ ರಸ್ತೆ ನಿರ್ಮಿಸುತ್ತೇವೆ ಎಂದು ಹೇಳಿದ್ದೇವೆ, ಒಪ್ಪಿದ್ದಾರೆ, ಜೊತೆಗೆ ಕೆರೆ ರಸ್ತೆ ಗುಂಡಿಗಳನ್ನು ಮುಚ್ಚುತ್ತೇವೆ, ಬಳಿಕ ಅಲ್ಲಿಯೂ ಸಿಸಿ ರಸ್ತೆ ಮಾಡಿಕೊಡುತ್ತೇವೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡ ಹುಲ್ಮನಿ ಗಣೇಶ್, ಗ್ರಾಮದ ಮುಖಂಡರಾದ ಮುರುಗೆವ್ವರ್ ಅಣ್ಣಪ್ಪ, ಮಿಟ್ಲಕಟ್ಟೆ ಚಂದ್ರಪ್ಪ, ಡಿಜಿ ಪ್ರಕಾಶ್, ಹೆಚ್ ಜಿ ಮಂಜಪ್ಪ, ಯುವ ಮುಖಂಡರಾದ ಮಧುನಾಗರಾಜ್, ಪ್ರಭಾಕರ್, ಲಿಂಗರಾಜ್, ಕಿಟ್ಟಪ್ಪ, ಹಾಲಪ್ಪ ನಿಂಗಪ್ಪ, ಅಜಯ್, ಚಂದ್ರು, ಸಿದ್ದೇಶ್, ಗದಿಗೆಪ್ಪ ಸೇರಿದಂತೆ ಪಾಲಿಕೆ ಅಧಿಕಾರಿಗಳು, ಗ್ರಾಮಸ್ಥರು ಮತ್ತಿತರರಿದ್ದರು.

## ಬಿಜೆಪಿ ಕಾರ್ಯಕರ್ತರ ಆರೋಪ ನಿರಾಧಾರ : ಡಿ.ಜಿ.ಶಾಂತನಗೌಡ

**ಹೊನ್ನಾಳಿ :** ಭದ್ರಾ ಜಲಾಶಯದ ಬಲದಂಡೆ ನಾಲೆಯಿಂದ ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ಹಾಗೂ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲೂಕುಗಳಿಗೆ ಬಲದಂಡೆ ನಾಲೆಯಿಂದ ಕುಡಿಯುವ ನೀರಿಗೆ 30 ಕ್ಯೂಸೆಕ್ ನೀರನ್ನು ಪಡೆಯುವ ಉದ್ದೇಶದಿಂದ ನಡೆಯುತ್ತಿರುವ ಕಾಮಗಾರಿ ಬಗ್ಗೆ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರುಗಳು ವಿನಾಕಾರಣ ಮಾಡುತ್ತಿರುವ ಆರೋಪ ನಿರಾಧಾರ ಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.

ಗುರುವಾರ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಈ ಬಗ್ಗೆ ಬಿಜೆಪಿ ಕಾರ್ಯಕರ್ತರು ಸುಖಾಸುಮ್ಮನೆ ಕಾಂಗ್ರೆಸ್ ಸರಕಾರ ಹಾಗೂ ಕಾಂಗ್ರೆಸ್ ಶಾಸಕರ ವಿರುದ್ದ ಆರೋಪ ಮಾಡುತ್ತಿದ್ದಾರೆ,ಈ ಬಗ್ಗೆ ಭದ್ರಾ ನಾಲ ಅಚ್ಚುಕಟ್ಟು ರೈತರಿಗೆ ಸ್ಪಷ್ಟನೆ ನೀಡುವ ಸಲುವಾಗಿ ತಾಲೂಕಿನ ಕುಂದೂರು ಗ್ರಾಮದಲ್ಲಿ ಶನಿವಾರ ಅಚ್ಚುಕಟ್ಟು ರೈತರ ಸಭೆಯನ್ನು ಹಮ್ಮಿಕೊಳ್ಳಲಾಗಿದೆ, ಅಂದು ನೀರು ಬಿಡುವ ಸಂಬಂಧ ಎಲ್ಲಾ ದಾಖಲೆಗಳನ್ನು ರೈತರ ಮುಂದೆ ತೆರದಿಡಲಾಗುವುದು.ನೀರು ಕೊಡುವ ಬಗ್ಗೆ ಕಾಂಗ್ರೆಸ ಸರಕಾರದಿಂದ ಯಾವುದೇ ಲೋಪ ಆಗಿಲ್ಲ ಎಂದು ರೈತರಿಗೆ ಮನದಟ್ಟು ಮಾಡುಕೊಡುವ ಉದ್ದೇಶದಿಂದ ಈ ಸಭೆಯನ್ನು ಕರೆಯಲಾಗಿದೆ ಎಂದು ತಿಳಿಸಿದರು.

ಅಲ್ಲಿರುವ ನೈಜ ಘಟನೆಯೇ ಬೇರೆ,ಬಿಜೆಪಿ ಪಕ್ಷದವರು ಇಲ್ಲಿ ಹೇಳುತ್ತಿರುವುದೇ ಬೇರೆ,ಹೀಗೆ ರೈತರನ್ನು ದಾರಿ ತಪ್ಪಿಸುವ ರೀತಿಯಲ್ಲಿ ಅಪಪ್ರಚಾರ ಮಾಡುತ್ತಿದ್ದಾರೆ,ಈ ಬಗ್ಗೆ ರೈತರಿಗೆ ಸತ್ಯ ಸಂದೇಶ ನೀಡುವುದಕ್ಕಾಗಿ ಕುಂದೂರಿನಲ್ಲಿ ರೈತರ ಸಭೆಯನ್ನು ಕರೆಯಲಾಗಿದೆ ಎಂದು ತಿಳಿಸಿದರು.

ಅಲ್ಲದೆ ಪ್ರತಿಪಕ್ಷ ಬಿಜೆಪಿ ಯುರಿಯಾ ಕೊರತೆ ಹಾಗೂ ರಸ್ತೆಗಳಲ್ಲಿ ಗುಂಡಿ ಬಿದ್ದಿರುವ ಬಗ್ಗೆ ಪ್ರತಿಭಟನೆ ಕೂಡ ನಡೆಸಿದೆ ಈ ಬಗ್ಗೆಯೂ ಸಾರ್ವಜನಕರಿಗೆ ಮಾಹಿತಿ ನೀಡಲಾಗುವುದು ಎಂದ ಅವರು ಈ ಕಾರ್ಯಕ್ರಮಕ್ಕೆ ಮಾಯಕೊಂಡ ಶಾಸಕ ಬಸವಂತಪ್ಪ,ಚನ್ನಗಿರಿ ಶಾಸಕ ಬಸವರಾಜ್ ಶಿವಗಂಗಾ, ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ್ ಹಾಗೂ ಹರಿಹರದ ಮಾಜಿ ಶಾಸಕ ರಾಮಪ್ಪ ಹಾಗೂ ನಾನೂ ಈ ಬಗ್ಗೆ ರೈತರಿಗೆ ಸ್ಪಷ್ಟನೆ ನೀಡಲಿದ್ದೇವೆ, ಮಲ್ಲೆಬೆನ್ನುರು,ಹರಿಹರ,ಕುಂದೂರು,ದಾವಣಗೆರೆ,ತ್ಯಾವಣಿಗೆ ವಿಭಾಗದಲ್ಲಿ ಬರುವ ಅಚ್ಚುಕಟ್ಟು ರೈತರು ಈ ಸಭೆಗೆ ಆಗಮಿಸಬೇಕೆಂದು ಶಾಸಕ ಡಿ.ಜಿ.ಶಾಂತನಗೌಡ ಮನವಿ ಮಾಡಿದರು.

# ಚಿರತೆಗಳ ದಾಳಿ : 21 ಕುರಿ ಬಲಿ, 9 ಕುರಿಗಳಿಗೆ ಗಾಯ

**ಮಲೇಬೆನ್ನೂರು :** ಹೊಳೆಸಿರಿಗೆರೆ ಕ್ರಾಸ್ ಬಳಿ ಹೊಲದಲ್ಲಿ ಬೀಡು ಬಿಟ್ಟಿದ್ದ ಕುರಿಗಳ ಹಿಂಡಿನ ಮೇಲೆ ಚಿರತೆಗಳು ದಾಳಿ ಮಾಡಿ 21 ಕುರಿಗಳನ್ನು ಬಲಿ ತೆಗೆದುಕೊಂಡ ದಾರುಣ ಘಟನೆ ಮಂಗಳವಾರ ತಡರಾತ್ರಿ ನಡೆದಿದೆ. ಈ ಘಟನೆಯಿಂದಾಗಿ ಹೊಳೆಸಿರಿಗೆರೆ, ಯಲವಟ್ಟಿ ಸೇರಿದಂತೆ ಸುತ್ತಮುತ್ತಲಿನ ಜನ ಭಯಭೀತಿ ಗೊಂಡಿದ್ದಾರೆ.

ಹೊಳೆಸಿರಿಗೆರೆ ಗ್ರಾಮದ ಬೀರಪ್ಪ ಅವರಿಗೆ ಸೇರಿದ ಅಡಿಕೆ ತೋಟದಲ್ಲಿ ಚಿಕ್ಕೋಡಿ ತಾಲ್ಲೂಕಿನ ಸದಲಗ ಗ್ರಾಮದ ಬಿಳಿಕುರಿ ಸೋಮಣ್ಣ ತಮ್ಮ 159 ಕುರಿಗಳ ಹಿಂಡಿನೊಂದಿಗೆ ಬಿಡಾರ ಹಾಕಿದ್ದರು. ಚಿರತೆಗಳು ಕುರಿಗಳ ಮೇಲೆ ದಾಳಿ ಮಾಡಿದ ಸಂದರ್ಭದಲ್ಲಿ ಕುರಿಗಳು ವದರಿದವು. ನಿದ್ರೆಯಲ್ಲಿದ್ದ ನಮಗೆ ಎಚ್ಚರವಾಯಿತು. ನಾವು ಬ್ಯಾಟರಿಗಳನ್ನು ಹಾಕಿದ ತಕ್ಷಣ ಚಿರತೆಗಳು ಓಡಿ ಹೋದವು. ಅಷ್ಟೊತ್ತಿಗೆ 21 ಕುರಿಗಳು ಬಲಿಯಾಗಿ, 9 ಕುರಿಗಳು ಗಾಯಗೊಂಡಿದ್ದವು ಎಂದು ಕುರಿ ಹಿಂಡಿನ ಮಾಲೀಕ ಸೋಮಣ್ಣ ಭಾವುಕರಾಗಿ 'ಜನತಾವಾಣಿ'ಗೆ ತಿಳಿಸಿದರು.



ಬೆಳಿಗ್ಗೆ ವಿಷಯ ತಿಳಿಯುತ್ತಿದ್ದಂತೆಯೇ ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್, ಬಿಜೆಪಿ ಮುಖಂಡ ಚಂದ್ರಶೇಖರ್ ಪೂಜಾರ್, ಜಿಪಂ ಮಾಜಿ ಸದಸ್ಯ ಬಿ.ಎಂ. ವಾಗೀಶ್ ಸ್ವಾಮಿ ಹಾಗೂ ಹೊಳೆಸಿರಿಗೆರೆ, ಯಲವಟ್ಟಿ, ಕೆ.ಎನ್. ಹಳ್ಳಿ, ಕಮಲಾಪುರ, ಭಾನುವಳ್ಳಿ ಮತ್ತಿತರೆ ಗ್ರಾಮಗಳಿಂದ ನೂರಾರು ಜನ ಸ್ಥಳಕ್ಕೆ ಆಗಮಿಸಿ ಜೀವ ಕಳೆದುಕೊಂಡು ಬಿದ್ದಿದ್ದ ಕುರಿಗಳನ್ನು ನೋಡಿ ಮರುಗಿದರು.

ಈ ವೇಳೆ ಮಾತನಾಡಿದ ಉಪ ವಿಭಾಗಾಧಿಕಾರಿ ಸಂತೋಷ್ ಕುಮಾರ್, ಅರಣ್ಯ ಇಲಾಖೆ, ಕಂದಾಯ ಇಲಾಖೆ ಮತ್ತು ಪಶುಸಂಗೋಪನೆ ಇಲಾಖೆಯಿಂದ ಜಂಟೀ ಸಮೀಕ್ಷೆ ನಡೆಸಿ ಸರ್ಕಾರದ ಮಾರ್ಗ ಸೂಚಿಯಂತೆ ಪರಿಹಾರ ನೀಡಲಾ ಗುವುದೆಂದು ಭರವಸೆ ನೀಡಿ–ದರು.ತಹಶೀಲ್ದಾರ್ ಗುರುಬಸವರಾಜ್, ಉಪ ತಹಸೀಲ್ದಾರ್ ಆರ್. ರವಿ ಸೇರಿದಂತೆ ಅರಣ್ಯ ಇಲಾಖೆ ಮತ್ತು ಪಶು ಇಲಾಖೆಯ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಎಸಿ ಕಛೇರಿಯ ರಾಘವೇಂದ್ರ, ಹೇಮಂತ್ ಕುಮಾರ್, ಪ್ರಭಾರ ಕಂದಾಯ ನಿರೀಕ್ಷಕ ಅಣ್ಣಪ್ಪ. ಗ್ರಾಮಲೆಕ್ಕಾಧಿಕಾರಿ ಷರೀಫ್ ಈ ಸಂದರ್ಭದಲ್ಲಿ ಹಾಜರಿದ್ದರು.

ಶಾಸಕ ಹರೀಶ್ ಭೇಟಿ: ಬೆಂಗಳೂರಿನಲ್ಲಿದ್ದ ಶಾಸಕ ಬಿ.ಪಿ. ಹರೀಶ್, ಚಿರತೆ ದಾಳಿಯಿಂದ 20 ಕ್ಕೂ ಹೆಚ್ಚು ಕುರಿಗಳ ಮಾರಣ ಹೋಮ ನಡೆದಿರುವ ವಿಷಯ ತಿಳಿದ ತಕ್ಷಣ ಅಲ್ಲಿಂದ ಹೊರಟು ಸಂಜೆ ವೇಳೆಗೆ ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಕುರಿ ಹಿಂಡಿನ ಮಾಲೀಕರಿಗೆ ಸಾಂತ್ವನ ಹೇಳಿ ಸರ್ಕಾರದಿಂದ ಪರಿಹಾರ ಕೊಡಿಸುವ ಭರವಸೆ ನೀಡಿ–ದರು. ಈ ಭಾಗದಲ್ಲಿ ಚಿರತೆಗಳು ಇರುವ ಬಗ್ಗೆ ಈ ಹಿಂದೆಯೇ ಪತ್ರಿಕೆಗಳಲ್ಲಿ ವರದಿ ಆಗಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವ ಬಗ್ಗೆ ಬೇಸರ ವ್ಯಕ್ತಪಡಿಸಿದ ಶಾಸಕ ಹರೀಶ್, ಆದಷ್ಟು ಬೇಗ ಚಿರತೆಗಳನ್ನು ಸೆರೆ ಹಿಡಿಯುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಡಿಎಫ್‌ಒ ಹರ್ಷವರ್ಧನ್, ಎಸಿಎಫ್ ಭಾಗ್ಯಲಕ್ಷ್ಮಿ, ವಲಯ ಅರಣ್ಯಾಧಿಕಾರಿ ಡಿ.ಎಂ. ಷಣ್ಮುಖ, ಉಪ ವಲಯ ಅರಣ್ಯಾಧಿಕಾರಿ ಹಸನ್ ಬಾಷಾ, ಹೊಳೆಸಿರಿಗೆರೆ ಪಶುವೈದ್ಯಾಧಿಕಾರಿ ಬುಡೇನ್ ಸಾಬ್, ಮುಖಂಡರಾದ ಯಲವಟ್ಟಿ ಚನ್ನಬಸಪ್ಪ, ಹೊಳೆಸಿರಿಗೆರೆ ಶೇಖರಪ್ಪ, ಹನುಮಂತಪ್ಪ, ಮಾಳಗಿ ಪಾಲಾಕ್ಷಪ್ಪ, ಯರೇಸೀಮೆ ಈರಪ್ಪ, ಭಜನಿ ಮಂಜಪ್ಪ ಉಪಸ್ಥಿತರಿದ್ದರು.

## ಬಾಳೆಬರೆ ಘಾಟಿಯಲ್ಲಿ ಭಾರಿ ವಾಹನ ಸಂಚಾರ ತಾತ್ಕಾಲಿಕ ನಿಷೇಧ

**ಶಿವಮೊಗ್ಗ :** ತೀರ್ಥಹಳ್ಳಿ ಕುಂದಾಪುರ ರಾಜ್ಯ ಹೆದ್ದಾರಿ 52 ಬಾಳೆಬರೆ ಘಾಟ್ ಸರಪಳಿ ಹೇರ್‌ಪಿನ್ ತಿರುವಿನಲ್ಲಿ ಮಣ್ಣಿನ ಕುಸಿತ ಉಂಟಾಗಿದ್ದು, ಮಳೆ ಚುರುಕುಗೊಂಡಿದ್ದು ಮತ್ತೆ ಮಣ್ಣು ಕುಸಿಯುವ ಸಂಭವವಿದ್ದು, ಸುರಕ್ಷಿತಾ ದೃಷ್ಟಿಯಿಂದ (ಮಾಸ್ತಿಕಟ್ಟೆಯಿಂದ ಹೊಸಂಗಡಿಯವರೆಗೆ) ತಾತ್ಕಾಲಿಕವಾಗಿ ಮಳೆಗಾಲ ಮುಗಿಯುವವರೆಗೆ ಭಾರಿ ವಾಹನಗಳ ಸಂಚಾರವನ್ನು ನಿಷೇಧಗೊಳಿಸಿ ಪರ್ಯಾಯ ಮಾರ್ಗದಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆದೇಶ ನೀಡಿ–ದ್ದಾರೆ. ತೀರ್ಥಹಳ್ಳಿಯಿಂದ ರಾವೆ– ಕಾನಗೋಡು– ಮಾಸ್ತಿಕಟ್ಟೆ–ಹುಲಿಕಲ್ ಘಾಟ್– ಹೊಸಂಗಡಿ –ಸಿದ್ದಾಪುರ ಮೂಲಕ ಕುಂದಾಪುರದ ಕಡೆಗೆ ಹೋಗುವ ಭಾರಿ ವಾಹನಗಳು ತೀರ್ಥಹಳ್ಳಿ–ರಾವೆ–ಕಾನುಗೋಡು–ನಗರ–ಕೊಲ್ಲೂರು–ಕುಂದಾಪುರ ರಸ್ತೆ ಮೂಲಕ ಸಂಚರಿಸುವುದು.

ನಗರ ಸಿದ್ದಾಪುರ ರಾಜ್ಯ ಹೆದ್ದಾರಿ–278 ರಸ್ತೆ ತೀರ್ಥಹಳ್ಳಿಯಿಂದ ಯಡೂರು–ಸುಳಗೋಡು–ಮಾಸ್ತಿಕಟ್ಟೆ–ಹುಲಿಕಲ್ ಘಾಟ್–ಹೊಸಂಗಡಿ–ಸಿದ್ದಾಪುರ ಮೂಲಕ ಕುಂದಾಪುರದ ಕಡೆಗೆ ಹೋಗುವ ಭಾರಿ ವಾಹನಗಳು ತೀರ್ಥಹಳ್ಳಿ–ಯಡೂರು–ಮಾಸ್ತಿಕಟ್ಟೆ–ಕಾನುಗೋಡು–ನಗರ–ಕೊಲ್ಲೂರು–ಕುಂದಾಪುರ ರಸ್ತೆ ಮೂಲಕ ಸಂಚರಿಸುವುದು.

## ದಿನಗೂಲಿ ನೌಕರರಿಗೆ ಸೌಲಭ್ಯಕ್ಕೆ ಸಂಬಂಧ ಪಟ್ಟ ಸಚಿವರೊಂದಿಗೆ ಚರ್ಚಿಸುವೆ : ಬಿ.ದೇವೇಂದ್ರಪ್ಪ



**ಜಗಳೂರು:** ತಾಲೂಕಿನ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ದಿನಗೂಲಿ ನೌಕರರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ಸಂಬಂಧಪಟ್ಟ ಸಚಿವರ ಜೊತೆ ಚರ್ಚಿಸುತ್ತೇನೆ ಎಂದು ಶಾಸಕ ಬಿ.ದೇವೇಂದ್ರಪ್ಪ ಭರವಸೆ ನೀಡಿ–ದರು.

ಪಟ್ಟಣದ ಶಾಸಕರ ನಿವಾಸದಲ್ಲಿ ತಾಲೂಕಿನ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ದಿನಗೂಲಿ ಕ್ಷೇಮಾಭಿವೃದ್ಧಿ ಸಂಘದ ನೌಕರರಿಗೆ ಸೌಲಭ್ಯಕ್ಕಾಗಿ ಇದೇ ಆ. 12 ರಿಂದ ಆರಂಭವಾಗಲಿರುವ ವಿಧಾನ ಸಭೆ ಅಧಿವೇಶನದಲ್ಲಿ ಚರ್ಚಿಸಿ ಸರಕಾರದ ಮತ್ತು ಸಂಬಂಧಪಟ್ಟ ಸಚಿವರ ಗಮನ ಸೆಳೆಯಬೇಕು ಎಂಬ ನೀಡಿದ ಮನವಿ ಸ್ವೀಕರಿಸಿ ಅವರು ಮಾತನಾಡಿದರು.

ಈ ವೇಳೆ ಮಾತನಾಡಿದ ಕಾರ್ಯದರ್ಶಿ ಅಂಜಿನಪ್ಪ ಮಾತನಾಡಿ 2012ರ ಅಧಿಸೂಚನೆಯಂತೆ ಪೂರ್ಣ ಪ್ರಮಾಣದ ಸೌಲಭ್ಯ ಜಾರಿಗೊಳಿಸಲು ಸರಕಾರದ ಮಟ್ಟದಲ್ಲಿ ನಮ್ಮ ಪರವಾಗಿ ಧ್ವನಿ ಎತ್ತಬೇಕು. ಅಲ್ಲದೇ ತಾಲೂಕು ವ್ಯಾಪ್ತಿಯಲ್ಲಿ ಸರಕಾರಿ ಇಲಾಖೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ದಿನಗೂಲಿ ನೌಕರರಿಗೆ ಹೋರಾಟದ ಪ್ರಯತ್ನದಿಂದ ಕನಿಷ್ಟ ಮೂಲ ವೇತನ ಹಾಗೂ ಶೇ.75 ರಷ್ಟು ಮನೆ ಬಾಡಿಗೆ ಭತ್ಯೆ ಹಾಗೂ ಶೇ.75 ಜೀವನ ನಿರ್ವಹಣೆ ಭತ್ಯೆ ಸೌಲಭ್ಯ ನೀಡಲಾಗಿದೆ. 2012ರಲ್ಲಿನ ಅಧಿನಿಯಮ ಶಾಸಕ ಹಲವು ಸೌಲಭ್ಯಗಳನ್ನು ಕಡಿತಗೊಳಿಸಿದೆ. 30–40 ವರ್ಷಗಳಿಂದ ಸೇವೆ ಸಲ್ಲಿಸಿ ನಿವೃತ್ತಿ ಹೊಂದುವ ನೌಕರರಿಗೆ ಪಿಂಚಣಿ ಯೋಜನೆ ಜಾರಿಯಾಗಿಲ್ಲ ಎಂದು ಶಾಸಕರಿಗೆ ಮನವರಿಕೆ ಮಾಡಿಕೊಟ್ಟರು.

ಈ ವೇಳೆ ರಾಜ್ಯ ದಿನಗೂಲಿ ಕ್ಷೇಮಾಭಿವೃದ್ಧಿ ಸಂಘದ ನೌಕರರ ಅಧ್ಯಕ್ಷ ಕೆಳಗೋಟೆ ಬಸವರಾಜ್. ತಾಲ್ಲೂಕು ಅಧ್ಯಕ್ಷ ಬೋರಯ್ಯ, ಗೌರವ ಅಧ್ಯಕ್ಷ ಮಲ್ಲಿಕಾರ್ಜುನ್, ರಂಗಪ್ಪ, ಶಾಂತಕುಮಾರ, ಈರಪ್ಪ, ರಾಜಪ್ಪ, ಸೂರಲಿಂಗಪ್ಪ, ಸಣ್ಣಭೀಮಪ್ಪ, ರಾಜಪ್ಪ, ಸೇರಿದಂತೆ ಅನೇಕರು ಇದ್ದರು.

## ಆಗಸ್ಟ್ 20 ರಂದು ಡಿ.ದೇವರಾಜು ಅರಸು ಅವರ 110 ನೇ ಜಯಂತಿ ಆಚರಣೆಗೆ ಪೂರ್ವಭಾವಿ ಸಿದ್ಧತೆಗೆ ಸೂಚನೆ



ದಾವಣಗೆರೆ : ದೇವರಾಜು ಅರಸು ಅವರ 110ನೇ ಜಯಂತಿಯನ್ನು ಆಗಸ್ಟ್ 20 ರಂದು ಅರ್ಥಪೂರ್ಣ ಆಚರಣೆಗೆ ಸಿದ್ಧತೆ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ ಸೂಚನೆ ನೀಡಿದರು.

ಗುರುವಾರ(ಆಗಸ್ಟ್ 7) ಡಿ. ದೇವರಾಜು ಅರಸು ಅವರ 110 ನೇ ಜಯಂತಿ ಆಚರಣೆ ಮಾಡುವ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಯಂತಿಯಂದು ಬಿ.ಎಸ್.ಎನ್.ಎಲ್. ಕಚೇರಿ ಮುಂಭಾಗದಲ್ಲಿರುವ ಡಿ.ದೇವರಾಜ ಅರಸುರವರ ಪುತ್ಥಳಿಗೆ ಮಾಲಾರ್ಪಣೆ ಮತ್ತು ಪೂಜಾ ಕಾರ್ಯಕ್ರಮವನ್ನು ಮುಗಿಸಿ, ನಂತರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ತುಂಗಾಭದ್ರ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಸಲಾಗುತ್ತದೆ. ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಕ್ವಿಜ್ ಏರ್ಪಡಿಸಿ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಗುವುದು ಎಂದರು. ಡಿ.ದೇವರಾಜು ಅರಸು ಅವರ ಜಯಂತಿಯಲ್ಲಿ ಇಂದಿನ ವಿದ್ಯಾರ್ಥಿಗಳಿಗೆ ಅವರ ತತ್ವ, ಸಿದ್ಧಾಂತದ ಜೊತೆಗೆ ಅವರ ಆಳ್ವಿಕೆ ಕಾಲದಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳ ತಿಳಿಸಲು ಉಪನ್ಯಾಸ ಏರ್ಪಡಿಸಲಾಗುತ್ತದೆ.

ಜಯಂತಿ ಪ್ರಯುಕ್ತ ಆಗಸ್ಟ್ 20ರಂದು ಎಲ್ಲಾ ಸರಕಾರಿ ಶಾಲಾ, ಕಾಲೇಜು, ಕಚೇರಿಗಳಲ್ಲಿ ಅರಸು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ಜಯಂತಿ ಕಾರ್ಯಕ್ರಮವನ್ನು ಎಲ್ಲೆಡೆಯೂ ಆಚರಿಸಬೇಕು ಎಂದು ತಿಳಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ಅರಸು ಕುರಿತಂತೆ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲು ಮತ್ತು ಅರಸು ಕುರಿತ ಮಾಹಿತಿಯುಳ್ಳ ಕಿರುಪುಸ್ತಕಗಳನ್ನು ಸಂಗ್ರಹಿಸಿ ನೀಡಲು ಮತ್ತು ಸ್ಥಳದಲ್ಲಿ ಅಚ್ಚುಕಟ್ಟಾಗಿ ಎಲ್ಲಾ ವ್ಯವಸ್ಥೆ ಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು.

ಜಿ.ಪಂ ಉಪಕಾರ್ಯದರ್ಶಿ ಮಮತಾ ಹೊಸಗೌಡ್ರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ನಾಗರಾಜ, ಡಿಡಿಪಿಐ ಕೊಟ್ರೇಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ, ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಕ್ರೀಡಾ ಮನೋಭಾವದೊಂದಿಗೆ ಭಾಗವಹಿಸಬೇಕು : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು**–ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಾದ ಕ್ರೀಡೆಯಲ್ಲಿ ಸ್ಫೂರ್ತಿಯಿಂದ ಕ್ರೀಡಾ ಮನೋಭಾವದೊಂದಿಗೆ ಭಾಗವಹಿಸಬೇಕು ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಕರೆನೀಡಿದರು.

ಅವರು ಇಂದು ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ತಾ.ಪಂ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಇಲಾಖೆ ಪ್ರಕೃತಿ ಅಕಾಡೆಮಿ, ಹಿರಿಯ ಪ್ರಾಥಮಿಕ ಶಾಲೆ, ಗವನಹಳ್ಳಿ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಕಸಬಾ–2 ವಲಯ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ 2025–26 ನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆ, ಸಾಂಸ್ಕೃತಿಕ, ಭಾವಗೀತೆ, ಭಕ್ತಿಗೀತೆ ಮುಂತಾದ ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಮೂಲಕ ದೈಹಿಕ, ಮನಸ್ಸು, ಹೃದಯ, ಮೆದುಳು ಚುರುಕಾಗುತ್ತದೆ. ಈ ನಿಟ್ಟಿನಲ್ಲಿ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಬೇಕು ಎಂದರು.

ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಸಂಸ್ಕಾರ



ಕಲಿಸುವಂತಾದಾಗ ಮಾತ್ರ ದೇಶ, ನಾಡು–ನುಡಿ, ನೆಲ–ಜಲ ಈ ಬಗ್ಗೆ ವಿದ್ಯಾರ್ಥಿಗಳಲ್ಲಿ ತಿಳುವಳಿಕೆ ಮೂಡಿಸುವುದು ಅಗತ್ಯ ಎಂದರು.

ಎಲ್ಲಾ ವರ್ಗದ ವಿದ್ಯಾರ್ಥಿಗಳಲ್ಲಿ ಮೊದಲು ದೇಶಪ್ರೇಮ ಬೆಳೆಸಬೇಕು. ದೇಶ ಮತ್ತು ಧರ್ಮ ಇದ್ದರೆ ನಾವು ಉಳಿಯುತ್ತೇವೆ. ಈ ಬಗ್ಗೆ ಪ್ರಾಥಮಿಕ ಹಂತದಲ್ಲೇ ವಿದ್ಯಾರ್ಥಿಗಳಿಗೆ ಕಲಿಸುವ ಪ್ರಯತ್ನವನ್ನು ಶಿಕ್ಷಕರು ಮಾಡಬೇಕಾಗಿದೆ ಎಂದು ಹೇಳಿದರು.

ನ್ಯಾಯ ನಿರ್ಣಾಯಕರು ವಿಜೇತರಾದ ತಂಡಗಳಿಗೆ ಪ್ರಾಮಾಣಿಕವಾಗಿ ತೀರ್ಪು ನೀಡುವ ಮೂಲಕ ಕ್ರೀಡಾಪಟುಗಳಿಗೆ ಉತ್ತೇಜನ ನೀಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ, ನಗರಸಭೆ ಸದಸ್ಯ ಪರಮೇಶ್ ರಾಜ್ ಅರಸ್, ಪ್ರಕೃತಿ ಅಕಾಡೆಮಿಯ ಅಧ್ಯಕ್ಷರಾದ ಹೆಚ್.ಜಿ ನಾಗೇಶ್, ದಾನಿಗಳಾದ ನೀಲಕಂಠಾಚಾರಿ, ಜಿಲ್ಲಾದೈಹಿಕ ಪರಿವೀಕ್ಷಕರು ಪಾಲಾಕ್ಷಪ್ಪ, ಮಹೇಶ್ವರಪ್ಪ, ಕಿರಣ್ ಕುಮಾರ್, ಪರಮೇಶ್, ಚಂದ್ರಕಾಂತ್, ವಿಲ್ಮಾ, ದಿನೇಶ್, ಶಿವಪ್ಪ, ಮೋಹನಾಕ್ಷಿ, ಕೃಷ್ಣರಾಜ್ ಅರಸ್, ಜಾನಕಮ್ಮ, ಉಪಸ್ಥಿತರಿದ್ದರು. ಮೊದಲಿಗೆ ಶಿಕ್ಷಕಿ ರೇಣುಕ ಸ್ವಾಗತಿಸಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಶಾಶ್ವತವಾದ ಪ್ರೀತಿ ನಿಮ್ಮ ಪ್ರೀತಿಪಾತ್ರರಿಗೆ ಒಂದು ಸೆಲೆಯಾಗಿದೆ.ನೀವು ಕೆಲಸ ಮಾಡುವ ಬಗ್ಗೆ ಖಚಿತವಾಗಿಲ್ಲದಿದ್ದರೆ ಯಾವ ಭರವಸೆಯನ್ನೂ ನೀಡಬೇಡಿ.

### ವೃಷಭ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ.

### ಮಿಥುನ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ಸ್ನೇಹಿತರು ಮತ್ತು ಹತ್ತಿರದವರು ನಿಮಗೆ ತಮ್ಮ ಸಹಾಯ ಹಸ್ತ ಚಾಚುತ್ತಾರೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ದ್ವೇಷಿಸಿದರೂ ನೀವು ಪ್ರೀತಿ ತೋರಿಸಬೇಕು. ಸಹೋದ್ಯೋಗಿಗಳನ್ನು ನಿರ್ವಹಿಸುವಾಗ ಜಾಣತನದ ಅಗತ್ಯವಿದೆ. ಯಾವುದೇ ಹೊಸ ಕೆಲಸವನ್ನು ಪ್ರಾರಂಭಿಸುವ ಮೊದಲು ಅದರ ಬಗ್ಗೆ ಅನುಭವಿ ಜನರೊಂದಿಗೆ ಮಾತನಾಡಬೇಕು

### ಕರ್ಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ. ನೀವು ಹಾಗೂ ನಿಮ್ಮ ಪ್ರೀತಿಪಾತ್ರರು ಒಬ್ಬರೊನ್ನಬ್ಬರು ಚೆನ್ನಾಗಿ ಅರ್ಥಮಾಡಿಕೊಳ್ಳಲು ಸಮಯ ವ್ಯಯಿಸಬೇಕು.

### ಸಿಂಹ ರಾಶಿ

ನಿಮ್ಮ ಪೋಷಕರನ್ನು ನಿರ್ಲಕ್ಷಿಸುವುದು ನಿಮ್ಮ ಭವಿಷ್ಯವನ್ನು ಕೆಡಿಸಬಹುದು. ಉತ್ತಮ ಸಮಯಗಳು ತುಂಬಾ ಕಾಲ ಇರುವುದಿಲ್ಲ. ಮನುಷ್ಯನ ಕಾರ್ಯಗಳು ಶಬ್ದದ ಅಲೆಗಳಿದ್ದ ಹಾಗೆ. ಇವಗಳು ಒಂದು ಮಧುರವಾದ ಅಥವಾ ಒಂದು ಕರ್ಕಶವಾದ ಶಬ್ದವನ್ನು ಉತ್ಪಾದಿಸಲು ಮತ್ತೆ ಬರುತ್ತವೆ. ಅವುಗಳು ಬೀಜಗಳಿದ್ದ ಹಾಗೆ –ನಾವು ಬಿತ್ತಿದ್ದನ್ನು ಕೊಯ್ಯುತ್ತವೆ.

### ಕನ್ಯಾ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ಸರೋವರದಲ್ಲಿನ ಸೊಗಸಾದ ಮೀನನ್ನು ಸಂಧಿಸುವ ಅವಕಾಶಗಳು ಸಾಧ್ಯತೆಗಳು ಇಂದು ಹೆಚ್ಚಿವೆ. ಹೊಸ ಉದ್ಯಮಗಳು ಆಕರ್ಷಕವಾಗಿರುತ್ತವೆ ಮತ್ತು ಒಳ್ಳೆಯ ಆದಾಯದ ಭರವಸೆ ಕಾಣಿಸುತ್ತದೆ.

### ತುಲಾ ರಾಶಿ

ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು–ಸಮಯದ ಜೊತೆ ನಿಮ್ಮ ಆಲೆಲೋಚನೆಗಳನ್ನು ಬದಲಾಯಿಸಿಕೊಳ್ಳಿ–ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ– ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸುತ್ತದೆ ಮತ್ತು ನಿಮ್ಮ ಮನಸ್ಸನ್ನು ಪಕ್ವಗೊಳಿಸುತ್ತದೆ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ.

### ವೃಶ್ಚಿಕ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ–ನಿಮ್ಮ ಹಠಾತ್ ಟೀಕೆಗಳಿಗೆ ನೀವು ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು. ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ.

### ಧನು ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯನೀಡುತ್ತದೆ.

### ಮಕರ ರಾಶಿ

ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ. ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ.

### ಕುಂಭ ರಾಶಿ

ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ಮೀನ ರಾಶಿ

ಸ್ವತಃ ಔಷಧಿ ತೆಗೆದುಕೊಳ್ಳುವುದು ಔಷಧ ಅವಲಂಬನೆಯನ್ನು ಉಂಟುಮಾಡಬಹುದು. ಯಾವುದೇ ಔಷಧ ತೆಗೆದುಕೊಳ್ಳುವ ಮೊದಲು ವೈದ್ಯರ ಸಲಹೆ ಪಡೆಯಿರಿ. ಇಲ್ಲದಿದ್ದಲ್ಲಿ ಔಷಧ ಅವಲಂಬನೆಯ ಸಾಧ್ಯತೆ ಅಧಿಕವಾಗಿದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

# ಗೀತೋತ್ಸವದ ಸರ್ವಾಧ್ಯಕ್ಷರಾದ ನಗರ ಶ್ರೀನಿವಾಸ ಉಡುಪರಿಗೆ ಅಭಿನಂದನೆ



**ದಾವಣಗೆರೆ:** ಮೈಸೂರಿನ ಕಲಾ ಮಂದಿರದಲ್ಲಿ ಇತ್ತೀಚೆಗೆ 2 ದಿನಗಳಲ್ಲಿ ನಡೆದ ಕರ್ನಾಟಕ ಸುಗಮ ಸಂಗೀತ ಪರಿಷತ್‌ನ ರಾಜ್ಯ ಮಟ್ಟದ ಗೀತೋತ್ಸವದ ಸರ್ವಾಧ್ಯಕ್ಷರಾದ ಹಿರಿಯ ಗಾಯಕರಾದ ನಗರ ಶ್ರೀನಿವಾಸ ಉಡುಪರಿಗೆ ಕರ್ನಾಟಕ ಸುಗಮ ಸಂಗೀತ ಪರಿಷತ್ ದಾವಣಗೆರೆ ಜಿಲ್ಲಾ ಘಟಕದವತಿಯಿಂದ ಅಭಿಮಾನದಿಂದ ಅಭಿನಂದಿಸಿ ಬೃಹತ್ ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕರ್ನಾಟಕ ಸುಗಮ ಸಂಗೀತ ಪರಿಷತ್‌ನ ರಾಜ್ಯಾಧ್ಯಕ್ಷರಾದ ವೈ.ಕೆ.ಮುದ್ದುಕೃಷ್ಣ, ಕಾರ್ಯಾಧ್ಯಕ್ಷರಾದ ಡಾ. ಕಿಕ್ಕೇರಿ ಕೃಷ್ಣಮೂರ್ತಿ, ಮೈಸೂರು ಜಿಲ್ಲಾ ಘಟಕದ ಡಾ. ನಾಗರಾಜ್ ವಿ.ಬೈರಿ, ದಾವಣಗೆರೆ ಜಿಲ್ಲಾ ಘಟಕದ ಅಧ್ಯಕ್ಷರಾದ ಸಾಲಿಗ್ರಾಮ ಗಣೇಶ್ ಶೆಣೈ,

ಹರಿಹರ ತಾಲ್ಲೂಕಿನ ಅಧ್ಯಕ್ಷರಾದ ವಿದುಷಿ ಶ್ರೀಮತಿ ಮಾಧುರಿ ಶೇಷಗಿರಿ, ವಿದುಷಿ ಶ್ರೀಮತಿ ಸಂಗೀತ ರಾಘವೇಂದ್ರ, ಪರಿಷತ್ತಿನ ಸದಸ್ಯರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಶ್ರೀಮತಿ ಶಿಲ್ಪಾ ಉಮೇಶ್ ದಂಪತಿಯವರು ಮುಂತಾದವರು ಉಪಸ್ಥಿತರಿದ್ದರು.

# ಶಾಲಾ ಅಭಿವೃದ್ಧಿ ಕಾಮಗಾರಿ ಹಸ್ತಾಂತರ



**ದಾವಣಗೆರೆ:** ಕೇರ್ ಟ್ರಸ್ಟ್ ವತಿಯಿಂದ ಜಿಲ್ಲೆಯ ಹರಿಹರ ತಾಲ್ಲೂಕಿನ ಗುತ್ತೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ 24 ಲಕ್ಷ ವೆಚ್ಚದಲ್ಲಿ ನಿರ್ಮಿಸಿರುವ ನಾಲ್ಕು ತರಗತಿಗಳ ಕೊಠಡಿಗಳು ಸೇರಿ ನಡೆಸಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಆ.9 ರಂದು ಶಾಲೆಗೆ ಹಸ್ತಾಂತರಿಸುವ ಕಾರ್ಯಕ್ರಮ ಆಯೋಜಿಸಲಾಗಿದೆ.

ಟ್ರಸ್ಟ್ ನಿಂದ ನಾಲ್ಕು ತರಗತಿ ಕೊಠಡಿಗಳು ಮತ್ತು ಅಡಿಗೆಮನೆ ಬ್ಲಾಕ್‌ಗಾಗಿ ಹೊಸ ಛಾವಣಿ, ಗೋಡೆ ಮತ್ತು ಮೇಲ್ಛಾವಣಿ ಕಾಮಗಾರಿ, 8 ಶೌಚಾಲಯಗಳು ಮತ್ತು 6 ಯುರಿನಲ್‌ಗಳನ್ನು ಹೊಂದಿರುವ ಹೊಸ ಶೌಚಾಲಯ ಬ್ಲಾಕ್, ಸ್ಟೈನ್‌ಲೆಸ್ ಸ್ಟೀಲ್‌ನಿಂದ ತಯಾರಿಸಿದ 10 ಬೇಸನ್ ಹ್ಯಾಂಡ್ ವಾಶ್, ಕಟ್ಟಡದ ಸಂಪೂರ್ಣ ಬಣ್ಣ ಹಚ್ಚುವಿಕೆ, ಅಡಿಗೆಮನೆಗಾಗಿ ಮೂಲ ಪೈಪ್‌ಲೈನ್ ಕಾರ್ಯ ನಡೆಸಲಾಗಿದ್ದು, ಅಂದು ಬೆಳಿಗ್ಗೆ 10 ಗಂಟೆಗೆ ಶಾಲೆಗೆ ಹಸ್ತಾಂತರಿಸುವ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಟ್ರಸ್ಟ್ ತಿಳಿಸಿದೆ.

# ಟೀ ಪುಡಿಗೆ ಹೆಚ್ಚಿನ ದರ ಪಡೆದು ಸೇವಾ ನ್ಯೂನ್ಯತೆ : ಪರಿಹಾರ ನೀಡಲು ಸೂಚನೆ

**ಶಿವಮೊಗ್ಗ:** ಟೀಪುಡಿಗೆ ಹೆಚ್ಚಿನ ದರವನ್ನು ಪಡೆದು ಸಾಗಿಸಿದ ಎದುರುದಾರ ಸಂಸ್ಥೆಗಳ ವಿರುದ್ದ ದಾಖಲಿಸಿದ ದೂರನ್ನು ಆಲಿಸಿದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಅರ್ಜಿದಾರರಿಗೆ ಸೂಕ್ತ ಪರಿಹಾರ ನೀಡುವಂತೆ ಆದೇಶಿಸಿದೆ.

ಮೆಹಬೂಬ್ ಮುದಸಿರ್ ಖಾನ್ ಸಿ.ಎ @ ಎಂ.ಎಂ.ಖಾನ್ ಶಿವಮೊಗ್ಗ ಇವರು ಸಿಇಓ ಫ್ಲಿಪ್‌ಕಾರ್ಟ್ ಇಂಟರ್‌ನೆಟ್ ಪ್ರೈ.ಲಿ, ಬೆಂಗಳೂರು, ಹಿರಿಯ ವ್ಯವಸ್ಥಾಪಕರು ಫ್ಲಿಪ್‌ಕಾರ್ಟ್ ಇಂಟರ್‌ನೆಟ್ ಪ್ರೈ.ಲಿ, ಬೆಂಗಳೂರು ಹಾಗೂ ವಿಜಿ ಫುಡ್ ಮತ್ತು ಕೇಟರ್ಸ್ ನವದೆಹಲಿ ಇವರ ವಿರುದ್ದ ದೂರನ್ನು ಸಲ್ಲಿಸಿ, ದೂರುದಾರರು ದಿ: 04-07-2024 ರಂದು 01 ಕೆ ಜಿ ತಾಜ್ ಮಹಲ್ ಟೀಪುಡಿಯನ್ನು ಎದುರುದಾರರಿಂದ ತರಿಸಲು ಆನ್‌ಲೈನ್‌ನಲ್ಲಿ ಬುಕ್ ಮಾಡಿದ್ದು, ಅದರ ಬೆಲೆ ರೂ.849 ಮತ್ತು ಸಾಗಣೆ ವೆಚ್ಚವಾಗಿ ರೂ.41 ಗಳನ್ನು ಒಟ್ಟು ರೂ.890 ಗಳನ್ನು ಎದುರುದಾರರಿಂದ ಪಡೆದು 01 ಕೆ ಜಿ ಟೀಪುಡಿಯ ಪೊಟ್ಟಣವನ್ನು ಕಳುಹಿಸಿರುತ್ತಾರೆ. ಆದರೆ ಟೀಪುಡಿಯ ಪೊಟ್ಟಣದ ಮೇಲೆ ನಮೂದಿಸಿರುವ ಗರಿಷ್ಟ ಮಾರಾಟ ಬೆಲೆ ರೂ.825/- ಗಳಾಗಿದ್ದು ದೂರುದಾರರಿಂದ ರೂ.849 ಗಳನ್ನು ಪಡೆದಿರುತ್ತಾರೆ.

ಈ ವಿಷಯವನ್ನು ಎದುರುದಾರರಿಗೆ ಇ-ಮೇಲ್ ಮೂಲಕ ತಿಳಿಸಿದ್ದು 1 ಮತ್ತು 2ನೇ ಎದುರುದಾರರು ಸದರಿ ಸಮಸ್ಯೆಯನ್ನು ಬಗೆಹರಿಸದ ಕಾರಣ ಎದುರುದಾರರಿಗೆ ಗರಿಷ್ಟ ಮಾರಾಟ ಬೆಲೆಗಿಂತ ಹೆಚ್ಚಿನ ಮೊತ್ತವನ್ನು ಪಡೆದಿದ್ದು ಉಳಿದ ಮೊತ್ತ ಹಿಂದಿರುಗಿಸಲು ತಿಳಿಸಿ ಪತ್ರ ಬರೆದಿರುತ್ತಾರೆ. ಈ ಪತ್ರಗಳು ಎದುರುದಾರರಿಗೆ ತಲುಪಿದ್ದರೂ ಸಹ ಯಾವುದೇ ಉತ್ತರವನ್ನು ನೀಡಿರುವುದಿಲ್ಲ. ಹಾಗೂ ಸಮಸ್ಯೆಯನ್ನು ಬಗೆಹರಿಸದೇ ಸೇವಾನ್ಯೂನ್ಯತೆ ಎಸಗಿದ್ದಾರೆಂದು ದೂರನ್ನು ಸಲ್ಲಿಸಿರುತ್ತಾರೆ.

1 ಮತ್ತು 2ನೇ ಎದುರುದಾರರು ತಕರಾರನ್ನು ಸಲ್ಲಿಸಿ, ದೂರುದಾರರು ಬುಕ್ ಮಾಡಿರುವ ಟೀಪುಡಿ ಪೊಟ್ಟಣವು 3ನೇ ಎದುರುದಾರರು ಒದಗಿಸಿದ್ದು, 1 ಮತ್ತು 2ನೇ ಎದುರುದಾರರು ಸಾಗಣೆ ಮಾಡುವವರಾಗಿದ್ದು ಹಾಗೂ ಗರಿಷ್ಟ ಬೆಲೆಗಿಂತ ಹೆಚ್ಚಿನ ಮೊತ್ತ ಪಡೆದಿರುವವರು 3ನೇ ಎದುರುದಾರರು ಆದ್ದರಿಂದ 1 ಮತ್ತು ನೇ ಎದುರುದಾರರು ಯಾವುದೇ ಸೇವಾ ನ್ಯೂನ್ಯತೆ ಮಾಡಿಲ್ಲದಿರುವುದರಿಂದ ತಮ್ಮ ವಿರುದ್ದದ ದೂರನ್ನು ವಜಾ ಮಾಡಲು ಕೋರಿರುತ್ತಾರೆ.

ದೂರುದಾರರು ಮತ್ತು ಎದುರುದಾರರು ಸಲ್ಲಿಸಿರುವಂತಹ ಪ್ರಮಾಣ ಪತ್ರ, ದಾಖಲಾತಿಗಳನ್ನು ಪರಿಶೀಲಿಸಿ, ಉಭಯ ಪಕ್ಷಗಾರರ ವಾದ-ವಿವಾದಗಳನ್ನು ಆಲಿಸಿ, ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶಗಳನ್ವಯ ಎದುರುದಾರರು ಸೇವಾ ನ್ಯೂನ್ಯತೆಯನ್ನು ಎಸಗಿರುತ್ತಾರೆಂದು ತೀರ್ಮಾನಿಸಿ ದೂರನ್ನು ಪುರಸ್ಕರಿಸಿ ದೂರುದಾರರು ಸದರಿ ಟೀಪುಡಿ ಪೊಟ್ಟಣವನ್ನು ಎದುರುದಾರರಿಗೆ ಹಿಂದಿರುಗಿಸಲು ಮತ್ತು 1 ರಿಂದ 3 ನೇ ಎದುರುದಾರರು ಜಂಟಿಯಾಗಿ ಮತ್ತು ಪ್ರತ್ಯೇಕವಾಗಿ ದೂರುದಾರರಿಗೆ ರೂ.890/- ಗಳನ್ನು ವಾರ್ಷಿಕ ಶೇ.9 ರಂತೆ ಬಡ್ಡಿಯನ್ನು ಸೇರಿಸಿ ದಿ: 19-09-2024 ರಿಂದ ಈ ಆದೇಶವಾದ 45 ದಿನಗಳ ಒಳಗಾಗಿ ಪಾವತಿಸಬೇಕು. ತಪ್ಪಿದಲ್ಲಿ ವಾರ್ಷಿಕ ಶೇ.12 ರಂತೆ ಬಡ್ಡಿಯನ್ನು ಸೇರಿಸಿ ಪೂರ್ತಿ ಹಣ ಪಾವತಿಸುವವರೆಗೆ ನೀಡತಕ್ಕದ್ದು. ಹಾಗೂ 1 ರಿಂದ 3ನೇ ಎದುರುದಾರರು ರೂ.25000/- ಗಳನ್ನು ಮಾನಸಿಕ ಹಿಂಸೆಗೆ ಮತ್ತು ದೂರಿನ ಖರ್ಚು ವೆಚ್ಚಗಳಿಗಾಗಿ ಈ ಆದೇಶವಾದ 45 ದಿನಗಳ ಒಳಗಾಗಿ ಪಾವತಿಸುವುದು. ತಪ್ಪಿದಲ್ಲಿ ಸದರಿ ಮೊತ್ತಕ್ಕೆ ವಾರ್ಷಿಕ ಶೇ.12 ರಷ್ಟು ಬಡ್ಡಿಯನ್ನು ಸೇರಿಸಿ ಪಾವತಿಸುವಂತೆ ಆಯೋಗದ ಅಧ್ಯಕ್ಷರಾದ ಟಿ.ಶಿವಣ್ಣ ಮತ್ತು ಸದಸ್ಯರಾದ ಬಿ.ಡಿ.ಯೋಗಾನಂದ ಭಾಂಡ್ಯೆ ಇವರನ್ನೊಳಗೊಂಡ ಪೀಠವು ಜು.29 ರಂದು ಆದೇಶಿಸಿದೆ.

# ಶರಣ ಶ್ರೀ ನುಲಿಯ ಚಂದಯ್ಯ ಜಯಂತಿ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕೊರಮ ಮತ್ತು ಕೊರಚ ಸಮಾಜ ಶಿವಮೊಗ್ಗ ಇವರ ಸಂಯುಕ್ತಶ್ರಾಯದಲ್ಲಿ ಆಗಸ್ಟ್ 09 ರಂದು ಬೆಳಿಗ್ಗೆ 11.00 ಗಂಟೆಗೆ ಕುವೆಂಪು ರಂಗಮಂದಿರದಲ್ಲಿ ಶರಣ ಶ್ರೀ ನುಲಿಯ ಚಂದಯ್ಯ ಜಯಂತಿಯನ್ನು ಆಯೋಜಿಸಲಾಗಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ನವರು ಉದ್ಘಾಟನೆಯನ್ನು ನೆರವೇರಿಸುವರು. ವಿಶೇಷ ಆಹ್ವಾನಿತರಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಾದ ತಂಗಡಗಿ ಶಿವರಾಜ್ ಸಂಗಪ್ಪ ಆಗಮಿಸುವರು. ಅಧ್ಯಕ್ಷತೆಯನ್ನು ಶಾಸಕರಾದ ಎಸ್. ಎಸ್. ಚನ್ನಬಸಪ್ಪ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರು, ವಿಧಾನ ಸಭಾ ಮತ್ತು ವಿಧಾನ ಪರಿಷತ್ ಶಾಸಕರು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿ.ಪಂ. ಸಿಇಓ, ಅಧಿಕಾರಿ ವರ್ಗದವರು ಹಾಗೂ ಸಿಬ್ಬಂದಿಗಳು ಮತ್ತು ವಿವಿಧ ಸಂಘಟನೆಯ ಮುಖಂಡರು ಭಾಗವಹಿಸುವರು. ಸಮಾಜದ ಮುಖಂಡರಾದ ಅನಿಲ್ ಕುಮಾರ್ ಲಕ್ಕಿನಕೊಪ್ಪ ಇವರು ವಿಶೇಷ ಉಪನ್ಯಾಸವನ್ನು ನೀಡುವರು.

## ಹಾಲು ಉತ್ಪಾದಕರ ಸಂಘಗಳ ರದ್ದತಿ : ಆಕ್ಷೇಪಣೆ ಸಲ್ಲಿಸಲು ಕಾಲವಕಾಶ

**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕಿನ ಬೀರಾವರ ಹಾಗೂ ಲಕ್ಷ್ಮೀಪುರ, ಚಳ್ಳಕೆರೆ ತಾಲ್ಲೂಕಿನ ಭರಮಸಾಗರ ಹಾಲು ಉತ್ಪಾದಕರ ಸಹಕಾರ ಸಂಘಗಳ ರದ್ದತಿಗೆ ಕ್ರಮ ಜರುಗಿಸಲಾಗುತ್ತಿದೆ. ಸದರಿ ಸಹಕಾರ ಸಂಘಗಳ ನೊಂದಣಿ ರದ್ದತಿಯಿಂದ ಬಾಧಿತರಾಗುವ ಷೇರುದಾರರರು ಆಯಾ ತಾಲ್ಲೂಕಿನ ಸಮಾಪನಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ನಿರೀಕ್ಷಕರ ಕಛೇರಿಗೆ ಖುದ್ದಾಗಿ ಆಕ್ಷೇಪಣೆ ಸಲ್ಲಿಸಬಹುದು. ಆಗಸ್ಟ್ 15 ಕೊನೆಯ ದಿನವಾಗಿದೆ. ಈ ಅವಧಿಯಲ್ಲಿ ಆಕ್ಷೇಪಣೆಗಳು ಬಾರದೇ ಇದ್ದಲ್ಲಿ ಸಂಘದ ನೊಂದಣಿ ರದ್ದತಿಗೆ ಯಾವುದೇ ತಕರಾರು ಇರುವುದಿದ್ದಲ್ಲವೆಂದು ಭಾವಿಸಿ ಮುಂದಿನ ಶಿಸ್ತು-ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

**ಬೆಂಗಳೂರು** : ಅನ್ವೇಷಣೆ ಸಾಂಸ್ಕೃತಿಕ ಅಕಾಡೆಮಿ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ, ಯಕ್ಷಗಾನ, ಭರತನಾಟ್ಯ, ಪುಸ್ತಕ ಪ್ರಕಾಶನ, ಸಮಾಜ ಸೇವೆ, ಯೋಗ, ಕೃಷಿ, ಜ್ಯೋತಿಷ್ಯ ಮುಂತಾದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಅರ್ಹರು ಆ.30ರೊಳಗಾಗಿ ವ್ಯಕ್ತಿಗತ ವಿವರ ಮತ್ತು ಫೋಟೋದೊಂದಿಗೆ ಮೊ.8073147961 ಗೆ ವಾಟ್ಸ್‌ಆ್ಯಪ್ ಮಾಡಬಹುದು ಎಂದು ಸಂಸ್ಥಾಪಕ ಅಧ್ಯಕ್ಷ ಭದ್ರಾವತಿ ರಾಮಾಚಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾತ್ರಾ ಮಹೋತ್ಸವ

**ಬಳ್ಳಾರಿ:** ನಗರದ ಶ್ರೀ ಕರಿಮಾರೆಮ್ಮ ದೇವಸ್ಥಾನದ ವಾರ್ಷಿಕ ಜಾತ್ರಾ ಮಹೋತ್ಸವವು ಆಗಸ್ಟ್ 12 ರಂದು ಮಂಗಳವಾರ ಜರುಗಲಿದೆ.ಅಂದು ಬೆಳಿಗ್ಗೆ 08.30 ಗಂಟೆಗೆ ಪ್ರತಿ ವರ್ಷದಂತೆ ಕೌಲ್ ಬಜಾರ್‌ನ ಮುಖ್ಯರಸ್ತೆಯಿಂದ ಶ್ರೀ ಕರಿಮಾರೆಮ್ಮನವರ ಉತ್ಸವ ಪ್ರಾರಂಭಗೊಂಡು ಮಧ್ಯಾಹ್ನ ದೇವಸ್ಥಾನಕ್ಕೆ ತಲುಪುತ್ತದೆ.

# ವಿದ್ಯಾರ್ಥಿನಿಯರು ರಾಷ್ಟ್ರ ಮಟ್ಟಕ್ಕೆ ಆಯ್ಕೆ

**ಹಾಸನ:** ಜಿಲ್ಲೆಯಚನ್ನರಾಯಪಟ್ಟಣ ತಾಲ್ಲೂಕಿನ ದಂಡಿಗನಹಳ್ಳಿ ಕುಂದೂರು ಮಠ ಮೊರಾರ್ಜಿದೇಸಾಯಿ ವಸತಿ ಶಾಲೆಯವಿದ್ಯಾರ್ಥಿನಿಗಳಾದ ಸ್ಫೂರ್ತಿ ಸಿ.ಹೆಚ್ ಕಿಕ್ ಬಾಕ್ಸಿಂಗ್‌ನಲ್ಲಿ ಹಾಗೂ ಆರ್ಯ ಕೆ.ಬಿ ಮತ್ತು ಸಂಧ್ಯಾಕೆ.ಆರ್‌ರವರುಅಥ್ಲೆಟಿಕ್ಸ್ ನಲ್ಲಿರಾಷ್ಟ್ರ ಮಟ್ಟಕ್ಕೆಆಯ್ಕೆಯಾಗಿದ್ದಾರೆ.

ಆಯ್ಕೆಯಾದ ವಿದ್ಯಾರ್ಥಿನಿಯರನ್ನುಕ್ಷೇತ್ರ ಶಿಕ್ಷಣಾಧಿಕಾರಿ ದೀಪ ಹೆಚ್.ಎನ್ ಹಾಗೂ ವಸತಿ ಶಾಲೆಯ ಪ್ರಾಂಶುಪಾಲರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಶಿಕ್ಷಕರ ಸಂಘದ ಪದಾಧಿಕಾರಿಗಳು ಅಭಿನಂದಿಸಿದರು.



# ಮೂಲಭೂತ ಸೌಕರ್ಯಕ್ಕೆ ಆಗ್ರಹಿಸಿ ಪ್ರತಿಭಟನೆ

**ಚಿಕ್ಕಮಗಳೂರು:** ಪೆಟ್ರೋಲ್ ಬಂಕ್‌ನಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿ ಆ.13 ರಂದುಧರಣಿ ನಡೆಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಕಾಫಿ ಬೆಳೆಗಾರರ ಸಂಘದಅಧ್ಯಕ್ಷಕೆ.ಯುರತೀಶ್ ಕುಮಾರ್ ತಿಳಿಸಿದ್ದಾರೆ.

ಅಂದು ಬೆಳಗ್ಗೆ 11 ಗಂಟೆಗೆ ನಗರದ ಕೆ.ಎಂ ರಸ್ತೆಯ ಸಂಧ್ಯಾ ಪೆಟ್ರೋಲ್ ಬಂಕ್‌ಎದುರು ಪ್ರತಿಭಟನೆಧರಣಿ ನಡೆಸಲು ನಿರ್ಧರಿಸಲಾಗಿದ್ದು, ಈ ಪ್ರತಿಭಟನೆಯಲ್ಲಿ ನೊಂದಗ್ರಾಹಕರು ಹಾಗೂ ಸಂಘದ ನಿರ್ದೇಶಕರು, ನಗರಸಭೆ ಸದಸ್ಯರು ಭಾಗವಹಿಸುವಂತೆ ಮನವಿ ಮಾಡಿದ್ದಾರೆ.

ಈ ಸಂಬಂಧ ಈಗಾಗಲೇ ಜಿಲ್ಲಾಡಳಿತಕ್ಕೆ ಮನವಿ ನೀಡಿದ್ದರೂ ಯಾವುದೇ ಪ್ರಯೋಜನವಾಗದ ಹಿನ್ನೆಲೆಯಲ್ಲಿಅಂದು ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ ಎಂದುಅವರು ತಿಳಿಸಿದ್ದಾರೆ.



# ಸರಳ ವ್ಯಕ್ತಿತ್ವದ ರಾಜಕಾರಣಿ ಡಾ. ಜಿ.ಪರಮೇಶ್ವರ್




**ಚಿಕ್ಕಮಗಳೂರು:** ಗೃಹಸಚಿವರಾಗಿ ಮೂರನೇ ಬಾರಿಗೆ ಹುದ್ದೆ ನಿಭಾಯಿಸುತ್ತಿರುವ ಪ್ರಾಮಾಣಿಕ, ಸರಳ ಸಜ್ಜನಿಕೆಯರಾಜಕಾರಣಿಡಾ. ಜಿ. ಪರಮೇಶ್ವರ್‌ರವರಿಗೆ ಶಾಸಕ ಹೆಚ್.ಡಿ. ತಮ್ಮಯ್ಯ ಹುಟ್ಟುಹಬ್ಬದ ಶುಭಾಶಯಗಳನ್ನು ಕೋರಿದರು.

ಅವರುಇಂದು

ನಗರದಗಣಪತಿದೇವಸ್ಥಾನದಲ್ಲಿ ಬ್ಲಾಕ್‌ಕಾಂಗ್ರೆಸ್ ಹಾಗೂ ಎಸ್‌ಸಿ ಸೆಲ್‌ಘಟಕದ ನೇತೃತ್ವದಲ್ಲಿಏರ್ಪಡಿಸಲಾಗಿದ್ದಗೃಹಸಚಿವಡಾ. ಜಿ. ಪರಮೇಶ್ವರ್‌ರವರ 74ನೇ ಹುಟ್ಟುಹಬ್ಬದ ಅಂಗವಾಗಿ ವಿಶೇಷ ಪೂಜೆ ಸಲ್ಲಿಸಿ ಶುಭ ಹಾರೈಸಿದರು.

ಮುಂದಿನ ದಿನಗಳಲ್ಲಿ ಸಚಿವರಿಗೆಆಯಸ್ಸು, ಆರೋಗ್ಯ, ಹೆಚ್ಚಿನಅಧಿಕಾರ ಸಿಗಲಿ ಎಂದುಕ್ಷೇತ್ರದಜನರು ಮತ್ತುಕಾರ್ಯಕರ್ತರ ಪರವಾಗಿ ಹಾರೈಸಿದರು.

ಡಾ. ಜಿ. ಪರಮೇಶ್ವರ್‌ಅವರು ಕೇವಲ ದಲಿತ ಸಮುದಾಯಕ್ಕೆ ಸೀಮಿತರಾಗದೇ ಕೆಪಿಸಿಸಿ ಅಧ್ಯಕ್ಷರಾಗಿ 6 ವರ್ಷಗಳ ಕಾಲ ಸೇವೆ ಸಲ್ಲಿಸಿದ ಪರಿಣಾಮ 2013 ರಲ್ಲಿಕಾಂಗ್ರೆಸ್ ಪಕ್ಷವನ್ನುಅಧಿಕಾರಕ್ಕೆತರುವಲ್ಲಿ ಶ್ರಮಿಸಿದ್ದರು ಎಂದರು.ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿಡಿ.ಕೆ ಶಿವಕುಮಾರ್ ಇವರೊಂದಿಗೆ ಪರಮೇಶ್ವರ್‌ರವರು 2023 ರಲ್ಲಿ ಶ್ರಮಿಸಿದ ಫಲವಾಗಿ ರಾಜ್ಯದಲ್ಲಿಕಾಂಗ್ರೆಸ್ ಸರ್ಕಾರಅಧಿಕಾರಕ್ಕೆ ಬಂದಿದೆಎಂದು ಹೇಳಿದರು.

ಕಾಂಗ್ರೆಸ್ ಮುಖಂಡರಾದ ಹಿರೇಮಗಳೂರು ರಾಮಚಂದ್ರ, ಮಾತನಾಡಿ, ಭ್ರಷ್ಟಾಚಾರರಹಿತ ಆಡಳಿತ ನೀಡುತ್ತಿರುವ ಸರಳ, ಸೌಮ್ಯರಾಜಕಾರಣಿಡಾ. ಜಿ. ಪರಮೇಶ್ವರ್‌ರವರಿಗೆಆಯಸ್ಸು, ಆರೋಗ್ಯದಜೊತೆಗೆರಾಜಕೀಯದಲ್ಲಿಉನ್ನತ ಹುದ್ದೆಅಲಂಕರಿಸಲಿ ಎಂದು ಶುಭಹಾರೈಸಿದರು.

ಈ ಸಂದರ್ಭದಲ್ಲಿ ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಹೆಚ್.ಪಿ ಮಂಜೇಗೌಡಕಾಂಗ್ರೆಸ್ ಮುಖಂಡರಾದ, ಮಲ್ಲೇಶ್‌ಸ್ವಾಮಿ, ಓಂಕಾರಣ್ಣ, ವೇಣುಗೋಪಾಲ್, ನೇತ್ರಾವತಿ, ಮಹೇಶ್, ಚಂದ್ರು, ಶಾಂತಕುಮಾರ್, ರಾಜ್‌ಕುಮಾರ್, ಜಗಧೀಶ್, ವೆಂಕಟೇಶ್, ಸುದೀಪ್‌ಮತ್ತಿತರರು ಶುಭ ಹಾರೈಸಿದರು.

# ನಿಧನ ಸುದ್ದಿಗಳು

### ಶಿರಮಗೊಂಡನಹಳ್ಳಿ ನಾಗಪ್ಪ ಗಿರಿಜಮ್ಮ ನಿಧನ

**ದಾವಣಗೆರೆ** : ಶಿರಮಗೊಂಡನಹಳ್ಳಿ ವಾಸಿ ನಾಗಪ್ಪ ದಿ. ಶ್ರೀ ಮಹಾದೇವಪ್ಪ ಇವರ ಧರ್ಮಪತ್ನಿನಾಗಪ್ಪ ಶರಣೆ ಗಿರಿಜಮ್ಮ

ಅವರು ದಿನಾಂಕ : 06.08.2025ರ ಬುಧವಾರ ಬೆಳಿಗ್ಗೆ 11.00ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರು ಮೂರು ಜನ ಪುತ್ರರು, ಪುತ್ರಿಯರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು, ಮರಿಮೊಮ್ಮಕ್ಕಳು ಹಾಗೂ ಅಪಾರ ಬಂಧು -ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ: 07.08.2025ರ ಗುರುವಾರ ಬೆಳಿಗ್ಗೆ 11.30ಕ್ಕೆ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ತೋಟದರ ಸುಮಿತ್ರಮ್ಮ ನಿಧನ

**ದಾವಣಗೆರೆ** : ತಾಲ್ಲೂಕು ಎಲೆಬೇತೂರು ಗ್ರಾಮದ ತೋಟದರ ಬಸವರಾಜಪ್ಪ ಅವರ ಧರ್ಮಪತ್ನಿ ಶ್ರೀಮತಿ ತೋಟದರ ಸುಮಿತ್ರಮ್ಮ ಅವರು ದಿನಾಂಕ 7.8.2025ರ ಗುರುವಾರ ಬೆಳಗಿನಜಾವ 1.10ಕ್ಕೆ ನಿಧನದರಾರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 56 ವರ್ಷ ವಯಸ್ಸಾಗಿತ್ತು.

ಓರ್ವ ಪುತ್ರ, ಇಬ್ಬರು ಪುತ್ರಿಯರು, ಸೊಸೆ, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧುಗಳನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 7.8.2025ರ ಗುರುವಾರ ಮಧ್ಯಾಹ್ನ 2 ಗಂಟೆಗೆ ಎಲೆಬೇತೂರಿನ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

# ಸೊರಬ;ಮೆಸ್ಕಾಂ ಜನಸಂಪರ್ಕ ಸಭೆ

**ಶಿವಮೊಗ್ಗ :** ಮೆಸ್ಕಾಂ ಸೊರಬ ಉಪವಿಭಾಗ ಕಛೇರಿಯಲ್ಲಿ ಆ 07 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನ ಸಂಪರ್ಕ ಸಭೆ ನಡೆಯಲ್ಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 9448289518

### ಆಯುರ್ವೇದ ಆಸ್ಪತ್ರೆ ವೈದ್ಯರ ಹುದ್ದೆ

# ಆಕ್ಷೇಪಣೆ ಸಲ್ಲಿಸಲು ಆ.14 ಕೊನೆ ದಿನ

**ಚಿಕ್ಕಮಗಳೂರು :** ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಆಯುರ್ವೇ2ದ ಚಿಕಿತ್ಸಾಲಯಗಳಲ್ಲಿ ಖಾಲಿ ಇರುವ ಖಾಯಂ ವೈದ್ಯಾಧಿಕಾರಿ ಹುದ್ದೆಗಳ ಎದುರು 12 ಗುತ್ತಿಗೆ ಆಯುಷ್ ವೈದ್ಯರುಗಳನ್ನು ತಾತ್ಕಾಲಿಕವಾಗಿ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆ ಚಾಲ್ತಿಯಲ್ಲಿರುವವರೆಗೆ ಮಾತ್ರ ಮುಂದುವರಿಸುವ ಷರತ್ತಿಗೊಳಪಟ್ಟು ನೇಮಕ ಮಾಡಲು ಆಸಕ್ತರಿಂದ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪಟ್ಟಿಯನ್ನು ನಗರದ ಜಿಲ್ಲಾ ಆಯುಷ್ ಅಧಿಕಾರಿಗಳ ಕಚೇರಿಯ ನಾಮಫಲಕದಲ್ಲಿ ಪ್ರಕಟಿಸಿದ್ದು, ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ಆಗಸ್ಟ್ 14ರ ಸಂಜೆ 5 ಗಂಟೆಯೊಳಗೆ ಜಿಲ್ಲಾ ಆಯುಷ್ ಅಧಿಕಾರಿಗಳ ಕಚೇರಿಗೆ ಖುದ್ದು ಹಾಜರಾಗಿ ಸಲ್ಲಿಸಬಹುದು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಗೀತಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವನಿಧಿಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು :** ಕರ್ನಾಟಕ ಸರ್ಕಾರದ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಯನ್ನು 2023, 2024 ಮತ್ತು 2025ರಲ್ಲಿ ತೇರ್ಗಡೆಯಾದ ಪದವೀಧರರಿಗೆ ಪ್ರತಿ ತಿಂಗಳು ರೂ.3000 ಮತ್ತು ಡಿಪ್ಲೊಮಾ ತೇರ್ಗಡೆಯಾದವರಿಗೆ ರೂ.1500 ನಿರುದ್ಯೋಗ ಭತ್ಯೆಯನ್ನು 2 ವರ್ಷಗಳವರೆಗೆ ನೀಡಲಾಗುವುದು. ಆಸಕ್ತ ಅರ್ಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಅರ್ಹತೆ: ಕರ್ನಾಟಕದಲ್ಲಿ ಕನಿಷ್ಠ 6 ವರ್ಷಗಳಿಂದ ವಾಸವಿರುವ 2023, 2024 ಮತ್ತು 2025ನೇ ವರ್ಷದಲ್ಲಿ ಪದವಿ, ಡಿಪ್ಲೊಮಾ ತೇರ್ಗಡೆಯಾದ ನಿರುದ್ಯೋಗಿಗಳು ಅಂದರೆ 180 ದಿನಗಳ ನಂತರವೂ ಉದ್ಯೋಗ ಪಡೆಯದ ಅಭ್ಯರ್ಥಿಗಳು, ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವ ಅಭ್ಯರ್ಥಿಗಳು https://sevasindhugs.karnataka.gov.inಅಥವಾ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ (08262–295538) ಯನ್ನು ಸಂಪರ್ಕಿಸಬಹುದು.

# ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ಪಿಡಿಓ ಅಮಾನತು

**ಚಿತ್ರದುರ್ಗ:** ಜಿಲ್ಲಾ ಪಂಚಾಯಿತಿಯಿಂದ ನಿಯೋಜನೆಗೊಂಡ ಲೆಕ್ಕ ತನಿಖಾ ತಂಡಕ್ಕೆ ದಾಖಲೆಗಳನ್ನು ಒದಗಿಸುವಂತೆ ಸೂಚಿಸಲಾಗಿದ್ದರೂ ಸಹ, ದಾಖಲೆಗಳನ್ನು ಹಾಜರುಪಡಿಸದೇ ಕರ್ತವ್ಯ ಲೋಪವೆಸಗಿದ ಚಳ್ಳಕೆರೆ ತಾಲ್ಲೂಕು ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ಪಿಡಿಓ ವೇದವ್ಯಾಸಲು ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಆದೇಶಿಸಿದ್ದಾರೆ.

ಚಳ್ಳಕೆರೆ ತಾಲ್ಲೂಕು ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯತಿಯಲ್ಲಿ 2023–24 ರಿಂದ 2024–25ನೇ ಸಾಲಿನವರೆಗಿನ ಪಂಚಾಯತಿಯಲ್ಲಿ 15ನೇ ಹಣಕಾಸು, ವರ್ಗ–1 ಇ–ಸ್ವತ್ತು ನರೇಗಾ ಹಾಗೂ ಇತರೆ ಯೋಜನೆಗಳಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತು ವಿಶೇಷ ಲೆಕ್ಕ ತನಿಖೆಗೆ ನಿಯೋಜಿಸಿದ್ದು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪರವಾಗಿ ಲೆಕ್ಕ ಪರಿಶೋಧಕರು ಲೆಕ್ಕ ತನಿಖೆಗೆ ದಾಖಲೆಗಳನ್ನು ಹಾಜರುಪಡಿಸಲು ಸೂಚಿಸಲಾಗಿದ್ದರೂ ಸಹಾ, ತನಿಖೆಗೆ ಒದಗಿಸಬೇಕಾದ ದಾಖಲೆಗಳಾದ 2023–24 ರಿಂದ 2024–25 ಸಾಲಿನವರೆಗಿನ 15ನೇ ಹಣಕಾಸು, ವರ್ಗ–1, ಇ–ಸ್ವತ್ತು ನರೇಗಾ ಹಾಗೂ ಇತರೆ ಯೋಜನೆಗಳಲ್ಲಿ ಭರಿಸಲಾಗಿರುವ ವೆಚ್ಚ ರೂ. 2,31,54,326 ಗಳಿಗೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ.

2023–24 ಮತ್ತು 2024–25ನೇ ಸಾಲಿನಲ್ಲಿ 15ನೇ ಹಣಕಾಸು ಯೋಜನೆಯಲ್ಲಿ ರೂ.84,40,121 ಗಳಿಗೆ ಒದಗಿಸಿರುವ ಓಚರ್‌ಗಳು ಮತ್ತು ಲೆಕ್ಕ ಪತ್ರಗಳನ್ನು ಪರಿಶೀಲಿಸಲಾಗಿ ಟೆಂಡರ್ ಕರೆಯದೇ ರೂ. 1.00 ಲಕ್ಷಕ್ಕಿಂತ ಹೆಚ್ಚು ಮೊತ್ತವನ್ನು ಖರೀದಿಗಳಿಗೆ ವೆಚ್ಚ ಭರಿಸಿದ್ದು, ನಿಯಮಾನುಸಾರ ಕ್ರಮ ಕೈಗೊಳ್ಳದೇ ಪಾವತಿ ಮಾಡಿರುವುದು ಕಂಡುಬಂದಿರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ–1993, ಕೆ.ಟಿ.ಪಿ.ಪಿ ನಿಯಮ ಹಾಗೂ ಇತರೆ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸದಿರುವುದು ಕಂಡುಬಂದಿರುತ್ತದೆ.

# ಮಗುವಿಗೆ ಸ್ತನ್ಯಪಾನ ಪ್ರಕೃತಿಯ ಮೊದಲ ಲಸಿಕೆ

## ತಾಲ್ಲೂಕಾ ವೈದ್ಯಾಧಿಕಾರಿ ಬಿ.ವಿ.ಗಿರೀಶ್ ಅಭಿಮತ



**ಚಿತ್ರದುರ್ಗ :** ಜನಿಸಿದ ಮಗುವಿಗೆ ತಾಯಿಯ ಎದೆಹಾಲು ಮೊದಲ ಲಸಿಕೆಯಾಗಿದ್ದು ಜೀವನಪರ್ಯಂತ ಮಗುವಿಗೆ ರೋಗನಿರೋಧಕ ಶಕ್ತಿಯನ್ನು ನೀಡುತ್ತದೆ ಎಂದು ತಾಲ್ಲೂಕು ವೈದ್ಯಾಧಿಕಾರಿ ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ಸಾಧಿಕ್ ನಗರ ಅಂಗನವಾಡಿ ಕೇಂದ್ರದಲ್ಲಿ ಆರೋಗ್ಯ ಇಲಾಖೆ ಮತ್ತು ಶಿಶು ಅಭಿವೃದ್ಧಿ ಇಲಾಖೆ ವತಿಯಿಂದ ಆಯೋಜಿಸಿದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ವರ್ಷದ ಧ್ಯೇಯ ವಾಕ್ಯ "ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ" ಜನಿಸಿದ ಮಗುವಿಗೆ ಎರಡು ವರ್ಷದ ತನಕ ತಪ್ಪದೇ ತಾಯಿ ಎದೆ ಹಾಲು ನೀಡಬೇಕು. ಆರು ತಿಂಗಳ ತನಕ ತಾಯಿಯ ಎದೆಹಾಲು ಬಿಟ್ಟು ಬೇರೆ ಏನನ್ನು ಮಗುವಿಗೆ ಕೊಡಬಾರದು. ಎದೆಹಾಲು ಉಣಿಸುವ ತಾಯಿ ಪೋಷಕಾಂಶ ಇರುವ ಎಲ್ಲಾ ಆಹಾರ ಪದಾರ್ಥಗಳ ಸೇವನೆ ಮಾಡಬೇಕು ಎಂದರು.

ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ ಮಾತನಾಡಿ ಗರ್ಭಿಣಿಯಾಗಿದ್ದಾಗಿನಿಂದ ತಾಯಿಯು ತನ್ನ ಎದೆ ತೊಟ್ಟಿನ ಹಾರೈಕೆ ಮಾಡಿಕೊಳ್ಳಬೇಕು. ಮಗು ಜನಿಸಿದ ಒಂದು ಗಂಟೆಯ ಒಳಗಡೆ ತಾಯಿ ಎದೆ ಹಾಲು ಮಗುವಿಗೆ ಉಣಿಸಬೇಕು, ಮಗುವಿಗೆ ಇರುಳುಗಣ್ಣು ಇತರೆ ಸೋಂಕು ರೋಗಗಳು ತಡೆಯಲು ತಾಯಿ ಮಗುವಿನ ಬಾಂಧವ್ಯ ಹೆಚ್ಚಿಸಲು ಸ್ತನ್ಯಪಾನ ಬಹುಮುಖ್ಯ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ. ಮಾತನಾಡಿ ತಾಯಂದಿರು ಮತ್ತು ಶಿಶುಗಳ ಆರೋಗ್ಯವನ್ನು ಉತ್ತೇಜಿಸಲು ಮತ್ತು ಜಾಗೃತಿ ಮೂಡಿಸಲು ಪ್ರತಿ ವರ್ಷ ಆಗಸ್ಟ್ ಒಂದರಿಂದ ಆಗಸ್ಟ್ ಏಳರವರೆಗೆ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಆಯೋಜಿಸುತ್ತಿದ್ದು, ಆರೋಗ್ಯವಂತ ಮಗು ಆರೋಗ್ಯವಂತ ತಾಯಿ ಆರೋಗ್ಯವಂತ ರಾಷ್ಟ್ರ ನಿರ್ಮಾಣ ಮಾಡಲು, ಆರೋಗ್ಯವಂತ ಮಗು ಜನಿಸಬೇಕಾದರೆ ಬಾಲ್ಯ ವಿವಾಹಕ್ಕೆ ಕಡಿವಾಣ ಹಾಕಬೇಕು 18 ವರ್ಷದ ಒಳಗಡೆ ಹೆಣ್ಣು ಮಕ್ಕಳಿಗೆ ಮದುವೆ ಮಾಡಬಾರದು ಗರ್ಭಿಣಿ ತಾಯಂದಿರು ಸಕಾಲಕ್ಕೆ ವೈದ್ಯರಲ್ಲಿ ಪರೀಕ್ಷೆ ಮತ್ತು ಚಿಕಿತ್ಸೆ ಪಡೆಯಬೇಕು. ಹೆರಿಗೆಯ ನಂತರ 2.5 ಕೆಜಿ ಗಿಂತ ಕಡಿಮೆ ತೂಕದ ಮಗು ಜನಿಸಿದರೆ 48 ಗಂಟೆ ಸ್ನಾನ ಮಾಡಿಸದೆ, ಸ್ವಚ್ಛತೆಗೆ ಆದ್ಯತೆ ನೀಡಿ ತಾಯಿಯ ಪಕ್ಕದಲ್ಲಿ ಮಗುವನ್ನ ಮಲಗಿಸುವುದರಿಂದ ತಾಯಿ ಮಗುವಿನ ಬಾಂಧವ್ಯ ಬೆಳೆಯುವುದಲ್ಲದೆ ಎದೆ ಹಾಲು ಉತ್ಪತ್ತಿ ಹೆಚ್ಚಾಗುತ್ತದೆ, ಪ್ರಶಾಂತವಾದ ವಾತಾವರಣದಲ್ಲಿ ಸಮಾಧಾನವಾಗಿ ಕುಳಿತು ತಾಯಿ ಮಗುವಿಗೆ ಎದೆ ಹಾಲು ಉಣಿಸಬೇಕು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಮಾಹಿತಿ ನೀಡುತ್ತಾ ಮಗು ಅತ್ತಾಗಲೆಲ್ಲಾ ತಾಯಿ ಮಗುವಿಗೆ ಎದೆ ಹಾಲುಣಿಸಬೇಕು, ಉಚಿತವಾಗಿ ದೊರೆಯುವ ಅಮ್ಮನ ಎದೆ ಹಾಲು ನೀಡುವುದು ತಾಯಿಯ ಜವಾಬ್ದಾರಿ, ತಾಯಿ ಎದೆ ಹಾಲು ಉಣಿಸುವಾಗ ಅನುಸರಿಸುವ ಬಂಗಿ ಮತ್ತು ಹೊಂದಾಣಿಕೆಯ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ನಾಗರತ್ನ ಅಂಗನವಾಡಿ ಕಾರ್ಯಕರ್ತೆ ಮುನಿಯಮ್ಮ ಆಶಾ ಕಾರ್ಯಕರ್ತೆ ರೇಣುಕಾ ಹಾಗೂ ಎದೆ ಹಾಲುಣಿಸುವ ತಾಯಂದಿರು ಸಾರ್ವಜನಿಕ ತಾಯಂದಿರು ಹಾಜರಿದ್ದರು.

# ವಿಮಾ ಮೊತ್ತ ನೀಡಲು ನಿರಾಕರಿಸಿ ಸೇವಾನ್ಯೂನತೆ : ಪರಿಹಾರ ನೀಡಲು ಆದೇಶ

**ಶಿವಮೊಗ್ಗ :** ಶ್ರೀಮತಿ ಆರ್. ರಾಜೇಶ್ವರಿ ಕೋಂ ಲೇಟ್ ಟಿ.ಎಸ್. ಶಿವಕುಮಾರ್, ಶ್ರೀ ದುರ್ಗಮ್ಮ ದೇವಸ್ಥಾನ, ಕಾಮಾಕ್ಷಿ ಬೀದಿ, ಶಿವಮೊಗ್ಗ ಇವರು ಐಸಿಐಸಿಐ ಪ್ರಡೆನ್ಷಿಯಲ್ ಲೈಫ್ ಇನ್ಸೂರನ್ಸ್– ಬೆಂಗಳೂರು, ಐಸಿಐಸಿಐ ಪ್ರಡೆನ್ಷಿಯಲ್ ಲೈಫ್ ಇನ್ಸೂರನ್ಸ್– ಮುಂಬೈ, ಇಂಡಸಿಂಡ್ ಬ್ಯಾಂಕ್ ಲಿ., ಶಿವಮೊಗ್ಗ ಮತ್ತು ಇಂಡಸಿಂಡ್ ಬ್ಯಾಂಕ್ ಲಿ., ಬೆಂಗಳೂರು ಇವರುಗಳ ವಿರುದ್ದ ವಿಮಾ ಸೌಲಭ್ಯ ನೀಡುವಲ್ಲಿನ ಸೇವಾ ನ್ಯೂನತೆ ಕುರಿತು ವಕೀಲರ ಮೂಲಕ ಸಲ್ಲಿಸಿದ ದೂರನ್ನು ಆಲಿಸಿದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ವಿಮಾ ಕಂಪೆನಿಯು ದೂರುದಾರರಿಗೆ ಸೂಕ್ತ ಪರಿಹಾರ ನೀಡುವಂತೆ ತೀರ್ಪು ನೀಡಿದೆ.

ದೂರುದಾರರಾದ ಶ್ರೀಮತಿ ಆರ್. ರಾಜೇಶ್ವರಿಯವರ ಪತಿ ಖರೀದಿಸಿದ್ದ ಅಶೋಕ ಲೈಲ್ಯಾಂಡ್ ಬೋರ್‌ವೆಲ್ ಲಾರಿಯ ಮೇಲೆ ಐಸಿಐಸಿಐ ಪ್ರಡೆನ್ಷಿಯಲ್ ಲೈಫ್ ಇನ್ಸೂರೆನ್ಸ್‌ರವರಿಂದ ರೂ. 1,04,878/– ವಿಮಾ ಫ್ರೀಮಿಯಂ ಪಡೆದಿದ್ದು, 2024ರಲ್ಲಿ ಪಾಲಿಸಿದಾರರು ತೀರಿಕೊಂಡಿದ್ದರು. ಈ ಕುರಿತು ಇನ್ಸೂರೆನ್ಸ್ ಕಂಪನಿಗೆ ತಿಳಿಸಿ, ವಿಮಾ ಭರವಸೆಯ ಮೊತ್ತದಲ್ಲಿ ಸಾಲದ ಮೊತ್ತವನ್ನು ಭರಿಸಲು ಕೋರಿರುತ್ತಾರೆ. 1 ಮತ್ತು 2ನೇ ಎದುರುದಾರರಿಂದ ವಿಮಾ ಪಾಲಿಸಿಯ ಪ್ರೀಮಿಯಂ ಹಣವನ್ನು 3ನೇ ಎದುರುದಾರರಿಂದ 2023ರಂದು ಪಡೆದಿದ್ದು, ದೂರುದಾರರ ಪತಿ ಮರಣ ಹೊಂದಿದ ನಂತರ ದೂರುದಾರರ ಪತಿಯ ಸಾಲದ ಖಾತೆಗೆ ಜಮಾ ಮಾಡಿರುವುದರಿಂದ ಎಲ್ಲಾ ಎದುರುದಾರರು ಸೇವಾ ನ್ಯೂನ್ಯತೆಯನ್ನುಂಟು ಮಾಡಿರುತ್ತಾರೆ ಎಂದು ದೂರು ಸಲ್ಲಿರುತ್ತಾರೆ.

ದೂರನ್ನು ದಾಖಲಿಸಿಕೊಂಡ ಆಯೋಗವು ನೀಡಿದ ನೋಟಿಸ್‌ಗೆ ಎದುರುದಾರರು ವಕೀಲರ ಮೂಲಕ ಹಾಜರಾಗಿ ದೂರುದಾರರು ಪಾಲಿಸಿಯನ್ನು ಪಡೆಯುವ ಪೂರ್ವದಲ್ಲಿ ಟಿ.ಎಂ.ಟಿ. ವೈದ್ಯಕೀಯ ತಪಾಸಣೆಯನ್ನು ತೃಪ್ತಿಕರವಾಗಿ ಪೂರ್ಣಗೊಳಿಸಿರುವುದಿಲ್ಲ ಹಾಗೂ ನಿಧನ ಹೊಂದಿದ ದಿನದಂದು ಪಾಲಿಸಿಯು ಚಾಲ್ತಿಯಲ್ಲಿರಲಿಲ್ಲ ಎಂಬ ಕಾರಣದೊಂದಿಗೆ ಪಾಲಿಸಿಯ ಭರವಸೆ ಮೊತ್ತ ಪಾವತಿಸಲು ಸಾಧ್ಯವಿಲ್ಲವೆಂದು ತಕರಾರು ಸಲ್ಲಿಸಿರುತ್ತಾರೆ.

ದೂರುದಾರರು ಮತ್ತು ಎದುರುದಾರರು ಸಲ್ಲಿಸಿರುವ ಪ್ರಮಾಣ ಪತ್ರ ಮತ್ತು ದಾಖಲೆಗಳನ್ನು ಪರಿಶೀಲಿಸಿ ಮತ್ತು ಉಭಯ ಪಕ್ಷಗಾರರ ವಕೀಲರ ವಾದವನ್ನು ಆಲಿಸಿ, ಎದುರುದಾರರು ಸೇವಾ ನ್ಯೂನತೆ ಎಸಗಿರುವುದಾಗಿ ಪರಿಗಣಿಸಿ ದೂರುದಾರರು ಸಲ್ಲಿಸಿರುವ ದೂರನ್ನು ಭಾಗಶಃ ಪುರಸ್ಕರಿಸಿ, 1 ಮತ್ತು 2ನೇ ಎದುರುದಾರರು ಜಂಟಿಯಾಗಿ ಮತ್ತು ಪ್ರತ್ಯೇಕವಾಗಿ ಪಾಲಿಸಿ ಪ್ರಸ್ತಾವನೆಯಲ್ಲಿರುವ ಮೊತ್ತ ರೂ.36,38,583/– ಗಳನ್ನು ಈ ಆದೇಶವಾದ 45 ದಿನಗಳೊಳಗೆ ಪಾವತಿಸಲು ತಪ್ಪಿದ್ದಲ್ಲಿ ದಿ:21/04/2025 ರಿಂದ ಅನ್ವಯವಾಗುವಂತೆ ವಾರ್ಷಿಕ ಶೇ.10.45 ರಂತೆ ಬಡ್ಡಿ ಸಹಿತ ಪಾವತಿಸುವುದು. 3 ಮತ್ತು 4ನೇ ಎದುರುದಾರರು ದೂರುದಾರರ ಪತಿಯ ಉಳಿಕೆ ಸಾಲದ ವಿವರಗಳನ್ನು 1 ಮತ್ತು 2ನೇ ಎದುರುದಾರರಿಗೆ ಒದಗಿಸಿ, ಪಾಲಿಸಿಯ ಮೊತ್ತವನ್ನು ದೂರುದಾರರ ಸಆಲದ ಖಾತೆಗೆ ಜಮೆ ಪಡೆಯಲು ಕ್ರಮವಹಿಸಲು ಹಾಗೂ 1 ರಿಂದ 4ನೇ ಎದುರುದಾರರು ಜಂಟಿಯಾಗಿ ಮತ್ತು ಪ್ರತ್ಯೇಕವಾಗಿ ರೂ. 40,000 ಗಳನ್ನು ಮಾನಸಿಕ ಹಿಂಸೆಗಾಗಿ ಮತ್ತು ರೂ.10,000 ಗಳನ್ನು ವ್ಯಾಜ್ಯದ ಖರ್ಚಾಗಿ ನೀಡಬೇಕೆಂದು, ತಪ್ಪಿದ್ದಲ್ಲಿ ಈ ಆದೇಶವಾದ ದಿನದಿಂದ ಪೂರ್ತಿ ಹಣ ಪಾವತಿಸುವವರೆಗೆ ಮೇಲ್ಕಂಡ ಮೊತ್ತಕ್ಕೆ ವಾರ್ಷಿಕ ಶೇ. 12 ರಂತೆ ಬಡ್ಡಿಯನ್ನು ಸೇರಿಸಿ ನೀಡತಕ್ಕದ್ದು ಎಂದು ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಟಿ.ಶಿವಣ್ಣ ಮತ್ತು ಸದಸ್ಯರಾದ ಬಿ.ಡಿ.ಯೋಗಾನಂದ ಭಾಂಡ್ಯ ಇವರನ್ನೊಳಗೊಂಡ ಪೀಠವು ಜು.16 ರಂದು ಆದೇಶಿಸಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಗಂಗಾಧರ ನಾಯ್ಕ್ ತಿಳಿಸಿದ್ದಾರೆ.

# ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಶ್ರಮಿಕ ತಾತ್ಕಾಲಿಕ ವಸತಿ ಸಮುಚ್ಚಯ ಭವನದ ಲೋಕಾರ್ಪಣೆ ಕಾರ್ಯಕ್ರಮ

**ಶಿವಮೊಗ್ಗ :** ಕಾರ್ಮಿಕ ಇಲಾಖೆಯು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು, ಸಾರಿಗೆ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರುಗಳ ಸಹಯೋಗದೊಂದಿಗೆ ಆ. 04 ರಂದು ಬೆಳಗ್ಗೆ 11.00ಕ್ಕೆ ಶಿವಮೊಗ್ಗ ಸಾಗರ ರಸ್ತೆಯ ಗಾಡಿಕೊಪ್ಪ ಲಗಾನ್ ಕಲ್ಯಾಣ ಮಂಟಪ ಆವರಣದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಶ್ರಮಿಕ ತಾತ್ಕಾಲಿಕ ವಸತಿ ಸಮುಚ್ಚಯ ಭವನದ ಲೋಕಾರ್ಪಣೆ ಹಾಗೂ ಶಿವಮೊಗ್ಗ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮವನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪರವರ ಘನ ಉಪಸ್ಥಿತಿಯಲ್ಲಿ ಕಾರ್ಮಿಕ ಸಚಿವರ ಸಂತೋಷ್ ಎಸ್ ಲಾಡ್ ಉದ್ಘಾಟಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿವಮೊಗ್ಗ ನಗರ ವಿಧಾನ ಸಭೆ ಶಾಸಕ ಎಸ್.ಎನ್. ಚನ್ನಬಸಪ್ಪ ವಹಿಸಲಿರುವರು. ವಿಶೇಷ ಆಹ್ವಾನಿತರಾಗಿ ಭದ್ರಾವತಿ ವಿಧಾನಸಭೆ ಶಾಸಕಹಾಗೂಕ.ಗ್ರಾ.ಮೂ.ಸೌ.ಅ.ನಿಗಮದ ಅಧ್ಯಕ್ಷ ಬಿ.ಕೆ.ಸಂಗಮೇಶ್ವರ ಮತ್ತು ಸಾಗರ ವಿಧಾನಸಭೆ ಶಾಸಕ ಹಾಗೂ ಕ.ಅ.ಕೈ.ನಿಗಮದ ಅಧ್ಯಕ್ಷ ಗೋಪಾಲಕೃಷ ಬೇಳೂರು ಇವರುಗಳು ಆಗಮಿಸುವರು.

ಕಾರ್ಯಕ್ರಮದಲ್ಲಿ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ಪಾಲಿಕೆ ಮಹಾಪೌರರು, ಜನಪ್ರತಿನಿಧಿಗಳು, ಕಾರ್ಮಿಕ ಇಲಾಖೆ ಮತ್ತು ಸಾರಿಗೆ ಇಲಾಖೆಗಳ ಸರ್ಕಾರದ ಕಾರ್ಯದರ್ಶಿಗಳು ಮತ್ತು ಆಯುಕ್ತರುಗಳು, ವಿವಿಧ ನಿಗಮ/ ಮಂಡಳಿ/ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲೆಯ ಎಲ್ಲಾ ಗೌರವಾನ್ವಿತ ಜನಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗ ಮತ್ತು ವಿವಿಧ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು ಹಾಗೂ ಸದಸ್ಯರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿ.ಪಂ ಸಿಇಓ, ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು, ಶಿವಮೊಗ್ಗ ಜಿಲ್ಲೆಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಸಂಘದ ಪದಾಧಿಕಾರಿಗಳು, ಜಿಲ್ಲಾ ಅಸಂಘಟಿತ ಕಾರ್ಮಿಕ ಸಂಘದ ಪದಾಧಿಕಾರಿಗಳು ಹಾಗೂ ಇನ್ನಿತರ ಗಣ್ಯರು ಪಾಲ್ಗೊಳ್ಳುವರು.

# ಹೋಂಸ್ಟೇ ನಿರ್ಮಾಣಕ್ಕೆ ಸಹಾಯಧನ

**ಚಿಕ್ಕಮಗಳೂರು, ಆ.2:** ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರದ ಸಚಿವಾಲಯದ ಧರ್ತಿ ಅಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಮತ್ತು ಪ್ರಧಾನ ಮಂತ್ರಿ ಜನಜಾತೀಯ ಉನ್ನತ ಗ್ರಾಮ ಅಭಿಯಾನದ ಅಧೀನದಲ್ಲಿ ಪ್ರವಾಸೋದ್ಯಮ ಸಚಿವಾಲಯದ ಸ್ವದೇಶ ದರ್ಶನ ಯೋಜನೆಯ ಉಪಯೋಜನೆಯಾಗಿ ಆದಿವಾಸಿ ಪ್ರದೇಶಗಳಲ್ಲಿ ಹೋಂಸ್ಟೇ ಅಭಿವೃದ್ಧಿಗೆ ಸಹಾಯಧನ ನೀಡಲಾಗುತ್ತಿದೆ. ಜಿಲ್ಲೆಯ ಶೃಂಗೇರಿ ತಾಲ್ಲೂಕಿನ ನೆಮ್ಮಾರು ಗ್ರಾಮ ಪಂಚಾಯಿತಿಯ ಮಲನಾಡು ಗ್ರಾಮ, ಕೊಪ್ಪ ತಾಲ್ಲೂಕಿನ ಗುಡ್ಡೆ ತೋಟ ಗ್ರಾಮ ಪಂಚಾಯಿತಿಯ ಮೇಗೂರು ಗ್ರಾಮ, ಅಜ್ಜಂಪುರ ತಾಲ್ಲೂಕಿನ ಬೇಗೂರು ಗ್ರಾಮ ಪಂಚಾಯಿತಿಯ, ಭೂತನಕಾಡು ಗ್ರಾಮಗಳನ್ನು ಗುರುತಿಸಲಾಗಿದ್ದು, ಈ ಗ್ರಾಮಗಳನ್ನು ಅಭಿವೃದ್ಧಿಪಡಿಸಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಹೋಂಸ್ಟೇ ನಿರ್ಮಿಸಲು ರೂ.5 ಲಕ್ಷ, ನವೀಕರಿಸಲು ರೂ. 3 ಲಕ್ಷ ಸಹಾಯಧನ ನೀಡುವ ಯೋಜನೆಯನ್ನು ಪ್ರವಾಸೋದ್ಯಮ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿದ್ದು, ಬುಡಕಟ್ಟು ಸಮುದಾಯವಿರುವ ಗ್ರಾಮಗಳಲ್ಲಿ ಆತಿಥ್ಯ ಕ್ಷೇತ್ರದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಬುಡಕಟ್ಟು ಸಮುದಾಯದ ಸಂಸ್ಕೃತಿ, ಪರಂಪರೆ ಮತ್ತು ನೈಸರ್ಗಿಕ ಸಂಪತ್ತನ್ನು ಪ್ರವಾಸಿಗರಿಗೆ ಪರಿಚಯಿಸುವುದಾಗಿದೆ.

# ಸೌರಶಕ್ತಿ ಆಧಾರಿತ ಕೃಷಿ ಪಂಪ್‌ಸೆಟ್ ಬಳಕೆಯಿಂದ ಇಂಧನ ಉಳಿತಾಯ

## ಸಹಾಯಕ ಪ್ರಾಧ್ಯಾಪಕ ಡಾ.ರಾಜಶೇಖರ್ ಭಾರ್ಕೆರ್ ಹೇಳಿಕೆ



**ಚಿತ್ರದುರ್ಗ:** ಸೌರಶಕ್ತಿ ಆಧಾರಿತ ಕೃಷಿ ಪಂಪ್‌ಸೆಟ್‌ಗಳ ಬಳಸುವುದರಿಂದ ಇಂಧನ ಉಳಿತಾಯವಾಗುತ್ತದೆ. ರೈತರು ಕೃಷಿ ಹಾಗೂ ಗೃಹ ಬಳಕೆಗೆ ಬಿ.ಇ.ಇ ಸ್ಟಾರ್ ಲೇಬಲ್‌ವುಳ್ಳ ಪಂಪ್‌ಸೆಟ್ ಬಳಸಬೇಕು. ಇವು ಹೆಚ್ಚಿನ ಇಂಧನ ದಕ್ಷತೆ ಹೊಂದಿದ್ದು ವಿದ್ಯುತ್ ಉಳಿತಾಯಕ್ಕೆ ಸಹಕಾರಿಯಾಗಿವೆ ಎಂದು ಬಬ್ಬೂರು ತೋಟಗಾರಿಕೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ. ರಾಜಶೇಖರ್ ಭಾರ್ಕೆರ್ ಹೇಳಿದರು.

ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬ್ಯುರೋ ಆಫ್ ಎನರ್ಜಿ ಎಫಿಷಿಯೆನ್ಸಿ (ಬಿಇಇ) ಹಾಗೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ (ಕೆ.ಆರ್.ಇ.ಡಿ.ಎಲ್) ಇವರ ಸಹಯೋಗದೊಂದಿಗೆ ಶುಕ್ರವಾರ ಹಿರಿಯೂರು ತಾಲ್ಲೂಕು ಬಬ್ಬೂರಿನ ಫಾರಂನಲ್ಲಿ ಕೃಷಿ ಪಂಪ್‌ಸೆಟ್‌ಗಳು ಹಾಗೂ ಜಲಸಂರಕ್ಷಣೆ ಕುರಿತು ಹಮ್ಮಿಕೊಳ್ಳಲಾದ ದಿನದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೃಷಿ ಕ್ಷೇತ್ರದಲ್ಲಿ ಬಿ.ಇ.ಇ ಸ್ಟಾರ್ ರೇಟಿನ ಉಳ್ಳ ಪಂಪುಗಳನ್ನು ಬಳಸುವುದರಿಂದ ಅಂದಾಜು ಶೇ.30 ರಷ್ಟು ವಿದ್ಯುತ್ ಉಳಿತಾಯ ಸಾಧ್ಯವಿದೆ. ಸರಿಯಾದ ಪಂಪಿಂಗ್ ಸಿಸ್ಟಮ್ ಘಟಕಗಳನ್ನು ಆಯ್ಕೆ ಮಾಡುವ ಮೂಲಕ ವಿದ್ಯುತ್ ನಷ್ಟಗಳನ್ನು ಕಡಿಮೆ ಮಾಡಬಹುದು. ನೀರನ್ನು ಅನಾವಶ್ಯಕವಾಗಿ ಪೋಲು ಮಾಡಬಾರದು. ಏಕೆಂದರೆ, ನೀರೆತ್ತಲು ಹಾಗೂ ಸಾಗಿಸಲು ವಿದ್ಯುತ್ ಬೇಕು. ಆದುದರಿಂದ ನೀರನ್ನು ಮಿತವಾಗಿ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಬಳಸಿದರೆ ವಿದ್ಯುತ್ತಿನ ಉಳಿತಾಯ ಸಾಧ್ಯ. ಅಗತ್ಯ ಇಲ್ಲದಿರುವ ಸಮಯದಲ್ಲಿ ಕೃಷಿ ಪಂಪ್ ಸೆಟ್‌ಗಳನ್ನು ಹಾಗೂ ಇತರೆ ವಿದ್ಯುತ್ ಪರಿಕರಗಳನ್ನು ಬಂದು ಮಾಡಬೇಕು. ಪಂಪ್ ಸೆಟ್‌ಗಳಿಗೆ ಉತ್ತಮ ಗುಣಮಟ್ಟದ ವಿದ್ಯುತ್ ಕೇಬಲ್‌ಗಳನ್ನು ಅಳವಡಿಸುವುದರಿಂದ ಅವಘಡಗಳನ್ನು ತಡೆಯಬಹುದು. ಕಾಲಕಾಲಕ್ಕೆ ಪಂಪ್ ಸೆಟ್ ನಿರ್ವಹಣೆ ಮಾಡಬೇಕು ಎಂದರು.


ಸೆಲ್ಕೋ ಸಂಸ್ಥೆ ಚಿತ್ರದುರ್ಗ ಜಿಲ್ಲೆಯ ವ್ಯವಸ್ಥಾಪಕ ಮಂಜುನಾಥ ಭಗವಾತ್ ಮಾತನಾಡಿ ಕೃಷಿ ಪಂಪ್‌ಸೆಟ್‌ಗಳಿಗೆ ಪಿಎಂ ಕುಸುಮ್ ಯೋಜನೆಯಡಿ ಸೋಲಾರ್ ವಿದ್ಯುತ್ ಸಂಪರ್ಕ ನೀಡಬಹುದು. ಇದರ ಜೊತೆಗೆ ಪಿಎಂ ಸೂರ್ಯಘರ್ ಯೋಜನೆಯಡಿ ಮನೆಯಲ್ಲಿಯೂ ಸೌರ ವಿದ್ಯುತ್ ಉತ್ಪಾದನೆ ಮಾಡಬಹುದು. ಮಾರುಕಟ್ಟೆಯಲ್ಲಿ ಸೌರಶಕ್ತಿಯಿಂದ ಚಾಲಿತ ಕೃಷಿ ಪಂಪ್‌ಸೆಟ್‌ಗಳು, ಹಿಟ್ಟಿನಗಿರಣಿ, ರೊಟ್ಟಿ ತಯಾರಿಸುವ ಯಂತ್ರ, ಮನೆ ಉಪಕರಣಗಳು, ಸೋಲಾರ್ ಬಿಸಿ ನೀರಿನ ಘಟಕ, ವಿವಿಧ ಕೃಷಿ ಯಂತ್ರೋಪಕರಣಗಳ ದೊರಕುತ್ತವೆ. ಇವುಗಳಿಗೆ ಸರ್ಕಾರಿದಿಂದ ರಿಯಾಯಿತ ಸೌಲಭ್ಯ ದೊರಯುವುದು. ರೈತರು ಇದರ ಸದುಉಪಯೋಗ ಪಡೆದುಕೊಳ್ಳಬೇಕು ಎಂದರು.

ಜಲ ವಿಜ್ಞಾನಿ ಹಾಗೂ ಮಳೆನೀರು ಕೊಯ್ಲುತಜ್ಞ ಡಾ. ದೇವರಾಜರೆಡ್ಡಿಎನ್.ಜೆ. ತರಬೇತಿಯಲ್ಲಿ ಹಾಜರಿದ್ದ ರೈತರನ್ನು ಉದ್ದೇಶಿಸಿ ಮಳೆನೀರು ಕೊಯ್ಲು, ಬೋರ್‌ವೆಲ್ ಅಂತರ್ಜಲ ಮರುಪೂರಣ, ಮಳೆ ನೀರಿನ ಬಡ್ಜೆಟ್, ನೀರಿನ ಮಿತಬಳಕೆ ಮತ್ತು ಜಲಸಂರಕ್ಷಣೆ ಕುರಿತು ರೈತರಿಗೆ ತರಬೇತಿ ನೀಡದರು.

ಬೇಸಾಯ ಶಾಸ್ತ್ರಜ್ಞ ಅಂಜಿನಪ್ಪ ಮಾತನಾಡಿ ಹನಿ ಮತ್ತು ತುಂತುರು ನೀರಾವರಿಯಿಂದ ನೀರಿನ ಮಿತಬಳಕೆ ಸಾಧ್ಯವಿದೆ. ಹನಿ ನೀರಾವರಿ ಉಪಕರಣಗಳ ಆಯ್ಕೆ, ವಿನ್ಯಾಸ, ಆಳವಡಿಕೆ, ಕ್ಷೇತ್ರದಲ್ಲಿ ಉದ್ಭವಿಸುವ ಸಮಸ್ಯೆಗಳಿಗೆ ಪರಿಹಾರ, ರಸಾವರಿ ಮೂಲಕ ವಿವಿಧ ಪೋಷಕಾಂಶಗಳ ನಿರ್ವಹಣೆ ಮತ್ತು ವಿವಿಧ ರೀತಿಯ ಫಿಲ್ಟರ್‌ಗಳ ಆಳವಡಿಕೆ, ಆಸಿಡ್ ಕ್ಲೀನಿಂಗ್ ಕುರಿತು ತಿಳಿಸಿದರು.

ತರಬೇತಿ ಕಾರ್ಯಾಗಾರದಲ್ಲಿ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ. ಆರ್ ಕೃಷಿಕ ಸಮಾಜದ ಜಿಲ್ಲಾ ಅಧ್ಯಕ್ಷ ಎನ್.ಆರ್.ಮಹೇಶ್ವರಪ್ಪ, ಹಿರಿಯೂರು ತಾಲ್ಲೂಕಿನ ಕೃಷಿಕ ಸಮಾಜದ ಅಧ್ಯಕ್ಷ ಕಾಂತರಾಜ್, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳಿಯ ನಿರ್ದೇಶಕ ಕೆ ಜಗದೀಶಕಂದಿಕೆರೆ, ಹಿರಿಯೂರು ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಮಂಜುನಾಥ .ಎಮ್ ವಿ, ರೈತ ಮಹಿಳೆ ಪೂರ್ಣಿಮಾ ಬಡಿಗೇರ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

# ಶ್ರಾವಣ : 9ನೇ ದಿನದ ಕಾರ್ಯಕ್ರಮದಲ್ಲಿ ಮೂರು ಸಾವಿರದ ಶ್ರೀ ಸಿದ್ಧಲಿಂಗ ಸ್ವಾಮಿಗಳ ಸ್ಮರಣೆ



**ಚಿತ್ರದುರ್ಗ :** ಚಿತ್ರದುರ್ಗದ ಐತಿಹಾಸಿಕ ಬೃಹನ್ಮಠದ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಗುರುಪರಂಪರೆಯ ಏಳನೆಯ ಪೀಠಾಧಿಪತಿಗಳಾಗಿದ್ದ ಮೂರುಸಾವಿರದ ಸಿದ್ದಲಿಂಗ ಸ್ವಾಮಿಗಳು ಧರ್ಮಶಕ್ತಿ, ತತ್ವಬೋಧನೆ, ಮತ್ತು ಸಮಾಜಶುದ್ಧಿಗಾಗಿ ಸಮರ್ಪಣಾ ಭಾವದಿಂದ ಸಮಾಜ ಸೇವೆ ಮತ್ತು ಸುಧಾರಣೆ ಮಾಡುತ್ತಾ ಸಾಗಿದ್ದರು ಎಂದು ಎಸ್.ಜೆ.ಎಂ. ಪದವಿ ಕಾಲೇಜಿನ ಅಧ್ಯಾಪಕ ವಿಶ್ವನಾಥ್ ಸಿ.ಎಂ. ಅವರು ಮುರಘಾಪರಂಪರೆಯ ಇತಿಹಾಸ ಮೆಲುಕು ಹಾಕುತ್ತ ಗುರುಪರಂಪರೆಯ ಕೊಡುಗೆ ಸ್ಮರಿಸಿದರು.

ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಮೂಲಕರ್ತೃವಿನ ಶ್ರೀ ಮುರುಗಿಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾವಿಶ್ರಾಂತಿ ಸನ್ನಿಧಾನಲ್ಲಿಂದು ನಡೆದ ಒಂಭತ್ತನೆ ದಿನದ ಕಾರ್ಯಕ್ರಮದಲ್ಲಿ ಪರಂಪರೆಯ ಏಳನೇ ಪೀಠಾಧಿಪತಿಗಳಾದ ಮೂರುಸಾವಿರದ ಶ್ರೀ ಸಿದ್ಧಲಿಂಗ ಮುರುಘರಾಜೇಂದ್ರ ಮಹಾಸ್ವಾಮಿಗಳವರ ವ್ಯಕ್ತಿತ್ವ ಸಾಧನೆಯ ಪಥದರ್ಶನದ ಕುರಿತು ವಿಷಯಾವಲೋಕನ ಮಾಡುತ್ತಾ ಅವರು, ಸಿದ್ದಲಿಂಗ ಸ್ವಾಮಿಗಳು 1779 ರಿಂದ 1790ರ ವರೆಗೆ ಶೂನ್ಯಪೀಠವನ್ನು ಆಳಿದ ಧೈರ್ಯವಂತ ಗುರುಗಳು. ಅವರು ಧೀರತೆ, ಉದಾರತೆ, ಅಪಾರ ಕರುಣೆ, ಮತ್ತು ತತ್ವ ಜ್ಞಾನದಿಂದ ತುಂಬಿರುವ ಜ್ಞಾನಪಥದ ಮಹಾಸ್ವಾಮಿಗಳಾಗಿದ್ದರು. ಸಮಾಜದಲ್ಲಿ ನಡೆಯುತ್ತಿದ್ದ ಭಕ್ತರು ಮತ್ತು ಮಾಹೇಶ್ವರರ ನಡುವಿನ ಗೊಂದಲಗಳು, ವಾಮಾಚಾರದ ಪ್ರಭಾವ ಶುದ್ಧ ತತ್ವಬೋಧನೆಯ ಕೊರತೆ ಇವೆಲ್ಲವನ್ನೂ ಗುರುತಿಸಿ ಧೈರ್ಯದಿಂದ ಬದಲಾವಣೆಯನ್ನು ತಂದರು ಎಂದು ಹೇಳಿದರು.

ಆ ಕಾಲವೂ ಆಧ್ಯಾತ್ಮಿಕ ಗೊಂದಲಗಳ ಕಾಲಘಟ್ಟವಾಗಿದ್ದು, ಭಕ್ತರು ಮತ್ತು ಮಾಹೇಶ್ವರರು ಪರಸ್ಪರ ಮೇಲ್ಮಟ್ಟ, ಕೆಳಮಟ್ಟದ ಎಣಿಕೆಗಳಲ್ಲಿ ತೊಡಗಿದ್ದರು. ರಾಗ–ದ್ವೇಷದಿಂದ ಸಂಘರ್ಷ ಉಂಟಾಗಿತ್ತು. ಈ ಎಲ್ಲದಕ್ಕೂ ಕಾರಣ ಅಜ್ಞಾನ ಮತ್ತು ದುರಭಿಮಾನ ಎಂದರಿತ ಸಿದ್ಧಲಿಂಗ ಸ್ವಾಮಿಗಳು ಬಸವಾದಿಶರಣರ ವಚನತತ್ವಶಾಸ್ತ್ರ ಹಾಗೂ ಇತರ ಆಧಾರದಿಂದ ತೀರ್ಮಾನ ನೀಡುತ್ತಿದ್ದರು. ಇಬ್ಬರನ್ನೂ ಸಮಾನವಾಗಿ ಕಾಣುತ್ತಿದ್ದರು. ಆದರೆ ಕೆಲವು ಜನರು ಈ ತೀರ್ಮಾನವನ್ನು ತಿರಸ್ಕರಿಸಿದರೂ ಅವರು ಹೇಳುವುದನ್ನು ದಿಟ್ಟವಾಗಿ ಹೇಳುವ ಜಾಯಮಾನ ಅವರಲ್ಲಿತ್ತು. "ಧರ್ಮ ಅಂದರೆ ಹಕ್ಕು, ಮತದ ಸಹವಾಸ, ಬುದ್ಧಿವಾದ, ಭಕ್ತಿಯ ಶುದ್ಧತೆ"–ಅದು ಅಭಿಮಾನದಿಂದ ಹರಿಯುವದಲ್ಲ ಎಂದು ತಿಳಿಹೇಳುತ್ತಾ ವಾಮಾಚಾರದ ವಿರುದ್ಧ ಧರ್ಮಯುದ್ಧ ಆರಂಭಿಸಿದ್ದರು. ಅಂದುಸಮಾಜದ ಒಂದು ಶಾಖೆಯಲ್ಲಿ ವಾಮಾಚಾರ ಎಂಬ ದಾರಿತಪ್ಪಿಸುವ ಆಚರಣೆ ನಡೆಯುತ್ತಿದ್ದಿತ್ತು ಎಂದರು.

ಉದಾಹರಣೆಗೆ ಪಟ್ಟದಾರ್ಯ ಎಂಬುವರೊಬ್ಬರು ಜಕ್ಕಿಣಿದೇವಿಯ ನಾಮಕುಂಭವನ್ನು ಪೂಜಿಸುತ್ತಿದ್ದದ್ದು ಗುರುಗಳ ಗಮನಕ್ಕೆ ಬಂತು. ಅವರಿಗೆ ಕೆಲ ಪ್ರಶ್ನೆಗಳನ್ನು ಕೇಳಿದ ಶ್ರೀಗಳು "ಮೋಕ್ಷ ಕೊಡಬೇಕೆಂದು ಬರುವ ಭಕ್ತರಿಗೆ ನೀನು ಕುಂಭವಾಜಿ ತೋರಿಸಿ ಮೋಕ್ಷ ನೀಡುತ್ತೀಯಾ? "ಲಿಂಗಾಯತ ವೀರಶೈವ ಗುರುವಾಗಿ ನೀನು ವಾಮಾಚಾರದಲ್ಲಿ ತೊಡಗಿದ್ದರೆ ಭಕ್ತರು ಏನಂದುಕೊಳ್ಳುತ್ತಾರೆ?" "ಇದು ತತ್ವಪೂರ್ಣ ಗುರುತನವೇ ಅಥವಾ ಮೋಹಪೂರ್ಣವೇ? ಎಂದು ಪ್ರಶ್ನಿಸುತ್ತಾರೆ. ಇದನ್ನು ಕೇಳಿ ಪಟ್ಟದಾರ್ಯನು ಕಂಪಿಸಿದ ಮತ್ತು ಕ್ಷಮೆ ಕೇಳಿದ. ಸಿದ್ದಲಿಂಗ ಸ್ವಾಮಿಗಳವರು ಕೆಲ ಸಲಹೆ ನೀಡುತ್ತಾ, ಸತ್ಯದ ಮಾತುಗಳಿಂದ ಅವನಿಂದ ಕುಂಭಪೂಜೆಯನ್ನು ನಿಲ್ಲಿಸಿದರು. ವಾಮಾಚಾರವನ್ನು ತೊರೆಸಿ ಶುದ್ಧತತ್ವಬದ್ಧ ಮಾರ್ಗಕ್ಕೆ ಹಿಂದಿರುಗಿಸಿದರು. ಮುಂದೆ ಶ್ರೀಗಳವರು ಸಮಾಜ ಶುದ್ಧೀಕರಣದ ದಾರಿಯಲ್ಲಿ ಅವರ ಧರ್ಮಕಾರ್ಯ ಯಾತ್ರೆಯು ಸಾಗಿದ ಪರಿ ಅಜ್ಞಾನದಿಂದ ದಾರಿ ತಪ್ಪಿದವರಿಗೆ ಬೋಧನೆ ನೀಡುವುದು, ಕ್ರೂರ ಮನೋಭಾವದಲ್ಲಿದ್ದವರಿಗೆ ಕರುಣೆ ತೋರಿಸುವುದು, ದಾರಿತಪ್ಪಿದ ಪಟ್ಟದಾರ್ಯನಂತಹವರನ್ನೂ ಸರಿದಾರಿಗೆ ತರುವ ಕೆಲಸ ಅವರದ್ದಾಗಿತ್ತು. ಮಾತ್ರವಲ್ಲ, ಅವರ ಮಾತುಗಳು ಕೂಡ ಭಕ್ತರ ಮನಸ್ಸನ್ನು ಶುದ್ಧಗೊಳಿಸುತ್ತಿದ್ದವು. ಮಹಾಸ್ವಾಮಿಗಳವರ ಅಂತಿಮಘಟ್ಟ ರಾಣೆಬೆನ್ನೂರಿಗೆ ಹೋಗುವ ಬದಲು ಅವರು ಮಾಗಡಿಗೆ ಹೋದರು. ಅಲ್ಲಿ ಲಿಂಗಾನುಸಂಧಾನ ಮಾಡುತ್ತಾ, ಶುದ್ಧಚಿತ್ತದಿಂದ ಜೀವಿಸಿ, ಅಲ್ಲಿಯೇ ಬಯಲಾದರು. ಅವರ ಬದುಕು ಒಂದು ದೀಪವಾಗಿ, ಅನೇಕ ಭಕ್ತರ ಬಾಳಿಗೆ ಬೆಳಕನ್ನು ತೋರಿಸಿತು. ಅಂತಿಮವಾಗಿ "ಅಜ್ಞಾನಕ್ಕೊಂದು ಮಾರ್ಗವಿದೆ ಅದು ಜ್ಞಾನ." "ಅಹಂಕಾರಕ್ಕೊಂದು ಮಾರ್ಗವಿದೆ ಅದು ಶರಣಾಗತಿ." "ವಾಮಾಚಾರಕ್ಕೊಂದು ಪರಿಹಾರವಿದೆ ಶುದ್ಧಾಚಾರ." ಈ ತ್ರಿಸೂತ್ರವನ್ನು ತಮ್ಮ ಜೀವನದಿಂದ ನೈಜವಾಗಿ ತೋರಿಸಿದವರು ಮೂರುಸಾವಿರದ ಸಿದ್ದಲಿಂಗ ಮಹಾಸ್ವಾಮಿಗಳಾಗಿದ್ದರೆಂದು ಸ್ಮರಿಸಿದರು.

ಸಮಾರಂಭದ ಸಮ್ಮುಖ ವಹಿಸಿದ್ಧ ಶ್ರೀ ಮುರುಘೇಂದ್ರ ಸ್ವಾಮಿಗಳು ಮಾತನಾಡುತ್ತಾ, ಚಿನ್ಮೂಲಾದ್ರಿ ಸುಕ್ಷೇತ್ರ ಮುರುಘಾಮಠದ ಪೀಠಾಧಿಪತಿಗಳಾಗಿದ್ದ ಮೂರುಸಾವಿರದ ಸಿದ್ದಲಿಂಗ ಸ್ವಾಮಿಗಳು ಅವರ ಕಾಲದಲ್ಲಿ ಗುರುಪೀಠ, ವಿರಕ್ತಪೀಠ, ಶೂನ್ಯಪೀಠ, ನ್ಯಾಯಪೀಠವೂ ಆಗಿ ಕಾರ್ಯನಿರ್ವಹಿಸಿದೆ. ಆ ಕಾಲದಲ್ಲಿ ನ್ಯಾಯಾಲಯಗಳಿಲ್ಲದ ಕಾರಣ ಅನೇಕ ವ್ಯಾಜ್ಯಗಳನ್ನು ಬಗೆಹರಿಸಿದ ಕೀರ್ತಿ ಸಿದ್ದಲಿಂಗ ಸ್ವಾಮಿಗಳವರಿಗೆ ಸಲ್ಲುತ್ತದೆ. ಅವರಿಗೆ ನಿಷ್ಪಕ್ಷಪಾತವಾಗಿ ನ್ಯಾಯ ತೀರ್ಮಾನ ಮಾಡುವ ಕಲೆ ಕರಗತವಾಗಿತ್ತು. ಈ ಗುರುಗಳಿಗೆ ಚಿಕ್ಕ ವಯಸ್ಸಿನಲ್ಲಿಯೇ ವಿವೇಕ ಮತ್ತು ವೈರಾಗ್ಯ ಒಡಮೂಡಿದ್ದಿತು ಎಂದರೆ ತಪ್ಪಾಗಲಾರದು. ಲೋಕದ ವ್ಯವಹಾರ, ಸಂಪತ್ತು, ಅಧಿಕಾರದ ವ್ಯಾಮೋಹ ಅವರಲ್ಲಿರಲಿಲ್ಲ. ನಿರ್ಮೋಹಿಯಾಗಿದ್ದ ಶ್ರೀಗಳವರು ಚಿನ್ಮಯಮೂರ್ತಿಯಾಗಿ, ಜ್ಯೋತಿಯಾಗಿ ಈ ಸಮಾಜಕ್ಕೆ ಬೆಳಕನ್ನು ನೀಡಿ ಬಯಲಾದರು ಎಂದು ಚರಿತ್ರೆ ನೆನಪಿಸಿದರು.

ಸಮಾರಂಭದ ಸಾನಿಧ್ಯ ವಹಿಸಿದ್ದ ಬೃಹನ್ಮಠದ ಆಡಳಿತ ಮಂಡಳಿಯ ಸದಸ್ಯರ ಡಾ. ಬಸವ ಕುಮಾರ ಸ್ವಾಮಿಗಳು ಮಾತನಾಡಿ, ಸಿದ್ದಲಿಂಗ ಸ್ವಾಮಿಗಳ ಕಾಲಕ್ಕೂ ಸಮಾಜದಲ್ಲಿ ಪರಸ್ಪರ ತಿಕ್ಕಾಟ, ವೈಷಮ್ಯ, ಜಾತಿ ಕಲಹದಂತಹ ಸಮಸ್ಯೆಗಳಿದ್ದವು. ಅವುಗಳನ್ನು ಸಮಚಿತ್ತದಿಂದ ಬಗೆಹರಿಸುವ ಹೊಣೆಗಾರಿಕೆಯನ್ನು ಶ್ರೀಗಳು ಮಾಡಿದ್ದರು. ದಾರಿ ತಪ್ಪಿ ನಡೆಯುತ್ತಿದ್ದವರಿಗೆ ಬುದ್ಧಿ ಹೇಳುತ್ತ ಸಮಾಜವನ್ನು ಶುದ್ಧೀಕರಿಸುತ್ತಾ ನಾಡಿನ ಬೆಳವಣಿಗೆಗೆ ಕಾರಣರಾಗಿದ್ದರು ಎಂದು ಸ್ಮರಿಸಿದರು.

ಈ ಸಂದರ್ಭದಲ್ಲಿ ಸೇವಾಕರ್ತಾರಾದ ಶ್ರೀಮತಿ ಗಂಗಾಂಬಿಕಾ, ಶಂಕರ್, ಮಠದಕುರುಬರಹಟ್ಟಿಯ ಶಿವಯೋಗಿ ಕುಟುಂಬ, ವಚನ ಕಮ್ಮಟ ನಿರ್ದೇಶಕ ವೀರಭದ್ರಪ್ಪ, ಚಲ್ಮೇಶ್, ಶ್ರೀಮಠದ ಭಕ್ತರು, ಅಭಿಮಾನಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 'ಹಿಮಂತ ತಾನು ರಾಜ ಅಂದ್ಕೊಂಡಿದ್ದಾರೆ, ಆದರೆ ಭ್ರಷ್ಟಾಚಾರದಲ್ಲಿ ಜೈಲಿಗೆ ಹೋಗುತ್ತಾರೆ'



**ಚಾಯ್ಗಾಂವ್/ಗುವಾಹಟಿ:** ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಮ್ಮನ್ನು ತಾವು 'ರಾಜ' ಅಂದ್ಕೊಂಡಿದ್ದರೂ, ಭ್ರಷ್ಟಾಚಾರಕ್ಕಾಗಿ ಅವರನ್ನು ಜೈಲಿಗೆ ಹಾಕಲಾಗುವುದು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬುಧವಾರ ಹೇಳಿದ್ದಾರೆ.

ಬಿಜೆಪಿ ಮತ್ತು ಚುನಾವಣಾ ಆಯೋಗ, ಮಹಾರಾಷ್ಟ್ರ ಚುನಾವಣೆಯನ್ನು ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳಿಂದ "ಕದ್ದಿದೆ" ಮತ್ತು ಬಿಹಾರದಲ್ಲಿ ಅದನ್ನು ಪುನರಾವರ್ತಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ರಾಹುಲ್ ಗಾಂಧಿ, ಈಶಾನ್ಯ ರಾಜ್ಯದಲ್ಲಿ ಅಂತಹ ಯಾವುದೇ ಪ್ರಯತ್ನವನ್ನು ತಡೆಯಬೇಕು ಎಂದು ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು.

"ಮುಖ್ಯಮಂತ್ರಿ ತಮ್ಮನ್ನು ತಾವು 'ರಾಜ' ಎಂದು ಭಾವಿಸಿದ್ದಾರೆ ಮತ್ತು ದಿನದ 24 ಗಂಟೆ ನಿಮ್ಮ ಸಂಪತ್ತು, ಭೂಮಿಯನ್ನು ಅದಾನಿ ಹಾಗೂ ಅಂಬಾನಿಗೆ ಹಸ್ತಾಂತರಿಸುವಲ್ಲಿ ನಿರತರಾಗಿದ್ದಾರೆ. ಆದರೆ ಈಗ ಮುಖ್ಯಮಂತ್ರಿ ಭಯವಾಗುತ್ತಿದೆ. ಟಿವಿಯಲ್ಲಿ ಅವರ ಮುಖವನ್ನು ಹತ್ತಿರದಿಂದ ನೋಡಿ, ಭೀತ ಕಾಣಿಸುತ್ತದೆ" ಎಂದು ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದರು.

ಗುವಾಹಟಿಯಿಂದ ಸುಮಾರು 40 ಕಿ.ಮೀ ದೂರದಲ್ಲಿರುವ ಚಾಯ್ಗಾಂವ್‌ನಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಲೋಕಸಭೆಯ ವಿರೋಧ ಪಕ್ಷದ ನಾಯಕ, "ನಿರ್ಭೀತ ಕಾಂಗ್ರೆಸ್ ಕಾರ್ಯಕರ್ತರು ತಮ್ಮನ್ನು ಜೈಲಿಗೆ ಹಾಕುತ್ತಾರೆ ಎಂದು ಹಿಮಂತ ಶರ್ಮಾ ಅವರಿಗೆ ಗೊತ್ತಿದೆ" ಎಂದರು.

ಮುಖ್ಯಮಂತ್ರಿ ಮತ್ತು ಅವರ ಕುಟುಂಬವನ್ನು ಭ್ರಷ್ಟಾಚಾರಕ್ಕೆ ಹೊಣೆಗಾರರನ್ನಾಗಿ ಮಾಡಲಾಗುವುದು. ಮಾಧ್ಯಮಗಳು ಅವರನ್ನು ಜೈಲಿಗೆ ಹಾಕುವುದನ್ನು ತೋರಿಸುತ್ತವೆ ಮತ್ತು ನರೇಂದ್ರ ಮೋದಿ ಅಥವಾ ಅಮಿತ್ ಶಾ ಕೂಡ ಅವರನ್ನು ರಕ್ಷಿಸಲು ಸಾಧ್ಯವಿಲ್ಲ ಎಂದು ರಾಹುಲ್ ಗಾಂಧಿ ಹೇಳಿದರು.

# ಅಲೆಮಾರಿಗಳ ರಕ್ಷಣೆ ಸರ್ಕಾರದ ಹೊಣೆ : ಹೆಚ್.ಆಂಜನೇಯ



**ಚಿತ್ರದುರ್ಗ, ಜು.17:** ಅಲೆಮಾರಿ ಸಮುದಾಯದ ಅಪ್ರಾಪ್ತರ ಮೇಲೆ ಈಚೆಗೆ ನಡೆಯುತ್ತಿರುವ ಅತ್ಯಾಚಾರಗಳು ಆತಂಕ-ಕ್ಕೆ ಕಾರಣವಾಗಿದ್ದು, ಇದಕ್ಕೆ ತಡೆ ಹಾಕಲು ಸರ್ಕಾರ ಕಠಿಣ ಕ್ರಮಕೈಗೊಳ್ಳ ಬೇಕೆಂದು ಮಾಜಿ ಸಚಿವ ಹೆಚ್.ಆಂಜನೇಯ ತಿಳಿಸಿದರು.

ಕರ್ನಾಟಕ ಪರಿಶಿಷ್ಟ ಜಾತಿ ಅಲೆಮಾರಿ ಅಭಿವೃದ್ಧಿ ವೇದಿಕೆ ಆಶ್ರಯದಲ್ಲಿ ಬೆಂಗಳೂರಿನ ಶಾಸಕರ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಲೆಮಾರಿಗಳ ಮೇಲೆ ನಡೆಯುತ್ತಿರುವ ನಿರಂತರ ಅತ್ಯಾಚಾರ, ದೌರ್ಜನ್ಯ ಕೊಲೆಯಂತಹ ಗಂಭೀರ ವಿಚಾರಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲು ಸಿಎಂ ಸಿದ್ದರಾಮಯ್ಯ ಬಳಿ ನಿಯೋಗ ತೆರಳುವ ಅಗತ್ಯ ಇದೆ. ಈ ಮೂಲಕ ಅಲೆಮಾರಿಗಳ ಹಕ್ಕುಗಳ ಈಡೇರಿಕೆ ಜೊತೆಗೆ ಒಳಮೀಸಲಾತಿಯಲ್ಲಿ ಪ್ರತ್ಯೇಕ ಗುಂಪು ರಚಿಸಲು ಒತ್ತಡ ತರಬೇಕಿದೆ ಎಂದರು.

ದಿಕ್ಕುದೆಸೆ ಇಲ್ಲದ ಅಸ್ಪೃಶ್ಯ ನೋವು ಅನುಭವಿಸುತ್ತಿರುವ 49 ಅಲೆಮಾರಿ ಜಾತಿಗಳನ್ನು ನಾಗರಿಕ ಸಮಾಜದ ಮುಖ್ಯವಾಹಿನಿಗೆ ತರಲು ನಾವೆಲ್ಲರೂ ಬೆಂಬಲವಾಗಿ ನಿಲ್ಲಬೇಕಿದೆ. ಶೀಘ್ರದಲ್ಲೇ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ರಾಜ್ಯಮಟ್ಟದ ಅಲೆಮಾರಿಗಳ ಸಮಾವೇಶ ಏರ್ಪಡಿಸಿ ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕಾಗಿದೆ ಎಂದರು.

ಬೆಂಗಳೂರು ದಕ್ಷಿಣ ಜಿಲ್ಲೆ ಮಾಗಡಿ ತಾಲೂಕಿನ ತಾವರೆಕೆರೆಯಲ್ಲಿ 13 ವರ್ಷದ ಬಾಲಕಿಯ ಮೇಲೆ ಅತ್ಯಾಚಾರ ಮಾಡಿ ಕೊಲೆ ಮಾಡಿರುವ ಅಮಾನವೀಯ ಘಟನೆ ನಾಗರಿಕ ಸಮಾಜವೇ ತಲೆತಗ್ಗಿಸುವ ಹೇಯ ಕೃತ್ಯ. ಆ ನೊಂದ ಕುಟುಂಬಕ್ಕೆ ಪರಿಹಾರ, ಒಬ್ಬರಿಗೆ ಉದ್ಯೋಗ ನೀಡಲು ಸರ್ಕಾರದ ಮೇಲೆ ಒತ್ತಡ ತರಬೇಕಿದೆ ಎಂದು ತಿಳಿಸಿದರು.

ಕವಿ ಎಸ್.ಜಿ.ಸಿದ್ದರಾಮಯ್ಯ ಮಾತನಾಡಿ, ಅಶಕ್ತ, ಅಸ್ಪೃಶ್ಯ ಸಮುದಾಯದ ರಕ್ಷಣೆ ಸರ್ಕಾರ ಹೊಣೆಯಾಗಿದೆ. ಬಲಾಢ್ಯರು, ಬಹುಸಂಖ್ಯಾತರ ಜೊತೆ ಇವರನ್ನು ಸೇರಿಸಿ ಮೀಸಲಾತಿ ನೀಡುವ ಪದ್ಧತಿ ರದ್ದಾಗಬೇಕು. 49 ಅಲೆಮಾರಿಗಳಿಗೆ ಪ್ರತ್ಯೇಕ ಮೀಸಲಾತಿ ಸೌಲಭ್ಯ ನೀಡಬೇಕೆಂದು ಹೇಳಿದರು.

ಸಾಹಿತಿ ಡಾ.ಬಂಜಗೆರೆ ಜಯಪ್ರಕಾಶ್ ಮಾತನಾಡಿ, ಈ ಸಮುದಾಯಗಳ ಮೇಲಿನ ಅತ್ಯಾಚಾರ, ದೌರ್ಜನ್ಯಗಳಿಗೆ ಕಡಿವಾಣ ಹಾಕಲು ಹಾಗೂ ಈ ವರ್ಗವನ್ನು ಮುಖ್ಯವಾಹಿನಿಗೆ ತರಲು ಕಾನೂನು ಜಾರಿಗೊಳಿಸಬೇಕೆಂದು ಆಗ್ರಹಿಸಿದರು.

ಇವರ ಮೇಲೆ ದೌರ್ಜನ್ಯವನ್ನು ಎಸ್ಸಿ, ಎಸ್.ಟಿ. ಸಮುದಾಯದವರೇ ನಡೆಸಿದ್ದರೂ ಅವರ ವಿರುದ್ಧ ಕಠಿಣ ಕಾನೂನು ಕ್ರಮಕೈಗೊಳ್ಳಲು ಕಾಯ್ದೆಗೆ ತಿದ್ದುಪಡಿ ಮಾಡಿ ಇವರಿಗೆ ರಕ್ಷಣೆ ಒದಗಿಸುವ ಮಹತ್ವದ ನಿರ್ಧಾರ ಸರ್ಕಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಕೆಪಿಸಿಸಿ ಎಸ್‌ಸಿ ವಿಭಾಗದ ಅಧ್ಯಕ್ಷ ಧರ್ಮಸೇನ, ಪತ್ರಕರ್ತರಾದ ಜಾಣಗೆರೆ ವೆಂಕಟರಮಣಯ್ಯ, ಸಾಹಿತಿಗಳಾದ ವಡ್ಡಗೆರೆ ನಾಗರಾಜಯ್ಯ, ಡಾ.ಬಾಲಗುರುಮೂರ್ತಿ, ಆದಿಜಾಂಭವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಮಾದಿಗ ಮೀಸಲಾತಿ ಹೋರಾಟ ಸಮಿತಿ ಮುಖಂಡರಾದ ಅಂಬಣ್ಣ ಆರೋಲಿಕರ, ಭೀಮಾಶಂಕರ್, ಅಲೆಮಾರಿ ಮುಖಂಡರಾದ ಶೇಷಪ್ಪ ಅಂದೋಳ್ ಮಾತನಾಡಿದರು.

ಈ ಸಂದರ್ಭದಲ್ಲಿ ಅಲೆಮಾರಿ ಸಮುದಾಯದ ಪ್ರಮುಖರಾದ ಚಾವಡೆ ಲೋಕೇಶ್, ಲೋಹಿತ್, ಕೆ.ವೀರೇಶ್, ಸುಭಾಷ್ ಚವಾಣ್, ಶಾಂತರಾಜ್, ಶಿವಕುಮಾರ್ ಬಳ್ಳಾರಿ, ಹನುಮಂತು, ಬಸವರಾಜ್ ನಾರಾಯಣಕೆರೆ, ಸಾವಿತ್ರಮ್ಮ ರತ್ನಾಕರ್, ಮಹಾಂತೇಶ್ ಸಂಕಲ್ ಇದ್ದರು.

# ಭಟ್ಕಳ ಸ್ಫೋಟಿಸುವ ಬೆದರಿಕೆ ಹಾಕಿದ್ದ ವ್ಯಕ್ತಿ ಬಂಧನ



**ಭಟ್ಕಳ:** ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ನಗರವನ್ನು ಸ್ಫೋಟಿಸುವುದಾಗಿ ಬೆದರಿ-ಕೆ ಹಾಕಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಕೇರಳ ಮೂಲದ ಖಾಲಿದ್ ಅಲಿಯಾಸ್ ನಿತಿನ್ ಶರ್ಮಾ ಎಂಬಾತನನ್ನು ಉತ್ತರ ಕನ್ನಡ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕೆಲ ದಿನಗಳ ಹಿಂದಷ್ಟೇ ಭಟ್ಕಳ ನಗರವನ್ನು ಸ್ಫೋಟ ಮಾಡುವುದಾಗಿ ಆರೋಪಿ ಖಾಲಿದ್ ಭಟ್ಕಳ ಪೊಲೀಸರಿಗೆ ಇಮೇಲ್ ಮಾಡಿದ್ದ. ಈಗಾಗಲೇ ಜೈಲಿನಲ್ಲೇ ಇರುವ ಆರೋಪಿ ಖಾಲಿದ್‌ನನ್ನು ಪೊಲೀಸರು ವಶಕ್ಕೆ ಪಡೆದಿದ್ದು, ತನಿಖೆ ವೇಳೆ ಹಲವಾರು ಸ್ಫೋಟಕ ವಿಚಾರಗಳು ಬೆಳಕಿಗೆ ಬಂದಿವೆ.

ಇದೇ ಜುಲೈ 10ರಂದು ಬೆಳಗ್ಗೆ 7.23ರ ಸುಮಾರಿಗೆ ಭಟ್ಕಳ ನಗರ ಠಾಣೆ ಪೊಲೀಸರಿಗೆ ಬೆದರಿಕೆ ಇಮೇಲ್ ಬಂದಿತ್ತು. ಭಟ್ಕಳ ನಗರವನ್ನು ಸ್ಫೋಟ ಮಾಡುವುದಾಗಿ ಆರೋಪಿ ಬೆದರಿ-ಕೆ ಹಾಕಿದ್ದ. ತಕ್ಷಣವೇ ಕಾರ್ಯಪ್ರವೃತ್ತರಾದ ಪೊಲೀಸರು, ಭಟ್ಕಳ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಇತರ ಪ್ರಮುಖ ಪ್ರದೇಶಗಳಲ್ಲಿ ಪರಿಶೀಲನೆ ನಡೆಸಿದ್ದರು. ಬಾಂಬ್ ನಿಷ್ಕ್ರಿಯ ದಳ, ಶ್ವಾನದಳದ ಸಹಾಯದಿಂದ ತಪಾಸಣೆ ನಡೆಸಿದ್ದರು.

ಕಣ್ಣನ್ ಎಂಬ ಇಮೇಲ್‌ನಿಂದ ಆರೋಪಿ ಸ್ಫೋಟದ ಬೆದರಿಕೆ ಹಾಕಿದ್ದ. ಇದರ ಜಾಡು ಹಿಡಿದ ಪೊಲೀಸರು ಇಮೇಲ್ ಕಳಿಸಿದ್ದ ಮೊಬೈಲ್ ಐಎಂಇಐ ಆಧಾರದ ಮೇಲೆ ತಮಿಳುನಾಡಿನಲ್ಲಿ ಕಣ್ಣನ್ ಗುರುಸಾಮಿ ಎಂಬಾತನನ್ನು ಬಂಧಿಸಿದ್ದರು. ಈ ವೇಳೆ ಭಟ್ಕಳ ಪೊಲೀಸರು ವಿಚಾರಣೆ ನಡೆಸಿದಾಗ ಆರೋಪಿ ಖಾಲಿದ್ ಅಲಿಯಾಸ್ ನಿತಿನ್ ಶರ್ಮಾ ಬಗ್ಗೆ ಮಾಹಿತಿ ಲಭ್ಯವಾಗಿದೆ.

ಕಣ್ಣನ್ ಗುರುಸ್ವಾಮಿ ಎಂಬಾತ ಯಾವುದೋ ಕೇಸ್‌ನಲ್ಲಿ ಬಂಧಿತನಾಗಿ, ಕೇರಳದ ಮುನ್ನಾರ್ ಠಾಣೆಯಲ್ಲಿದ್ದ. ಈ ವೇಳೆ ಖಾಲಿದ್ ಕೂಡ ಅರೆಸ್ಟ್ ಆಗಿದ್ದು, ಅದೇ ಠಾಣೆಗೆ ಕರೆತರಲಾಗಿತ್ತು. ಈ ವೇಳೆ ಕಣ್ಣನ್ ಗುರುಸ್ವಾಮಿ ಪರಿಚಯ ಮಾಡಿಕೊಂಡ ಖಾಲೀದ್, ಆತನ ಮೊಬೈಲ್‌ನಿಂದಲೇ ಆತನ ಇಮೇಲ್ ಮೂಲಕವೇ ಭಟ್ಕಳ ಠಾಣೆ ಪೊಲೀಸರಿಗೆ ಇಮೇಲ್ ಮಾಡಿ, ಸ್ಫೋಟದ ಬೆದರಿಕೆ ಹಾಕಿದ್ದ.

ಖಾಲಿದ್‌ನ ಮೂಲ ಹೆಸರು ನಿತಿನ್ ಶರ್ಮಾ. ಈ ಹಿಂದೆ ಹಿಂದೂವಾಗಿದ್ದ ನಿತಿನ್ ಶರ್ಮಾ, ಬಳಿಕ ಧರ್ಮ ಬದಲಾಯಿಸಿಕೊಂಡು, ಖಾಲಿದ್ ಎಂದು ಹೆಸರು ಬದಲಾಯಿಸಿಕೊಂಡಿದ್ದ. ಈತ ಈಗಾಗಲೇ 16 ಅಪರಾಧ ಪ್ರಕರಣಗಳಲ್ಲಿ ಆರೋಪಿಯಾಗಿದ್ದು, ಕೇರಳ, ಪುದುಚೇರಿ, ದೆಹಲಿ, ಮಧ್ಯಪ್ರದೇಶ, ಒಡಿಶಾ, ಆಂಧ್ರಪ್ರದೇಶ, ಉತ್ತರಾಖಂಡ್ ಮತ್ತು ಕರ್ನಾಟಕದಲ್ಲಿ ಸೇರಿದಂತೆ ಹಲವು ರಾಜ್ಯಗಳಲ್ಲಿ ಈತನ ಮೇಲೆ ವಿವಿಧ ಪ್ರಕರಣಗಳು ದಾಖಲಾಗಿವೆ.

2016-17ರಲ್ಲಿ ದೆಹಲಿಯ ತಿಹಾರ್ ಜೈಲಿನಲ್ಲಿ ಒಂದು ವರ್ಷ ಕಾಲ ಶಿಕ್ಷೆಯನ್ನೂ ಅನುಭವಿಸಿದ್ದಾನೆ. ಸದ್ಯ ಖಾಲಿದ್‌ನನ್ನು ವಶಕ್ಕೆ ಪಡೆಯುವಲ್ಲಿ ಭಟ್ಕಳ ಪೊಲೀಸರು ಮತ್ತು ಸೈಬರ್ ತನಿಖಾ ವಿಭಾಗದ ಪೊಲೀಸರು ಯಶಸ್ವಿಯಾಗಿದ್ದಾರೆ. ಪೊಲೀಸರು ಈಗಾಗಲೇ ಕಣ್ಣನ್ ಗುರುಸ್ವಾಮಿಯನ್ನು ವಿಚಾರಣೆ ನಡೆಸಿದ್ದು, ಬಾಂಬ್ ಬೆದರಿಕೆ ಹಾಕಿದ್ದ ಆರೋಪಿ ಖಾಲಿದ್ ಬಗ್ಗೆ ವಿಚಾರಿಸಿದ್ದಾರೆ. ಆತ ಕಣ್ಣನ್ ಗುರುಸ್ವಾಮಿಯಿಂದ ಮೊಬೈಲ್ ಹೇಗೆ ಪಡೆದುಕೊಂಡ ಎಂಬುದರ ಬಗ್ಗೆ ಮಾಹಿತಿ ಕಲೆಹಾಕುತ್ತಿದ್ದಾರೆ. ಅಲ್ಲದೆ, ಕಣ್ಣನ್ ಮತ್ತು ಬಾಂಬ್ ಬೆದರಿಕೆ ಹಾಕಿದ್ದ ಆರೋಪಿಯ ನಡುವಿನ ಭೇಟಿಯ ಕುರಿತು ಪೊಲೀಸರು ತೀವ್ರ ವಿಚಾರಣೆ ನಡೆಸುತ್ತಿದ್ದಾರೆ.

## ರೈತರಿಗೆ ಗುಡ್‌ನ್ಯೂಸ್

# ಹೇಮಾವತಿ ಜಲಾಶಯದಿಂದ ಎಡ, ಬಲದಂಡೆಗೆ ನೀರು ಬಿಡುಗಡೆ ಆರಂಭ



**ಹಾಸನ:** ಖಾರೀಫ್ ಬೆಳೆಗಳಿಗೆ ಹೇಮಾವತಿ ಜಲಾಶಯದ ಎಡದಂಡೆ ಹಾಗೂ ಬಲದಂಡೆ ನಾಲೆಗಳಲ್ಲಿ ಜುಲೈ 16 ರಿಂದ ನವೆಂಬರ್ 30 ರವರೆಗೆ ನೀರು ಹರಿಸಲಾಗುತ್ತಿದೆ ಎಂದು ಗೊರೂರು ಹೇಮಾವತಿ ಯೋಜನಾ ವೃತ್ತದ ಸದಸ್ಯ ಕಾರ್ಯದರ್ಶಿ ಮತ್ತು ಹೇಮಾವತಿ ಜಲಾಶಯ ಯೋಜನೆ ಹಾಗೂ ಸೂಪರಿಂಟೆಂಡೆಂಟ್ ಎಂಜಿನಿಯರ್ ತಿಳಿಸಿದ್ದಾರೆ.

ಹೇಮಾವತಿ ಜಲಾನಯನ ಪ್ರದೇಶದಲ್ಲಿ ಬಿದ್ದ ಉತ್ತಮ ಮಳೆಯಿಂದಾಗಿ ಜಲಾಶಯವು ತುಂಬಿರುವ ಹಿನ್ನೆಲೆ ಜುಲೈ 15 ರಂದು ಉಸ್ತುವಾರಿ ಸಚಿವ ಕೆ.ಎನ್ ರಾಜಣ್ಣ ಹಾಗೂ ಹೇಮಾವತಿ ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿನಡೆದ ಹೇಮಾವತಿ ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಜಲಾಶಯದಿಂದ ಬೆಳೆಗೆ ನೀರು ಹರಿಸಲು ತೀರ್ಮಾನಿಸಲಾಗಿದೆ ಎಂದು ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿ ತಿಳಿಸಿದೆ.

ಹೇಮಾವತಿ ಬಲಮೇಲ್ದಂಡೆ ನಾಲೆ ಪ್ರಾರಂಭದಿಂದ 97ನೇ ಕಿ.ಮೀ.ವರೆಗೆ ನೀರು ಹೇಮಾವತಿ ಎಡದಂಡೆ ನಾಲೆ ಪ್ರಾರಂಭದಿಂದ 212ನೇ ಕಿ ಮೀವರೆಗೆ 1 ರಿಂದ 72 ರ ವರೆಗೆ ವಿತರಣಾ ನಾಲಾ, ಅರೆಖುಷ್ಕಿ 78915 ಒಟ್ಟು 78915 ಹೇಮಾವತಿ ಬಲದಂಡೆ ನಾಲೆ ಪ್ರಾರಂಭದಿಂದ 91 ನೇ ಕಿ.ಮೀ.ವರೆಗೆ 1 ರಿಂದ 57ರ ವರೆಗೆ ವಿತರಣಾ ನಾಲಾ, ಭತ್ತ 2833, ಅರೆಖುಷ್ಕಿ 5261 ಒಟ್ಟು 8094, ಪ್ರದೇಶಕ್ಕೆ ನೀರು ಬಿಡಲಾಗುವುದು.

ಹೇಮಾವತಿ ಬಲಮೇಲ್ದಂಡೆ ನಾಲೆ ಪ್ರಾರಂಭದಿಂದ 97ನೇ ಕಿ.ಮೀ.ವರೆಗೆ, 1 ರಿಂದ 41 ರ ವರೆಗೆ ವಿತರಣಾ ನಾಲಾ, ಭತ್ತ 2428, ಅರೆಖುಷ್ಕಿ 20234 ಒಟ್ಟು 22,662 ಹೆಕ್ಟೇರ್‌ಗೆ ನೀರು ಹರಿಸಲಾಗುವುದು.

ಚಂಗರವಳ್ಳಿ ಕಾಲುವೆ ಭತ್ತ 328 ಹೆಕ್ಟೇರ್, ಶ್ರೀರಾಮದೇವರ ದಕ್ಷಿಣ ನಾಲೆ ಭತ್ತ 892, ಶ್ರೀರಾಮದೇವರ ಉತ್ತರ ನಾಲೆಭತ್ತ 3830, ಹೇಮಗಿರಿ ನಾಲೆ ಭತ್ತ 1609, ಅಕ್ಕಿಹೆಬ್ಬಾಳು ನಾಲೆ ಭತ್ತ 150, ಮಂದಗೆರೆ ಎಡದಂಡೆ ನಾಲೆಭತ್ತ 1938, ಮಂದಗೆರೆ ಬಲದಂಡೆ ನಾಲೆಭತ್ತ 4706 ಒಟ್ಟುಭತ್ತ 13453 ಹೆಕ್ಟೇರ್‌ಗೆ ನಾಲೆ ಮೂಲಕ ನೀರು ಬಿಡುವ ಅವಧಿ ಜುಲೈ 16 ರಿಂದ ನವೆಂಬರ್ 30 ರವರೆಗೆ ಆಗಿದೆ ಎಂದು ತಿಳಿಸಲಾಗಿದೆ.

ಹೇಮಾವತಿ ಜಲಾಶಯದಲ್ಲಿಇರುವ ನೀರಿನ ಶೇಖರಣೆ ಮತ್ತು ಮಳೆಯನ್ನು ಆಧರಿಸಿ, ಜಲಾಶಯಕ್ಕೆ ಹರಿದು ಬರಬಹುದಾದ ಪರಿಮಾಣವನ್ನು ಅಂದಾಜು ಮಾಡಲಾಗಿದ್ದು, ಇಂತಹ ನಿಯಂತ್ರಣ ಪ್ರಾಕೃತಿಕ ಅಥವಾ ನೈಸರ್ಗಿಕ ವ್ಯತ್ಯಾಸದಿಂದ ನೀರಿನ ಕೊರತೆ ಉಂಟಾಗಿ ಬೆಳೆ ನಷ್ಟವಾದಲ್ಲಿಇಲಾಖೆ ಜವಾಬ್ದಾರಿಯಲ್ಲ ಹಾಗೂ ರೈತರಿಗೆ ಇದ-ರಿಂದ ಯಾವುದೇ ಪರಿಹಾರ ಕೇಳುವ ಹಕ್ಕು ಇರುವುದಿಲ್ಲ,"ಎಂದು ತಿಳಿಸಲಾಗಿದೆ.

**ರೈತರು ನಿಗದಿತ ಬೆಳೆಯನ್ನೇ ಬೆಳೆಯತಕ್ಕದ್ದು:** ರೈತರು ಪ್ರಕಟಣೆಗೆ ಅನುಸಾರವಾಗಿ ನಿಗದಿತ ಬೆಳೆಯನ್ನೇ ಬೆಳೆಯತಕ್ಕದ್ದು, ವಿರುದ್ಧವಾಗಿ ಬೇರೆ ಬೆಳೆ ಬೆಳೆದಲ್ಲಿಕರ್ನಾಟಕ ನೀರಾವರಿ ಕಾಯಿದೆಯ ಹಾಗೂ ಚಾಲ್ತಿಯಲ್ಲಿರುವ ನಿಯಮಾವಳಿಗಳ ಪ್ರಕಾರ ದಂಡವನ್ನು ವಿಧಿಸಲಾಗುವುದು ಹಾಗೂ ಆಗಬಹುದಾದ ನೀರಿನ ಕೊರತೆ ಮತ್ತು ಬೆಳೆ ನಷ್ಟಕ್ಕೆ ರೈತ-ರೇ ಜವಾಬ್ದಾರಾಗಿರುತ್ತಾರೆ ಎಂದು ಎಚ್ಚರಿಕೆ ನೀಡಿದೆ.

# ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ: ನೋಂದಣಿ ಆರಂಭ

**ಚಿತ್ರದುರ್ಗ :** ಚಿತ್ರದುರ್ಗ ಜಿಲ್ಲೆಯಲ್ಲಿ 2025-26ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚಿಸಲಾಗಿದ್ದು, ನೋಂದಣಿ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಗ್ರಾಮ ಪಂಚಾಯಿತಿ ಮಟ್ಟದ ವಿಮಾ ಘಟಕ-ಕ್ಕೆ ಚಳ್ಳಕೆರೆ ತಾಲ್ಲೂಕಿಗೆ ಶೇಂಗಾ (ಮಳೆಯಾಶ್ರಿತ), ಚಿತ್ರದುರ್ಗ ತಾಲ್ಲೂಕಿಗೆ ಮುಸುಕಿನ ಜೋಳ (ಮಳೆಯಾಶ್ರಿತ) ಹಿರಿಯೂರು ತಾಲ್ಲೂಕಿಗೆ ನೆಲಗಡಲೆ (ಶೇಂಗಾ) (ಮಳೆಯಾಶ್ರಿತ) ಮತ್ತು ಸೂರ್ಯಕಾಂತಿ (ಮಳೆಯಾಶ್ರಿತ), ಹೊಳಲ್ಕೆರೆ ತಾಲ್ಲೂಕಿಗೆ ಮುಸುಕಿನ ಜೋಳ (ಮಳೆಯಾಶ್ರಿತ) ಮತ್ತು ರಾಗಿ (ಮಳೆಯಾಶ್ರಿತ) ಮೊಳಕಾಲ್ಮೂರು ತಾಲ್ಲೂಕಿಗೆ ನೆಲಗಡಲೆ (ಶೇಂಗಾ) (ಮಳೆಯಾಶ್ರಿತ), ಹೊಸದುರ್ಗ ತಾಲ್ಲೂಕಿಗೆ ರಾಗಿ (ಮಳೆಯಾಶ್ರಿತ) ಬೆಳೆಗಳನ್ನು ಮುಂಗಾರು ಹಂಗಾಮಿಗೆ ಬೆಳೆ ವಿಮೆಗೆ ಅಧಿಸೂಚನೆ ಮಾಡಲಾಗಿದೆ.

ಹೋಬಳಿ ಮಟ್ಟದ ವಿಮಾ ಘಟಕಗಳಿಗೆ ಹತ್ತಿ (ನೀರಾವರಿ), ಹತ್ತಿ (ಮಳೆಯಾಶ್ರಿತ), ಹೆಸರು (ಮಳೆಯಾಶ್ರಿತ) ಶೇಂಗಾ(ಮಳೆಯಾಶ್ರಿತ), ಶೇಂಗಾ (ನೀರಾವರಿ), ಹುರುಳಿ (ಮಳೆಯಾಶ್ರಿತ), ಮುಸುಕಿನ ಜೋಳ (ನೀರಾವರಿ), ಮುಸುಕಿನ ಜೋಳ (ಮಳೆಯಾಶ್ರಿತ), ನವಣೆ (ಮಳೆಯಾಶ್ರಿತ), ಈರುಳ್ಳಿ (ನೀರಾವರಿ), ಈರುಳ್ಳಿ (ಮಳೆಯಾಶ್ರಿತ), ಭತ್ತ (ನೀರಾವರಿ), ಸಜ್ಜೆ (ಮಳೆಯಾಶ್ರಿತ), ತೊಗರಿ (ಮಳೆಯಾಶ್ರಿತ), ರಾಗಿ (ನೀರಾವರಿ), ರಾಗಿ (ಮಳೆಯಾಶ್ರಿತ), ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ), ಸಾವೆ (ಮಳೆಯಾಶ್ರಿತ), ಎಳ್ಳು (ಮಳೆಯಾಶ್ರಿತ), ಜೋಳ (ನೀರಾವರಿ), ಜೋಳ (ಮಳೆಯಾಶ್ರಿತ), ಸೂರ್ಯಕಾಂತಿ (ನೀರಾವರಿ), ಸೂರ್ಯಕಾಂತಿ (ಮಳೆಯಾಶ್ರಿತ), ಟೊಮ್ಯಾಟೊ ಬೆಳೆಗಳಿಗೆ ವಿಮೆಗೆ ನೋಂದಾಯಿಸಲು ಅಧಿಸೂಚನೆ ಮಾಡಲಾಗಿದೆ. (ತಮ್ಮ ಹೋಬಳಿ ಮಟ್ಟದ ಬೆಳೆಯ ವಿವರವನ್ನು ಸಂಬಂಧಪಟ್ಟ ಕೃಷಿ ಅಧಿಕಾರಿಗಳು ರೈತ ಸಂಪರ್ಕಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ಕೋರಿದೆ)

ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆ-ಯದ ಆಸಕ್ತ ರೈತರು ಬೆಳೆ ವಿಮೆಗೆ ನೋಂದಣಿ ಮಾಡಲು ಹೆಸರು (ಮಳೆಯಾಶ್ರಿತ), ಮತ್ತು ಈರುಳ್ಳಿ (ನೀರಾವರಿ), ಬೆಳೆಗಳಿಗೆ ದಿನಾಂಕ:15-07-2025 ಮತ್ತು ಹತ್ತಿ (ನೀರಾವರಿ) ಹತ್ತಿ (ಮಳೆಯಾಶ್ರಿತ), ಶೇಂಗಾ (ನೀರಾವರಿ), ಶೇಂಗಾ (ಮಳೆಯಾಶ್ರಿತ), ಹುರುಳಿ (ಮಳೆಯಾಶ್ರಿತ), ಮೆಕ್ಕೆಜೋಳ (ನೀರಾವರಿ), ಮೆಕ್ಕೆಜೋಳ (ಮಳೆಯಾಶ್ರಿತ), ಈರುಳ್ಳಿ (ಮಳೆಯಾಶ್ರಿತ), ಸಜ್ಜೆ (ಮಳೆಯಾಶ್ರಿತ), ತೊಗರಿ (ಮಳೆಯಾಶ್ರಿತ), ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ), ಸಾವೆ (ಮಳೆಯಾಶ್ರಿತ), ಎಳ್ಳು (ಮಳೆಯಾಶ್ರಿತ), ಜೋಳ (ಮಳೆಯಾಶ್ರಿತ), ಜೋಳ (ನೀರಾವರಿ), ಸೂರ್ಯಕಾಂತಿ (ನೀರಾವರಿ), ಸೂರ್ಯಕಾಂತಿ (ಮಳೆಯಾಶ್ರಿತ), ಟೊಮ್ಯಾಟೊ ಬೆಳೆಗಳಿಗೆ ದಿನಾಂಕ: 31-07-2025ರಂದು ಹಾಗೂ ನವಣೆ (ಮಳೆಯಾಶ್ರಿತ) ಭತ್ತ (ನೀರಾವರಿ), ರಾಗಿ (ಮಳೆಯಾಶ್ರಿತ), ರಾಗಿ (ನೀರಾವರಿ) ಬೆಳೆಗಳಿಗೆ ದಿನಾಂಕ:16-08-2025 ಕೊನೆಯ ದಿನಾಂಕವಾಗಿರುತ್ತದೆ.

ಬ್ಯಾಂಕಿನಲ್ಲಿ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಡಿಯಲ್ಲಿ ಒಳಪಡಿಸಲಾಗುವುದು. ತದನಂತರ ಬೆಳೆ ಸಾಲ ಪಡೆದ ರೈತರು ಈ ಯೋಜನೆಯಲ್ಲಿ ಭಾಗವಹಿಸಲು ಇಚ್ಛೆ ಪಡದೇ ಇದ್ದಲ್ಲಿ, ಈ ಕುರಿತು ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೋಂದಣಿಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು.

ಆರ್ಥಿಕ ಸಂಸ್ಥೆಗಳು/ಬ್ಯಾಂಕ್/ಸಾರ್ವಜನಿಕ ಸೇವಾ ಕೇಂದ್ರ (ಅಠಟಟಠಟಿ ಖಜಡಿತುಭಿಜ ಅಜಟಣಜಢಿ)ಗಳಲ್ಲಿ ರೈತರನ್ನು ಬೆಳೆ ವಿಮೆಗೆ ನೋಂದಾಯಿಸಿದಾಗ ಬೆಳೆ ವಿಮೆ ಪ್ರಸ್ತಾವನೆಯನ್ನು ಹಾಗೂ ವಿಮಾಕಂತನ್ನು ನಿಗಧಿತ ಸಮಯದೊಳಗೆ ನಿಯಮಾನುಸಾರ ಅನುಷ್ಟಾನ ವಿಮಾ ಸಂಸ್ಥೆಗಳಿಗೆ ವರ್ಗಾಯಿಸಲು ಕ್ರಮಕೈಗೊಳ್ಳತಕ್ಕದ್ದು, ನೋಂದಣಿ ಪ್ರಕ್ರಿಯೆಯ ಹಂತದಲ್ಲಿ ಮೇಲೆ ತಿಳಿಸಿದ ಸಂಸ್ಥೆಗಳ ನಿರ್ಲಕ್ಷದಿಂದ ಯಾವುದೇ ಲೋಪ ದೋಷಗಳು ಉಂಟಾದಲ್ಲಿ ಅದರಿಂಗಾಗುವ ಬೆಳೆ ವಿಮೆ ಪರಿಹಾರ ವ್ಯಾಜ್ಯಗಳಿಗೆ ಸಂಬಂಧಿಸಿದ ಸಂಸ್ಥೆಗಳೆ ನೇರ ಹೊಣೆಗಾರರಾಗಿರುತ್ತಾರೆ.

ಆಸಕ್ತ ರೈತರು ತಮ್ಮ ವ್ಯಾಪ್ತಿಯ ಬ್ಯಾಂಕುಗಳಲ್ಲಿ ಹಾಗೂ ಅನುಮೋದಿತ ಸಾರ್ವಜನಿಕ ಸೇವಾ ಕೇಂದ್ರಗಳಲ್ಲೂ ವಿಮೆಗೆ ನೋಂದಣಿ ಮಾಡಬಹುದಾಗಿದೆ. ಚಿತ್ರದುರ್ಗ ಜಿಲ್ಲೆಗೆ Oriental General Insurance Company, ಅನುಷ್ಟಾನ ಸಂಸ್ಥೆಯಾಗಿರುತ್ತದೆ. ರೈತರು ನೋಂದಾಣಿಗಾಗಿ ಕಡ್ಡಾಯವಾಗಿ FRUITS ID (FID) ಹೊಂದಿರಬೇಕು.

ಆಸಕ್ತ ರೈತ ಬಾಂದವರು ನಿಗಧಿತ ದಿನಾಂಕದೊಳಗೆ ಬೆಳೆ ವಿಮೆಗೆ ನೋಂದಾವಣೆ ಮಾಡಲು ವಿನಂತಿಸಿದೆ. ಅಂತಿಮ ಸಮಯದಲ್ಲಿ ಜನದಟ್ಟಣೆಯಿಂದಾಗಿ ನೋಂದಾಣಿಯಲ್ಲಿ ತಪ್ಪುಗಳು ಸಂಭವಿಸಿ, ವಿಮೆ ಪರಿಹಾರ ಬಾರದಿರುವ ಸಂಭವವಿರುತ್ತದೆ. ಇದಕ್ಕೆ ಅವಕಾಶ ಕೊಡದೇ ಸಕಾಲದಲ್ಲಿ ನೋಂದಾವಣೆ ಮಾಡಲು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಕೋರಿದ್ದಾರೆ.

# ರಕ್ತದಾನ ಮಾಡುವ ಮೂಲಕ ಮತ್ತೊಬ್ಬರ ಜೀವ ಉಳಿಸಬಹುದು



**ಬಳ್ಳಾರಿ :** ಆರೋಗ್ಯವಂತ ಪ್ರತಿಯೊಬ್ಬರೂ ರಕ್ತದಾನ ಮಾಡುವ ಮೂಲಕ ಮತ್ತೊಬ್ಬರ ಜೀವ ಉಳಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರಕ್ತ ಸುರಕ್ಷತಾ ಟಾಸ್ಕ್ ಫೋರ್ಸ್ ಸಮಿತಿ ಹಾಗೂ ಏಡ್ಸ್ ನಿಯಂತ್ರಣ ಘಟಕ ಸಹಕಾರದೊಂದಿಗೆ ಸ್ವಾಮಿ ವಿವೇಕಾನಂದ ಬ್ಲಡ್ ಬ್ಯಾಂಕ್ ಮೂಲಕ ನಗರದ ಕೌಲ್ ಬಜಾರ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶನಿವಾರ ಏರ್ಪಡಿಸಿದ್ದ ಸ್ವಯಂ ಪ್ರೇರಿತ ಉಚಿತ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

18 ವರ್ಷ ಮೇಲ್ಪಟ್ಟ ಆರೋಗ್ಯವಂತ ಪುರುಷ ಮತ್ತು ಮಹಿಳೆಯರು ರಕ್ತದಾನ ಮಾಡುವುದರಿಂದ ರಕ್ತಹೀನತೆಯಿಂದ ಬಳಲುವ ಗರ್ಭಿಣಿ ಸ್ತ್ರೀಯರಿಗೆ, ಶಸ್ತ್ರಚಿಕಿತ್ಸಾ ಹೆರಿಗೆ ವೇಳೆ ಮತ್ತು ಅಪಘಾತಗಳು, ತುರ್ತು ಶಸ್ತ್ರಚಿಕಿತ್ಸೆಗಳ ಸಂದರ್ಭಕ್ಕಾಗಿ ಹಾಗೂ ಕ್ಯಾನ್ಸರ್ ರೋಗಿಗಳಿಗೆ ಥ್ಯಾಲಿಸೀಮಿಯಾ, ಹಿಮೋಫಿಲಿಯಾ ಮುಂತಾದ ರೋಗಿಗಳ ಜೀವವನ್ನು ಉಳಿಸುವ ಪುಣ್ಯದ ಕೆಲಸಕ್ಕೆ ಕೈ ಜೋಡಿಸಲು ಮುಂದೆ ಬರಬೇಕು ಎಂದರು.

ಜಗತ್ತಿನಲ್ಲಿ ಅತಿ ದೊಡ್ಡ ಸಂಶೋಧನೆ ಎಂದರೆ ಒಬ್ಬ ಮನುಷ್ಯನ ರಕ್ತವನ್ನು ಇನ್ನೊಬ್ಬರ ಜೀವ ಉಳಿಸಲು ಉಪಯೋಗಿಸುವುದಾಗಿದೆ. ಇದರಿಂದ ಹಲವಾರು ಜನರ ಆರೋಗ್ಯವನ್ನು ಸುಧಾರಿಸುವ ಜೊತೆಗೆ ಸಾವಿನಿಂದ ಪಾರು ಮಾಡಲು ಸಾಧ್ಯವಿದೆ, ಹಾಗಾಗಿ ಪ್ರತಿಯೊಬ್ಬರೂ ರಕ್ತದಾನ ಮಾಡಬೇಕು ಎಂದು ವಿನಂತಿಸಿದರು.

ರಕ್ತವನ್ನು ಕೃತಕವಾಗಿ ಸೃಷ್ಟಿಸಲು ಸಾಧ್ಯವಿಲ್ಲ, ರಕ್ತವೇ ದೇಹದ ಜೀವನಾಡಿಯಾಗಿದ್ದು, ರಕ್ತ-ಕ್ಕೆ ಪರ್ಯಾಯವಾದ ವಸ್ತು ಇಲ್ಲದೆ ಇರುವುದರಿಂದ ಇನ್ನೊಬ್ಬ ವ್ಯಕ್ತಿಯ ರಕ್ತದಾನದ ಮೂಲಕ ಮಾತ್ರ ಪಡೆಯಬಹುದಾಗಿದೆ ಎಂದರು.

18 ರಿಂದ 60 ವರ್ಷದ ಒಳಗಿನ ಎಲ್ಲಾ ಆರೋಗ್ಯವಂತ ಪುರುಷ ಮತ್ತ ಮಹಿಳೆಯರು ರಕ್ತದಾನ ಮಾಡಲು ಅವಕಾಶವಿದ್ದು, 45 ಕೆಜಿ ಮೇಲ್ಪಟ್ಟ ಹಾಗೂ 12.5 ಗ್ರಾಂ. ಗಿಂತ ಹೆಚ್ಚು ಹಿಮೋಗ್ಲೊಬಿನ್ ಇರುವ ಮಹಿಳೆಯರು ಪ್ರತಿ ನಾಲ್ಕು ತಿಂಗಳಿಗೊಮ್ಮೆ, ಪುರುಷರು ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡುವ ಮೂಲಕ ದಾನಿಗಳು ತಮ್ಮ ಆರೋಗ್ಯವನ್ನು ಸಹ ಉಲ್ಲಾಸಮಯವಾಗಿಸಿಟ್ಟುಕೊಳ್ಳಬಹುದು ಎಂದರು. ಇದೇ ಸಂದರ್ಭದಲ್ಲಿ ಶ್ರೀರಾಮ್ ರಾಜ್ ಫೌಂಡೇಶನ್ ವತಿಯಿಂದ ಪ್ರತಿ ರಕ್ತದಾನಿಗೂ ಉಚಿತ ಹೆಲ್ಮೆಟ್ ವಿತರಿಸಲಾಯಿತು. ನಂತರ ಕೌಲ್‌ಬಜಾರ್ ಪ್ರಾಥಮಿಕ ಆರೋಗ್ಯ ಕೇಂದ್ರ ವತಿಯಿಂದ 105 ಜನರ ಅಂಗಾಂಗ ದಾನ ನೋಂದಣಿ ಮಾಡಿಸಲಾಯಿತು. ಶಿಬಿರದಲ್ಲಿ ಒಟ್ಟಾರೆ 270 ಜನರು ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪಮೇಯರ್ ಡಿ.ಸುಕುಂ, ಆಡಳಿತ ವೈದ್ಯಾಧಿಕಾರಿ ಡಾ.ನರಸಿಂಹ ಮೂರ್ತಿ, ಸಿಬ್ಬಂದಿಗಳಾದ ಸುನಿತ, ಅರುಣ್ ಹಾಗೂ ವಿವಿಧ ವೃಂದದ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

## ವಿಜಯನಗರ: ಆಶಾ ಕಾರ್ಯಕರ್ತೆಯರ ಬೃಹತ್ ಪ್ರತಿಭಟನೆ

# ಸರ್ಕಾರದ ಭರವಸೆಗಳನ್ನು ಜಾರಿಗೆ ತರಲು ಆಗ್ರಹ



**ವಿಜಯನಗರ:** ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಜಿಲ್ಲಾ ಸಮಿತಿಯಿಂದ ಆಶಾ ಕಾರ್ಯಕರ್ತೆಯರ ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು. ಇಲ್ಲಿನ ಬಸ್ ನಿಲ್ದಾಣದಿಂದ ಹೊರಟ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ತಾಲೂಕು ಕಚೇರಿ ತಲುಪಿತು. ಬಳಿಕ ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಮುಖ್ಯಮಂತ್ರಿಗಳು ಮಾತು ಕೊಟ್ಟಂತೆ ಎಲ್ಲಆಶಾ ಕಾರ್ಯಕರ್ತೆಯರಿಗೆ ಮಾಸಿಕ 10,000 ರೂ. ಖಾತ್ರಿಪಡಿಸುವ ಆದೇಶ ಹೊರಡಿಸಬೇಕು. ಪ್ರತಿ ಆಶಾಗೆ ಜನಸಂಖ್ಯೆ ಹೆಚ್ಚಿಸುವ ಹೆಸರಲ್ಲಿ, ಆಶಾಗಳನ್ನು ಮನೆಗೆ ಕಳುಹಿಸುವ ಆದೇಶ ಹಿಂಪಡೆಯಬೇಕು. ಆಶಾಗಳ ಅವೈಜ್ಞಾನಿಕ ಮೌಲ್ಯಮಾಪನ ಪ್ರಕ್ರಿಯೆ ಹಿಂಪಡೆಯಬೇಕು. ಅಂಗನವಾಡಿ, ಬಿಸಿಯೂಟ ಕಾರ್ಯಕರ್ತೆಯರಿಗೆ ಗೌರವ ಧನ ಹೆಚ್ಚಿಸಿದಂತೆ, ಎಲ್ಲಆಶಾ ಕಾರ್ಯಕರ್ತೆಯರಿಗೂ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

**ಮಾತು ತಪ್ಪಿದ ಸರಕಾರ :** ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಡಾ.ಪ್ರಮೋದ್ ಮಾತನಾಡಿ ಜನವರಿಯಲ್ಲಿ ಅನಿರ್ದಿಷ್ಟಾವಧಿ ಮುಷ್ಕರದ ಸಂದರ್ಭದಲ್ಲಿ ಸಿಎಂ ಸಭೆ ಕರೆದು, ಎಲ್ಲ ಆಶಾ ಕಾರ್ಯಕರ್ತೆಯರಿಗೆ 10 ಸಾವಿರ ರೂ. ಖಾತ್ರಿ ಪಡಿಸಿ, ಏಪ್ರಿಲ್‌ನಿಂದ ಜಾರಿ ಮಾಡಲಾಗುವುದು. ಹೆಚ್ಚು ಕೆಲಸ ಮಾಡಿದವರಿಗೆ ಹೆಚ್ಚುವರಿ ಗೌರವ ಧನ ನೀಡಲಾಗುವುದು ಎಂದು ಘೋಷಿಸಿದ್ದರು.

ಈ ಸಭೆಯಲ್ಲಿಆರೋಗ್ಯ ಸಚಿವರು, ಹಿರಿಯ ಅಧಿಕಾರಿಗಳಿದ್ದರು. ಇದಾದ ನಂತರ ಸಿಎಂ ಹಾಗೂ ಸಚಿವರು, ಮಾಧ್ಯಮಗಳ ಮುಂದೆ ಅಧಿಕೃತವಾಗಿ ಘೋಷಣೆ ಮಾಡಿದ್ದರು. ಆದರೆ, ಇಲ್ಲಿಯವರೆಗೆ ಸರಕಾರ ಈ ಕುರಿತು ಆದೇಶ ಹೊರಡಿಸಿಲ್ಲ. ಮುಖ್ಯಮಂತ್ರಿಗಳು ಕೊಟ್ಟ ಮಾತು ಉಳಿಸಿಕೊಂಡಿಲ್ಲ ಎಂದು ಆರೋಪಿಸಿದರು.

ಸಂಘದ ಜಿಲ್ಲಾ ಕಾರ್ಯದರ್ಶಿ ಕೆ.ಎಸ್.ಗೌರಮ್ಮ ಮಾತನಾಡಿ 10-15 ವರ್ಷಗಳಿಂದ ಹಗಲು-ರಾತ್ರಿ ಗರ್ಭಿಣಿಯರ ಹಾಗೂ ಶಿಶುಗಳ ಆರೋಗ್ಯಕ್ಕಾಗಿ, ಸಮಾಜದ ಆರೋಗ್ಯಕ್ಕಾಗಿ ಕಷ್ಟಪಡುತ್ತಿರುವ ಆಶಾಗಳನ್ನು ಸರಕಾರ ಅತ್ಯಂತ ಅಗೌರವದಿಂದ ಕಾಣುತ್ತಿದೆ ಎಂದು ದೂರಿದರು.

ಜಿಲ್ಲಾಧ್ಯಕ್ಷೆ ಪಿ.ಎ.ಗೀತಾ ಮಾತನಾಡಿ ಕೋವಿಡ್ ಸಂದರ್ಭದಲ್ಲಿ ತಮ್ಮ ಜೀವ ಪಣಕ್ಕಿಟ್ಟು ದುಡಿದ ಹಲವಾರು ಆಶಾಗಳನ್ನು ಯಾವುದೇ ಮುಲಾಜಿಲ್ಲದೆ ಸರಕಾರ ಮನೆಗೆ ಕಳುಹಿಸಲು ಹೊರಟಿದೆ.

ಸರಕಾರ ಹಾಗೂ ಆರೋಗ್ಯ ಇಲಾಖೆಯ ಇಂತಹ ಕ್ರಮಗಳ ವಿರುದ್ಧ ಆಶಾಗಳು ಬೃಹತ್ ಸಂಖ್ಯೆಯ ಧ್ವನಿ ಎತ್ತಬೇಕು. ಮುಂದಿನ ದಿನಗಳಲ್ಲಿ ಮತ್ತೆ ಉಗ್ರ ಹೋರಾಟಕ್ಕೆ ತಯಾರಾಬೇಕು ಎಂದು ಕರೆ ನೀಡಿದರು.

# ಕಾಂಗ್ರೆಸ್ ನಾಯಕರಿಗೆ ಅಭಿವೃದ್ಧಿ ಚಿಂತೆ ಇಲ್ಲ, ಕುರ್ಚಿ ಚಿಂತೆ: ನಿಖಿಲ್



**ಇಂಡಿ:** ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕುರ್ಚಿ ಉಳಿಸಿಕೊಳ್ಳುವ ಚಿಂತೆ, ಉಪಮುಖ್ಯ ಮಂತ್ರಿಗಳಿಗೆ ಮುಖ್ಯಮಂತ್ರಿಯಾಗುವ ಚಿಂತೆ ಸದಾ ದಿಲ್ಲಿ ಓಡಾಟ ಇದು ಸಾಧನೆಯೇ ? ಈ ರಾಜ್ಯದ ಬಡವರ, ರೈತರ, ಸಾಮಾನ್ಯ ಜನತೆಯ ಚಿಂತೆ ಇಲ್ಲದಾಗಿದೆ. ತಮ್ಮ ಚಿಂತೆಯಲ್ಲಿಯೇ ಕಾಂಗ್ರೆಸ್ ದಿನ ಕಳೆಯುತ್ತಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯ ಅಧ್ಯಕ್ಷ ನಿಖಿಲ ಕುಮಾರಸ್ವಾಮಿ ಕಾಂಗ್ರೆಸ್ ನಾಯಕರ ವಿರುದ್ಧ ಕಿಡಿಕಾರಿದರು.

ಪಟ್ಟಣದಲ್ಲಿ ಜೆ.ಡಿ.ಎಸ್ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕಿತ್ತೂರ ಕರ್ನಾಟಕದ ವಿಜಯಪೂರ ಜಿಲ್ಲೆಯಲ್ಲಿ ನಾನು ಹಾಸನ, ಮಂಡ್ಯ, ಮೈಸೂರು ಸುಭದ್ರವಿದ್ದಂತೆ, ಮುಂಬರುವ ವಿಧಾನ ಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗಳಿಸುತ್ತೇವೆ ಎಂಬ ಆತ್ಮವಿಶ್ವಾಸ ನನಗಿದೆ. ಇಂತಹ ಜನಸಮುದಾಯ ಕಂಡಾಗ ಸಂತಸ ತಂದಿದೆ. ಹಳೆ ಮೈಸೂರಿನಂತೆ ಅಭಿವೃದ್ಧಿಯ ವೇಗ ಈ ಕಲ್ಯಾಣದ ಕರ್ನಾಟಕ ಭಾಗದಲ್ಲಿ ನಡೆದಿಲ್ಲ. ನೀವು ಕಾರ್ಯಕರ್ತರು ಸದಾ ಪಕ್ಷ ಕಟ್ಟುವಲ್ಲಿ ನಿರತರಾಗಿ ಮುಂಬರುವ ಚುನಾವಣೆಯಲ್ಲಿ ನಿಮ್ಮ ಶಕ್ತಿ ಸಾಮರ್ಥ್ಯದಿಂದ ಜಿಲ್ಲೆಯಲ್ಲಿ 4 ಜನತಾದಳ ಶಾಸಕರು ಗೆಲ್ಲಲ್ಲಿದ್ದಾರೆ. ಸಭೆ ಸಮಾರಂಭಗಳು ಮುಂಬರುವ ದಿನಗಳಲ್ಲಿ ಸಾಕಷ್ಟು ಮೋಡೋಣ ಪಕ್ಷವೇ ಜೀವಾಳ. ಬಿ.ಡಿ ಪಾಟೀಲರ ಪರವಾಗಿ ನಾವಿದ್ದೇವೆ ಎಂಬ ಸಂದೇಶ ನೀಡಿರುವ ನಿಮಗೆ ಸದಾ ನಿಮಗೆ ಕೈ ಬಿಡುವುದಿಲ್ಲ. ಬಿ.ಡಿ ಪಾಟೀಲ ಮುಂಬರುವ ದಿನಗಳಲ್ಲಿ ಅವರಿಗೆ ಎಲ್ಲಾ ವಿಧದ ಸಹಾಯ ಸಹಕಾರ ನೀಡಿ ಗೆಲ್ಲಿಸುತ್ತೇವೆ. ಬಿ.ಡಿ ಅಭಿಮಾನಿಗಳು ಅವರ ಬಗ್ಗೆ ಅನುಮಾನ ಬೇಡ ಬಿ.ಡಿ ಪಾಟೀಲ ಹಣಕಾಸಿನಿಂದ ಶ್ರೀಮಂತರಲ್ಲ ಹೃದಯದಿಂದ ಶ್ರೀಮಂತರು ,ಪ್ರಜಾಪ್ರಭುಇತ್ವ ವ್ಯವಸ್ಥೆಯಲ್ಲಿ ಜನರು ತೀರ್ಮಾನ ಮಾಡಿದರೆ ಎಂತ ಗಟಾನುಗಟ್ಟಿ ನಾಯಕರು ಸೋತ್ತಿರುವುದು ಇತಿಹಾಸ, ಧೃತೀಗೆಡಬೇಡಿ ನಿಮ್ಮ ಪ್ರಮಾಣಿಕತೆ ನಿಷ್ಠೇ ಜನರು ಗುರುತಿಸುವಂತಹ ದಿನಗಳು ಸನ್ನಿಹಿತವಾಗಿದೆ.

## ಆ.9 ರಂದು ಶ್ರೀ ನುಲಿಯ ಚಂದಯ್ಯ ಜಯಂತಿ

**ದಾವಣಗೆರೆ :** ಜಿಲ್ಲಾಡಳಿತ ವತಿಯಿಂದ ಆಗಸ್ಟ್ 9 ರಂದು ಬೆಳಿಗ್ಗೆ 10.30ಕ್ಕೆ ಶ್ರೀನುಲಿಯ ಚಂದಯ್ಯ ಜಯಂತಿಯನ್ನು ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

## ಆಸಕ್ತಿ ವ್ಯಕ್ತಪಡಿಸುವಿಕೆ ಅರ್ಜಿ ಆಹ್ವಾನ

**ದಾವಣಗೆರೆ:** ಅಮೃತ್ ಮಿತ್ರ ಕಾರ್ಯಕ್ರಮದ ತಾಂತ್ರಿಕ ಹಾಗೂ ತಾಂತ್ರಿಕೇತರ ಚಟುವಟಿಕೆಯಡಿ ಅನುಮೋದಿತ ಕಾರ್ಯಕ್ರಮಗಳನ್ನು ಡೇ ನಲ್ಮ್ ಅಭಿಯಾನದಡಿ ನೊಂದಾಯಿತ ಅರ್ಹ ಮಹಿಳಾ ಸ್ವಸಹಾಯ ಸಂಘಗಳಿಂದ ಆಸಕ್ತಿ ವ್ಯಕ್ತಪಡಿಸುವಿಕೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರುಗಳು ತಮ್ಮ ಆಸಕ್ತಿಯ ಅಭಿವ್ಯಕ್ತಿಯನ್ನು ಡೇ ನಲ್ಮ್ ವೆಬ್ ಸೈಟ್ ತಿತಿತಿ.ಜಚಿತಿಚಿಟಿಚಿರಂಜಡಿಜಭಿಣಥಿ.ಟಡಿಛಿ.ರಠತ.ಎಟಿ ವೀಕ್ಷಿಸಿ, ಸೆಪ್ಟೆಂಬರ್ 6 ರೊಳಗಾಗಿ ಡೇನಲ್ಮ್ ವಿಭಾಗ ಕೆಂಪು ಕಟ್ಟಡ ಮಹಾನಗರಪಾಲಿಕೆಗೆ ಸಲ್ಲಿಸಬೇಕೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

## ಪರಿಪಕ್ವ ಮೊತ್ತ ಪಾವತಿಗೆ ಅವಧಿ ವಿಸ್ತರಣೆ

**ದಾವಣಗೆರೆ :** 2006-07ನೇ ಸಾಲಿನ ಭಾಗ್ಯಲಕ್ಷ್ಮೀ ಬಾಂಡ್ ಪಡೆದ ಫಲಾನುಭವಿಗಳಿಂದ ಪರಿಪಕ್ವ ಮೊತ್ತ ಪಾವತಿಗೆ ನೊಂದಾಯಿಸಲು ಅಕ್ಟೋಬರ್ 31 ರವರೆಗೆ ಕಲಾವಕಾಶವನ್ನು ನೀಡಲಾಗಿದೆ.

ಫಲಾನುಭವಿಗಳು ತಮ್ಮ ಹತ್ತಿರದ ಅಂಗನವಾಡಿ ಕೇಂದ್ರ ಅಥವಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ನಂದಗೋಕುಲ ಬಿಲ್ಡಿಂಗ್, ದುಗಾರ್ಂಬಿಕಾ ಶಾಲೆ ಎದುರು ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

## ಬೆಳೆ ವಿಮಾ ಯೋಜನೆಯ ದಿನಾಂಕ ವಿಸ್ತರಣೆ

**ಚಿಕ್ಕಮಗಳೂರು, ಆ.7:** ಸರ್ಕಾರವು 2025ರ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯ ವ್ಯಾಪ್ತಿಗೆ ಚಿಕ್ಕಮಗಳೂರು, ಕಡೂರು, ಕೊಪ್ಪ, ಮೂಡಿಗೆರೆ, ಎನ್.ಆರ್.ಪುರ, ಶೃಂಗೇರಿ, ತರೀಕೆರೆ, ಅಜ್ಜಂಪುರ ಹಾಗೂ ಕಳಸ ತಾಲ್ಲೂಕುಗಳನ್ನು ಒಳಪಡಿಸಲಾಗಿದೆ.

ವಿಮಾ ಯೋಜನೆಗೆ ಬೆಳೆ ಸಾಲ ಪಡೆಯದ ರೈತರಿಗೆ ಅಂತಿಮ ದಿನಾಂಕವನ್ನು ಆಗಸ್ಟ್ 14 ರವರೆಗೆ ಹಾಗೂ ಸಾಲ ಪಡೆದ ರೈತರಿಗೆ ಅಂತಿಮ ದಿನಾಂಕವನ್ನು ಆಗಸ್ಟ್ 30ರವರೆಗೆ ವಿಸ್ತರಿಸಲಾಗಿದೆ.

ಅಡಿಕೆ ಬೆಳೆಗೆ ವಿಮಾ ಮೊತ್ತ 1,28,000 ರೂ. ಆಗಿದ್ದು, ವಿಮಾ ಮೊತ್ತ 6,400 ರೂ. ಆಗಿದೆ. ಕರಿಮೆಣಸು ಬೆಳೆಗೆ ವಿಮಾ ಮೊತ್ತ 47,000 ಆಗಿದ್ದು, ಕಂತು 2,350 ರೂ. ಆಗಿದೆ. ಹಸಿರು ಮೆಣಸಿನಕಾಯಿಗೆ 71,000 ರೂ.ವಿಮಾ ಮೊತ್ತ ಆಗಿದ್ದರೆ, ಕಂತು 3,550 ರೂ. ಆಗಿದೆ. ದಾಳಿಂಬೆಗೆ 1,27,000 ರೂ. ವಿಮಾ ಮೊತ್ತ ಆಗಿದ್ದರೆ, ಕಂತು 6,350 ರೂ. ಆಗಿದೆ. ಮಾವಿಗೆ 80,000 ರೂ. ವಿಮಾ ಮೊತ್ತವಾಗಿದ್ದರೆ, ಕಂತು 4,000 ರೂ. ಆಗಿದೆ.

## ಉಚಿತ ಸೆಲ್ ಫೋನ್ ತರಬೇತಿ ಶಿಬಿರ

ಚಿಕ್ಕಮಗಳೂರು, ಜು.24: ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್ 5 ರಿಂದ 30 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಉಚಿತ ಸೆಲ್ ಫೋನ್ ತರಬೇತಿ ಶಿಬಿರವನ್ನು ಏರ್ಪಡಿಸಿದೆ.

ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 45 ವರ್ಷ ವಯಸ್ಸಿನ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳನ್ನು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ

# ಸೂಲೇನಹಳ್ಳಿಯಲ್ಲಿ ರಸ್ತೆ ತಡೆ ರೈತ ಸಂಘ ಪ್ರತಿಭಟನೆ



**ಮೊಳಕಾಲ್ಮೂರು :** ತಾಲೂಕಿನ ಸೂಲೇನಹಳ್ಳಿ ಗ್ರಾಮದಲ್ಲಿ ಚರಂಡಿ ನೀರು ಹಾದುಹೋಗುವಂತೆ ಚರಂಡಿ ನಿರ್ಮಿಸಿ ನಿವೇಶನ ರಹಿತರು ಹಾಗೂ ಶಾಲೆಗೆ ಸರ್ಕಾರಿ ರಿ.ಸ.ನಂ. 15/ಪಿ1 ರಲ್ಲಿ ಮೀಸಲಿಡಬೇಕೆಂದು ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘವು ತಾಲೂಕಿನ ಸೂಲೇನಹಳ್ಳಿ ಗ್ರಾಮದಲ್ಲಿ ರಸ್ತೆ ತಡೆ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ಪ್ರಾಂತ ರೈತ ಸಂಘದ ತಾಲೂಕು ಉಪಾಧ್ಯಕ್ಷ ದಾನಸೂರನಾಯಕ ಮಾತನಾಡಿ ತಾಲೂಕಿನ ಸೂಲೇನಹಳ್ಳಿ ಗ್ರಾಮದ ರಸ್ತೆ ಬಳಿಯಲ್ಲಿ ಚರಂಡಿ ನೀರು ಹಾದು ಹೋಗಲು ಚರಂಡಿ ನಿರ್ಮಿಸದೆ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಪ್ರಭಾವಿ ಜನಪ್ರತಿನಿಧಿಗಳು ನಿರ್ಲಕ್ಷ ವಹಿಸಲಾಗಿದೆ. ಈ ಗ್ರಾಮದಲ್ಲಿ ಕೆಲ ಕಾರಣಗಳಿಂದ ಚರಂಡಿ ನಿರ್ಮಿಸದೆ ಬಿಟ್ಟಿರುವುದರಿಂದ ಸಂಗ್ರಹವಾಗಿರುವ ಕಲಶ ನೀರಿನಿಂದ ದುರ್ವಾಸನೆ ಬೀರುವ ಜೊತೆಗೆ ಸೊಳ್ಳೆಗಳ ಹಾವಳಿ ಹೆಚ್ಚಾಗಿ ಡೆಂಗ್ಯೂ, ಮಲೇರಿಯಾ, ಟೈಫಾಯಿಡ್ ಜ್ವರ, ಸಾಂಕ್ರಾಮಿಕ ರೋಗಗಳಿಗೆ ಬಲಿಯಾಗಿ ಆಸ್ಪತ್ರೆಗಳಿಗೆ ಅಲೆಯುವಂತಾಗಿದೆ. ಹಾಗಾಗಿ ಸಂಬಂಧಿತ ತಾಲೂಕಿನ ಹಾನಗಲ್ ಗ್ರಾಮ ಪಂಚಾಯಿತಿಯು ಕೂಡಲೇ ಚರಂಡಿ ನೀರು ಹಾದು ಹೋಗುವಂತೆ ಚರಂಡಿ ನಿರ್ಮಾಣ ಮಾಡಬೇಕಾಗಿದೆ. ತಾಲೂಕಿನ ಸೂಲೇನಹಳ್ಳಿ ಗ್ರಾಮದಲ್ಲಿ ರಿ.ಸ.ನಂ. 15/ಪಿ1 ರಲ್ಲಿನ ಜಾಗವನ್ನು ಖಬರಸ್ಥಾನಕ್ಕೆ ಮಂಜೂರು ಮಾಡಿರುವ ಜಮೀನನ್ನು ರದ್ದು ಪಡಿಸಿ ವಸತಿ ರಹಿತರಿಗೆ ನಿವೇಶನ ಮತ್ತು ಸರ್ಕಾರಿ ಶಾಲೆ ನಿರ್ಮಾಣಕ್ಕೆ ಮೀಸಲಿಡಬೇಕಾಗಿದೆ. ಈ ಗ್ರಾಮ ವ್ಯಾಪ್ತಿಯಲ್ಲಿ ಹಲವಾರು ವರ್ಷಗಳಿಂದಲೂ ಸಾಗುವಳಿ ಮಾಡುತ್ತಾ ಫಾರಂ ನಂ. 50,53 ಹಾಗೂ 57 ರಲ್ಲಿ ಅರ್ಜಿ ಸಲ್ಲಿಸಿದ್ದರೂ ರೈತರನ್ನು ಒಕ್ಕಲೆಬ್ಬಿಸಿ ಬೇರೆ ಬೇರೆ ಇಲಾಖೆಗಳಿಗೆ ಜಮೀನು ಮಂಜೂರು ಮಾಡಿರುವುದನ್ನು ರದ್ದು ಪಡಿಸಿ ರೈತರ ಅರ್ಜಿಗಳನ್ನು ಸಕ್ರಮಗೊಳಿಸಿ ಹಕ್ಕುಪತ್ರ ನೀಡಬೇಕು. ಪ್ರಮುಖವಾಗಿ ಸ್ವಚ್ಛತೆಗೆ ಆದ್ಯತೆ ನೀಡಿ ಶೀಘ್ರವೇ ಚರಂಡಿ ನೀರು ಹಾದು ಹೋಗಲು ತ್ವರೀತವಾಗಿ ಚರಂಡಿ ನಿರ್ಮಾಣ ಮಾಡಬೇಕೆಂದು ಆಗ್ರಹಿಸಿದರು.

ತಾಲೂಕಿನ ಹಾನಗಲ್ ಗ್ರಾಮ ಪಂಚಾಯಿತಿಯ ಪಿ.ಡಿ.ಒ. ಕರಿಬಸಪ್ಪ ಅವರಿಗೆ ಬೇಡಿಕೆಯ ಮನವಿ ಸಲ್ಲಿಸಿದರು. ಈ ಪ್ರತಿಭಟನೆಯಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ಪದಾಧಿಕಾರಿಗಳಾದ ಕೆ.ಟಿ.ನಾಗರಾಜಪ್ಪ, ತಿಪ್ಪೇಶ್, ಮೂರ್ತಿ, ಬಜ್ಜಣ್ಣ, ಮಾರಣ್ಣ, ತಿಮ್ಮಣ್ಣ, ಹಿರಿಯ ಮುಖಂಡ ವಿ.ಮಾರನಾಯಕ, ಗ್ರಾ.ಪಂ.ನ ಮಾಜಿ ಅಧ್ಯಕ್ಷ ಅಂಕಾಳಪ್ಪ, ಗ್ರಾಮಸ್ಥರಾದ ರಾಮಾಂಜಿನೇಯ, ಶಿವಕುಮಾರ, ಶಿವಪ್ಪ, ಮಂಜುನಾಥ ಭಾಗವಹಿಸಿದ್ದರು.

ಆಯ್ದ ಗ್ರಾ.ಪಂ.ಗಳಲ್ಲಿ ಸ್ವಚ್ಛ ಸರ್ವೇಕ್ಷಣ ಸರ್ವೆ:

# ಎಸ್‌ಜಿಜಿ-2025 ಆಪ್ ಮೂಲಕ ಅಭಿಪ್ರಾಯ ತಿಳಿಸಲು ಮನವಿ



**ಚಿತ್ರದುರ್ಗ :** ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಜುಲೈ 17 ವರೆಗೆ ಜಿಲ್ಲೆಯ ಆಯ್ದ 20ಗ್ರಾಮಪಂಚಾಯಿತಿಗಳಲ್ಲಿ ಸ್ವಚ್ಛ ಸರ್ವೇಕ್ಷಣ ಗ್ರಾಮೀಣ-2025 ಸರ್ವೆ ಹಮ್ಮಿಕೊಳ್ಳಲಾಗಿದೆ.

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಗ್ರಾಮಗಳಲ್ಲಿ ವೈಯಕ್ತಿಕ ಗೃಹ ಶೌಚಾಲಯ ನಿರ್ಮಾಣ, ಘನ, ದ್ರವ ಹಾಗೂ ಮಲ ತ್ಯಾಜ್ಯ ನಿರ್ವಹಣೆ, ಗೋಬರ್-ಧನ ಘಟಕ, ಮಾಹಿತಿ ಶಿಕ್ಷಣ ಮತ್ತು ಸಂವಹನ ಹಾಗೂ ತರಬೇತಿ ಕುರಿತು ಲಕ್ನೋದ ಅಕಾಡೆಮಿ ಆಫ್ ಮ್ಯಾನೇಜಮೆಂಟ್ ಸ್ಟಡೀಸ್ ಸಂಸ್ಥೆ ನೇರವಾಗಿ ಸರ್ವೆ ಕಾರ್ಯ ನಡೆಸಲಿದ್ದು, ನಿಗದಿ ಪಡಿಸಿದ ದಿನಾಂಕಗಳನ್ನು ಸಂಸ್ಥೆ ಪ್ರತಿನಿಧಿಗಳು ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಈ ವೇಳೆ ಸಾರ್ವಜನಿಕರಿಂದ ಖಖಉ-2025 ಮೊಬೈಲ್ ಆಪ್ ಹಾಗೂ ವೆಬ್ ಪೋರ್ಟಲ್ ಮೂಲಕ ಯೋಜನೆಗಳ ಸೌಲಭ್ಯ ಕುರಿತು ಅಭಿಪ್ರಾಯಗಳನ್ನು ಸಂಗ್ರಹಿಸುವರು. ಈ ಯೋಜನಗಳ ಫಲಾನುಭವಿಗಳು ಹಾಗೂ ಸಾರ್ವಜನಿಕರು ಸ್ಮಾರ್ಟ್ ಫೋನ್ ಬಳಿಸಿ ಖಖಉ-2025 ಆಪ್ ಅಥವಾ ಪೋರ್ಟಲ್ ಮೂಲಕ ಅಭಿಪ್ರಾಯ ತಿಳಿಸುವಂತೆ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಮನವಿ ಮಾಡಿದ್ದಾರೆ.

ಸರ್ವೆಯಲ್ಲಿ ಗ್ರಾ.ಪಂ.ಗಳ ಪ್ರಗತಿ ಪರಿಶೀಲಿಸಿ ಅಂಕಗಳ ಮೂಲಕ ಶ್ರೇಯಾಂಕವನ್ನು ನೀಡಲಾಗುವುದು. ಅತಿ ಹೆಚ್ಚು ಅಂಕ ಪಡೆದ ರಾಜ್ಯ ಹಾಗೂ ಜಿಲ್ಲೆಗಳಿಗೆ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಸನ್ಮಾನಿಸಲಾಗುವುದು.

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ನಿರ್ಮಿಸಿದ ವಿವಿಧ ಘಟಕಗಳು ನಿರಂತರವಾಗಿ ಕಾರ್ಯಚರಣೆ ನಡೆಸುತ್ತಾ ಸುಸ್ಥಿರತೆ ಕಾಯ್ದಕೊಳ್ಳುವ ದೃಷ್ಠಿಯಿಂದ ಹಾಗೂ ಸಾರ್ವಜನಿಕರ ಪಾಲ್ಗೊಳ್ಳುವಿಕೆಯನ್ನು ಖಾತ್ರಿ ಪಡಿಸಿಕೊಳ್ಳಲು ಸರ್ವೆ ಕಾರ್ಯ ನಡೆಸಲಾಗುತ್ತಿದೆ. ಇದರೊಂದಿಗೆ ಈ ಘಟಕಗಳ ಮೌಲ್ಯಮಾಪನವನ್ನು ನಡೆಸಿದಂತಾಗುತ್ತದೆ. ಜಿಲ್ಲೆಯ ಎಲ್ಲಾ ಗ್ರಾ.ಪಂ.ಗಳು ಸಾಮಾಜಿಕ ಜಾಲತಾಣಗಳಲ್ಲಿ ಈ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ನೀಡಬೇಕು. ಪಿಡಿಓ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸರ್ವೆ ಪ್ರತಿನಿಧಿಗಳಿಗೆ ಅಗತ್ಯ ಸಹಕಾರ ಮತ್ತು ಮಾಹಿತಿ ನೀಡಿ ಸರ್ವೆ ಕಾರ್ಯವನ್ನು ಯಶಸ್ವಿಗೊಳಿಸುವಂತೆ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಸೂಚಿಸಿದ್ದಾರೆ.

# ದಲಿತರಿಗೆ ಪರಿಹಾರ ನೀಡದೆ ವಿಳಂಬ ಧೋರಣೆ ಖಂಡಿಸಿ ಮಾದಿಗ ಮಹಾಸಭಾದಿಂದ ಪ್ರತಿಭಟನೆ




**ಚಿತ್ರದುರ್ಗ :** ಸವರ್ಣಿಯರಿಂದ ದೌರ್ಜನ್ಯ, ಬಹಿಷ್ಕಾರಕ್ಕೊಳಗಾಗಿರುವ ದಲಿತರಿಗೆ ಇದುವರೆವಿಗೂ ಪರಿಹಾರ ನೀಡದಿರುವುದನ್ನು ವಿರೋಧಿಸಿ ಮಾದಿಗ ಮಹಾಸಭಾದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಿ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ದಲಿತರ ಮೇಲೆ ದಬ್ಬಾಳಿಕೆ ನಡೆಸುತ್ತಿರುವವರ ಮೇಲೆ ಧಿಕ್ಕಾರಗಳನ್ನು ಕೂಗಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಮಾದಿಗ ಮಹಾಸಭಾದ ರಾಜ್ಯಾಧ್ಯಕ್ಷ ಹನುಮಂತಪ್ಪ ದುರ್ಗಾ ಹೊಸದುರ್ಗ ತಾಲ್ಲೂಕಿನ ದೊಡ್ಡಘಟ್ಟ, ಜಂತಿಕೊಳಲು, ಚಳ್ಳಕೆರೆ ತಾಲ್ಲೂಕಿನ ಬೂದಿಹಾಳ್, ದೊಡ್ಡಬೀರನಹಳ್ಳಿ, ಗಿಲಿಕೇನಹಳ್ಳಿ, ಕೋನಿಗರಹಳ್ಳಿ, ಹಿರಿಯೂರು ತಾಲ್ಲೂಕಿನ ಈಶ್ವರಗೆರೆ, ಕಂಬತ್ತಹಳ್ಳಿ, ಗ್ರಾಮಗಳಲ್ಲಿ ಹತ್ತನ್ನೆರಡು ವರ್ಷಗಳ ಹಿಂದೆ ಹಲ್ಲೆ ದೌರ್ಜನ್ಯಕ್ಕೊಳಗಾಗಿರುವ ದಲಿತರಿಗೆ ಪರಿಹಾರ ಸಿಕ್ಕಿಲ್ಲ. ನಿವೇಶನ, ಮನೆ, ಭೂಮಿ, ಸರ್ಕಾರಿ ಉದ್ಯೋಗ, ಕೊಡುವುದಾಗಿ ನಂಬಿಸಿರುವ ಕಾಂಗ್ರೆಸ್ ಬಿಜೆಪಿ. ಸರ್ಕಾರಗಳು ವಂಚಿಸುತ್ತಲೆ ಬರುತ್ತಿವೆ. ಯಾವ ಭರವಸೆಗಳು ಈಡೇರಿಲ್ಲ. ಕೆಲವು ಅಧಿಕಾರಿಗಳು ದಲಿತರನ್ನು ಕಡೆಗಣಿಸುತ್ತಿದ್ದಾರೆ. ಇದೆ ಪರಿಸ್ಥಿತಿ ಮುಂದುವರೆದರೆ ಆಗುವ ಅನಾಹುತಗಳಿಗೆ ಸರ್ಕಾರವೆ ನೇರ ಹೊಣೆಯಾಗಬೇಕಾಗುತ್ತದೆಂದು ಎಚ್ಚರಿಸಿದರು.

ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಮಾತನಾಡಿ ಸಣ್ಣ ಸಣ್ಣ ವಿಚಾರಗಳಿಗೆ ಮೇಲೆ ಹಲ್ಲೆ, ದೌರ್ಜನ್ಯ, ಬಹಿಷ್ಕಾರಗಳು ನಡೆಯುತ್ತಿದೆ.

ಹೊಸದುರ್ಗ ತಾಲ್ಲೂಕಿನ ದೊಡ್ಡಘಟ್ಟ ಗ್ರಾಮದಲ್ಲಿ 40 ದಲಿತರು ದೌರ್ಜನ್ಯಕ್ಕೊಳಗಾಗಿದ್ದಾರೆ. 244 ಅವಲಂಭಿತ ಕುಟುಂಬಗಳಿವೆ. ಘಟನೆ ನಡೆದು ಹತ್ತು ವರ್ಷಗಳಾಗಿದ್ದರೂ ಅನ್ಯಾಯ ಸರಿಪಡಿಸದಿರುವುದು ದೊಡ್ಡ ದುರಂತ. ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದೆಂದರು.

ಲೇಖಕ ಹೆಚ್.ಆನಂದ್‌ಕುಮಾರ್ ಮಾತನಾಡುತ್ತ ದೌರ್ಜನ್ಯ ನಡೆಸಿರುವವರ ಮೇಲೆ ಪೊಲೀಸರು ಇದುವರೆವಿಗೂ ಯಾವುದೇ ಕ್ರಮ ಕೈಗೊಂಡಿಲ್ಲ. ಸಂತ್ರಸ್ಥರಿಗೆ ಪರಿಹಾರವೂ ಸಿಕ್ಕಿಲ್ಲ.

## ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿಗೆ ರೈತರಿಂದ ಅರ್ಜಿ ಅಹ್ವಾನ

**ಬಳ್ಳಾರಿ :** ಕೃಷಿ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ಆತ್ಮ ಯೋಜನೆಯಡಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿ ಪ್ರಶಸ್ತಿ ಮತ್ತು ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿಗೆ ರೈತರಿಂದ ಮತ್ತು ರೈತ ಮಹಿಳೆಯರಿಂದ ಅರ್ಜಿ ಅಹ್ವಾನಿಸಲಾಗಿದೆ.

ಸಮಗ್ರ ಕೃಷಿ ಪದ್ಧತಿ, ಬೆಳೆ ಪದ್ಧತಿ, ಬೆಳೆ ವೈವಿಧ್ಯಕರಣ, ಸಾವಯವ ಕೃಷಿ, ಕೃಷಿ ಯಂತ್ರೋಪಕರಣ ಅಭಿವೃದ್ಧಿ, ನೀರಿನ ಸಮರ್ಥ ಬಳಕೆ ಇನ್ನಿತರೆ ಯಾವುದಾದರೂ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಅರ್ಹ ರೈತರು ಕೃಷಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು.

ಆತ್ಮ ಯೋಜನೆಯಡಿ ಕೃಷಿ ಪಂಡಿತ ಪ್ರಶಸ್ತಿಗೆ ಕೃಷಿಯಲ್ಲಿ ಸಮಗ್ರ ಬೆಳೆ ಪದ್ಧತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹೈಟೆಕ್ ಹಸಿರುಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು, ಕುರಿ, ಮೊಲ ಇತ್ಯಾದಿ

# ಫೋಟೋ-ವೀಡಿಯೋಗ್ರಫಿಗೆ ಕೆನಾನ್ ಕ್ಯಾಮಾರಗಳು ಶ್ರೇಷ್ಟ: ನಾಗೇಶ್



**ಚಿಕ್ಕಮಗಳೂರು, ಜುಲೈ 24 :** ಪೋಟೋಗ್ರಫಿ ಮತ್ತು ವೀಡಿಯೋಗ್ರಫಿ ಕ್ಷೇತ್ರದಲ್ಲಿ ಹೊಸ ಆಯಾಮವನ್ನು ಸೃಷ್ಟಿಸುವ ಕೆನಾನ್ ಕ್ಯಾಮರಾಗಳು ಛಾಯಾಗ್ರಾಹಕರ ಅನುಕೂಲತೆಗೆ ತಕ್ಕಂತೆ ಬಹಳಷ್ಟು ತಂತ್ರಾಂಶ ವನ್ನು ಅಡಕಗೊಳಿಸಲಾಗಿದೆ ಎಂದು ಕೆನಾನ್ ಕ್ಯಾಮಾರಾ ಕಂಪನಿ ತರಬೇತಿದಾರ ನಾಗೇಶ್ ಹೇಳಿದರು.

ನಗರದ ಸ್ಕೌಟ್ಸ್ ಭವನದಲ್ಲಿ ಚಿಕ್ಕಮಗಳೂರು ಛಾಯಾಗ್ರಾಹಕರ ಸಂಘದಿಂದ ಗುರುವಾರ ಏರ್ಪಡಿಸಿದ್ಧ 'ಕೆನಾನ್' ಕಂಪನಿಯ ಕ್ಯಾಮಾರಾಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅತ್ಯಾಧುನಿಕ ತಂತ್ರಜ್ಞಾನಗಳು ಮತ್ತು ಹೊಸ ವಿಧಾನಗಳು ಇತರೆ ಕ್ಯಾಮರಾಗಳಿಗಿಂತ ವಿಭಿನ್ನ ರೀತಿಯ ಲ್ಲಿ ಕೆನಾನ್ ಕ್ಯಾಮಾರಾದಲ್ಲಿ ಅಳವಡಿಸಿದೆ. ಈ ತಂತ್ರಜ್ಞಾನವಳು ಮದುವೆ ಜೊತೆಗೆ ಸಿನಿಪೋಟೋ-ಹಾಗೂ ವೀಡಿಯೋಗ್ರಫಿಗೆ ಪೂರಕವಾಗಿದ್ದು ಲೆನ್ಸ್‌ಗಳು ಕೂಡಾ ಗುಣಮಟ್ಟತೆಯಿಂದ ಕೂಡಿವೆ ಎಂದರು.

ಪ್ರಸಕ್ತ ಸಾಲಿನಲ್ಲಿ ಕೆನಾನ್ ಕಂಪನಿಯ ಕ್ಯಾಮಾರಾಗಳು ಛಾಯಾಗ್ರಾಹಕರ ವೃತ್ತಿ ಬದುಕಿನಲ್ಲಿ ಅನೇಕ ಸಮಯವನ್ನು ಉಳಿಸುವ ಶಕ್ತಿ ಹೊಂದಿದೆ. ಎಡಿ-ಟಿಂಗ್ ಕೆಲಸ, ಕಲರ್ ಪಿಕ್ಸಿಂಗ್ ಸೇರಿದಂತೆ ಗಂಟೆಗಟ್ಟಲೇಯ ಹೆಚ್ಚು ಸಮಯವನ್ನು ಕ್ಯಾಮಾರಗಳ ಸೆಟ್ಟಿಂಗ್‌ನಿಂದಲೇ ಉಳಿಸುತ್ತದೆ ಎಂದು ಹೇಳಿದರು.

ಇತ್ತೀಚೆಗೆ ಸಿನಿಮಾ, ಧಾರವಾಹಿ ಕ್ಷೇತ್ರಗಳಲ್ಲಿ ಕೆನಾನ್ ಕಂಪನಿಯ ಕ್ಯಾಮಾರಾಗಳು ಬಳಕೆಯಾಗುತ್ತಿದೆ. ಕೆಲವರು ಕ್ಯಾಮಾರಾ ಬಗ್ಗೆ ಸುಳ್ಳುಸುದ್ದಿಗಳು ಹರಡುತ್ತಿದ್ದು ಇದರ ಬಗ್ಗೆ ತಲೆಕೆಡಿಸಿಕೊಳ್ಳದೇ ಎಲ್ಲವೂ ಗುಣ ಮಟ್ಟ ಹಾಗೂ ತಂತ್ರಜ್ಞಾನದಿಂದ ಕೂಡಿದ ಕಾರಣ ಬೆಂಗಳೂರು ಹಾಗೂ ಮಂಗಳೂರಿನಲ್ಲಿ ಅತಿಹೆಚ್ಚು ಕೆನಾ ನ್ ಕ್ಯಾಮಾರಾ ಚಾಲ್ತಿಯಲ್ಲಿದೆ ಎಂದು ತಿಳಿಸಿದರು.

ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನದೀಮ್ ಪಾಷ ಮಾತನಾಡಿ ಮಲೆನಾಡು ಭಾಗ ವಿಪರೀತ ಮಳೆ ಯಾಗುವ ಪ್ರದೇಶ. ಈ ಜಾಗದಲ್ಲಿ ಛಾಯಾಚಿತ್ರಣ ಬಹುದೊಡ್ಡ ಕೆಲಸವಾದ ಕಾರಣ ಛಾಯಾಗ್ರಾಹಕರಿಗೆ ಅನುಕೂಲವಾಗಲು ಕೆನಾನ್ ಕಂಪನಿ ತರಬೇತಿದಾರರಿಂದ ಕಾರ್ಯಾಗಾರ ಹಮ್ಮಿಕೊಂಡು ಕ್ಯಾಮಾರದ ವಿ ಶೇಷತೆ ಪರಿಚಯಿಸಲಾಗುತ್ತಿದೆ ಎಂದು ಹೇಳಿದರು.

ಇದೇ ವೇಳೆ ಕೆನಾನ್ ಕಂಪನಿ ತರಬೇತುದಾರ ಯಲ್ಲಪ್ಪ ಪಾಟೀಲ್ ಮಾಡೆಲ್‌ನೊಂದಿಗೆ ಕೆನಾನ್ ಕ್ಯಾಮಾರಗಳ ವಿಶೇಷತೆಯನ್ನು ಛಾಯಾಗ್ರಾಹಕರಿಗೆ ಮನದಟ್ಟು ಮಾಡಿದರು.

ಈ ಸಂದರ್ಭದಲ್ಲಿ ಚಿಕ್ಕಮಗಳೂರು ಛಾಯಾಗ್ರಾಹಕರ ಸಂಘದ ಪ್ರಧಾನ ಕಾರ್ಯದರ್ಶಿ ಮತ್ತಿಕೆರೆ ಪ್ರದೀಪ್, ಗೌರವಾಧ್ಯಕ್ಷ ಎಂ.ಆರ್.ರಮೇಶ್, ಉಪಾಧ್ಯಕ್ಷ ಪಾರ್ಥ ಸಾರಥಿ, ಖಜಾಂಚಿ ಜಯನಾಯಕ್ ಸಹ ಕಾರ್ಯದರ್ಶಿ ರೇಣುಕುಮಾರ್, ನಿರ್ದೇಶಕರುಗಳಾದ ಹರೀಶ್, ನೀಲಕಂಠ, ರಾಜೇಶ್, ನವೀನ್, ಪ್ರಭು, ಸಂತೋಷ್, ಮಲ್ಲಿಕಾರ್ಜುನ್ ಮತ್ತಿತರರು ಉಪಸ್ಥಿತರಿದ್ದರು.

## ಪೆಟ್ರೋಲ್ ಬಂಕ್‌ಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಮನವಿ



**ಚಿಕ್ಕಮಗಳೂರು:** ನಗರದ ಪೆಟ್ರೋಲ್ ಬಂಕ್‌ಗಳಲ್ಲಿ ಮೂಲಭೂತ ಸೌಲಭ್ಯ ಹಾಗೂ ಶುಚಿತ್ವ ಕಾಪಾಡಲು ಬಂಕ್ ಮಾಲೀಕರಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಸಾರ್ವಜನಿಕರು ಹಾಗೂ ಗ್ರಾಹಕರು ಇಂದು ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಸಾಮಾಜಿಕ ಕಾರ್ಯಕರ್ತ ಹೊಲದಗದ್ದೆ ಗಿರೀಶ್, ನಗರ ಮತ್ತು ಜಿಲ್ಲೆ ಒಳಗೊಂಡಂತೆ ಪೆಟ್ರೋಲ್ ಬಂಕ್‌ಗಳಲ್ಲಿ ನಿಯಮಗಳ ಪ್ರಕಾರ ಗ್ರಾಹಕರಿಗೆ ಕನಿಷ್ಟ ಸೌಲಭ್ಯಗಳನ್ನು ನಿರಾಕರಿಸುತ್ತಿದ್ದು, ಈ ಬಗ್ಗೆ ಜಿಲ್ಲಾಡಳಿತ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ನಗರದ ಕೆ.ಎಂ.ರಸ್ತೆಯ ಕೆಲವು ಪೆಟ್ರೋಲ್ ಬಂಕ್‌ಗಳಲ್ಲಿ ಅಗತ್ಯ ಶೌಚಾಲಯ, ಕುಡಿಯುವ ನೀರು ಮತ್ತು ವಾಹನಕ್ಕೆ ಗಾಳಿ ತುಂಬುವ ವ್ಯವಸ್ಥೆಯಿಲ್ಲ. ಈ ಸಂಬಂಧ ಪೆಟ್ರೋಲ್ ಬಂಕ್‌ನ ಸಿಬ್ಬಂದಿ ಹಾಗೂ ಮಾಲೀಕರಿಗೆ ವಿಚಾರಿಸಿದರೆ ಉಡಾಫೆ ಉತ್ತರ ನೀಡುತ್ತಿದ್ದು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು ಎಂದು ಹೇಳಿದರು.

ದೂರದೂರಿನ ಪ್ರಯಾಣಿಕರು, ಸ್ಥಳೀಯರು ತುರ್ತು ಸಂದರ್ಭದಲ್ಲಿ ಪೆಟ್ರೋಲ್ ಬಂಕ್‌ನ ಶೌಚಾಲಯ ಬಳಸುತ್ತಾರೆ. ಈ ಸಂಬಂಧ ಬಂಕ್‌ನ ವ್ಯವಸ್ಥಾಪಕರು ಸೂಕ್ತ ವ್ಯವಸ್ಥೆ ಕಲ್ಪಿಸುವುದು ಕರ್ತವ್ಯ. ಆದರೆ ಕೆಲವು ಬಂಕ್‌ಗಳಲ್ಲಿ ಯಾವುದೇ ರೀತಿಯ ವ್ಯವಸ್ಥೆಯಿಲ್ಲದೇ ಕಾಟಾಚಾರಕ್ಕೆ ಬಂಕ್ ನಡೆಸುವಂತಾಗಿದೆ ಎಂದು ತಿಳಿಸಿದರು.

# ಕೃಷಿ ಭೂಮಿ, ಜನವಸತಿ ಉಳಿಸಿಕೊಳ್ಳಲು ಬೀದಿಗಿಳಿದು ಹೋರಾಡಬೇಕು



**ಚಿಕ್ಕಮಗಳೂರು:** ಕೃಷಿ ಭೂಮಿ, ಜನವಸತಿ ಹಾಗೂ ಮೂಲ ಸವಲತ್ತಿನ ಪ್ರದೇಶವನ್ನು ಪರಿಭಾವಿತ ಅರಣ್ಯ ಮತ್ತು ಸೆಕ್ಷನ್ 4(1)ರಿಂದ ಉಳಿಸಿಕೊಳ್ಳಲು ಗ್ರಾಮಸ್ಥರು ಬೀದಿಗಿಳಿದು ಹೋರಾಟ ರೂಪಿಸಿದರೆ ಮಾತ್ರ ಅಸ್ಥಿತ್ವ ಉಳಿದುಕೊಳ್ಳಲಿದೆ ಎಂದು ನಾಗರೀಕ ಮತ್ತು ರೈತರ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ವಿಜಯ್‌ಕುಮಾರ್ ಹೇಳಿದರು.

ತಾಲ್ಲೂಕಿನ ಶಿರವಾಸೆ ಗ್ರಾಮದಲ್ಲಿ ನಾಗರೀಕರ ಮತ್ತು ರೈತ ಹೋರಾಟ ಸಮಿತಿ, ದಲಿತ, ಜನಪರ, ಕನ್ನಡ, ಕಾರ್ಮಿಕರ ಸಂಘಟನೆಗಳು, ಕಾಫಿ ಬೆಳೆಗಾರರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಜನಜಾಗೃತಿ ಜಾಥಾ ಮತ್ತು ಬೃಹತ್ ಜನಜಾಗೃತಿ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅರಣ್ಯ ಮತ್ತು ಕಂದಾಯ ಇಲಾಖೆಯಿಂದ ಗ್ರಾಮದ ನಿವಾಸಿಗಳು, ರೈತ ಕಾರ್ಮಿಕರಿಗೆ ಆಗುತ್ತಿರುವ ತೊಂದರೆಗಳು ಸ್ವಾತಂತ್ರ್ಯ ಪೂರ್ವದಿಂದ ಇವೆ. ಈ ಬಗ್ಗೆ ಇಲ್ಲಿಯವರೆಗೂ ಯಾವುದೇ ಆಳುವ ಸರ್ಕಾರಗಳು ಕ್ಯಾರೆ ಎನ್ನದೇ, ಪರಸ್ಪರ ಕೆಸರೆರಚುವ ಆಟದಲ್ಲಿ ತೊಡಗಿ ಮೂಲ ನಿವಾಸಿಗಳ ಸ್ವತ್ತನ್ನು ಕಸಿದುಕೊಳ್ಳಲು ಯತ್ನಿಸುತ್ತಿದೆ ಎಂದು ದೂರಿದರು.

ಅರಣ್ಯ ಪ್ರದೇಶದಲ್ಲಿ ಪರಿಸರಕ್ಕೆ ಹಾನಿಯಾಗದಂತೆ ಅಲ್ಪಪ್ರಮಾಣದ ಒತ್ತುವರಿ ಮಾಡಿ ಜೀವನ ಕಟ್ಟಿಕೊಂಡಿರುವ ನಿವಾಸಿಗಳನ್ನು ಸ್ಥಳಾಂತರಿಸಲು ನಕಲಿ ಪರಿಸರವಾದಿಗಳ ಸೋಗಿನಲ್ಲಿರುವ ಕೆಲವು ಎನ್‌ಜಿಓಗಳು ಡೀಮ್ಡ್ ಫಾರೆಸ್ಟ್, ಹುಲಿ ಸಂರಕ್ಷಣೆ ಯೋಜನೆ ಹೆಸರಿನಲ್ಲಿ ಕೆಲಸ ಮಾಡುವ ಜೊತೆಗೆ ಮುಳ್ಳಯ್ಯನಗಿರಿ ತಪ್ಪಲಿನ ಜನವಸತಿ ಪ್ರದೇಶವನ್ನು ಕಿತ್ತುಕೊಳ್ಳಲು ಹುನ್ನಾರ ನಡೆಸುತ್ತಿದೆ ಎಂದರು.

ಅರಣ್ಯ ವ್ಯಾಪ್ತಿಯಲ್ಲಿ ಜನವಸತಿ, ಕೃಷಿಭೂಮಿಯಲ್ಲಿ ವಾಸಿಸುತ್ತಿರುವವರಿಗೆ ಕಸ್ತೂರಿ ರಂಗನ್ ವರದಿ ತೂಗು ಕತ್ತಿಯಂತೆ. ಯಾವುದೇ ವರದಿಗಳು ಜಾರಿಯಾಗದಿದ್ದಲ್ಲಿ, ತಿರುಗಿ ಬರಲಿದೆ. ಮುಂದಿನ ದಿನಗಳಲ್ಲಿ ಗ್ರಾ.ಪಂ. ವ್ಯಾಪ್ತಿಯಲ್ಲಿ ನಿವೇಶವನ್ನಾಗಿ ಪರಿವರ್ತಿಸಲು ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆ ಅನುಮೋದನೆ ಕಡ್ಡಾಯವಾಗಲಿದೆ ಎಂದು ಎಚ್ಚರಿಸಿದರು.

ಡೀಮ್ಡ್ ಅರಣ್ಯದಲ್ಲಿ ಸಾವಿರಾರು ಕುಟುಂಬಗಳಿದ್ದು ಸೂಕ್ತ ರೀತಿಯಲ್ಲಿ ಸರ್ವೆ ಕಾರ್ಯ ನಡೆಸಿ ಎಂದು ಸುಪ್ರೀಂಕೋರ್ಟ್ ಆದೇಶವಿದ್ದರೂ ಇಂದಿಗೂ ಜಿಲ್ಲಾಡಳಿತ ಕ್ರಮ ವಹಿಸದೇ ಮೌನ ತಾಳಿದೆ. ಸ್ಥಳೀಯ ಅಧಿಕಾರಿಗಳಿಗೆ ವಿಚಾರಿಸಿದರೆ ಆದೇಶ ಪ್ರತಿ ಲಭ್ಯವಾಗಿಲ್ಲ ಎಂದು ಸಬೂಬು ಹೇಳಿಕೊಂಡು ಕಾಲಹರಣ ಮಾಡಿರುವ ಕಾರಣ ನಿವಾಸಿಗಳ ಸಮಸ್ಯೆ ಬಗೆಹರಿದಿಲ್ಲ ಎಂದರು.

ಇಂದಿಗೂ 94ಸಿ, 53, 57 ಅರ್ಜಿಗಳು ವಿಲೇವಾರಿಯಾಗುತ್ತಿಲ್ಲ. ಇ-ಖಾತೆ ಮತ್ತು ಪೋಡಿ ಆಗುತ್ತಿಲ್ಲ. ನಿವೇಶನ ರಹಿತರಿಗೆ ನಿವೇಶನಗಳು ಮಂಜೂರಾಗಿಲ್ಲ. ವಸತಿ ರಹಿತರಿಗೆ ನಿವೇಶನ ಇಲ್ಲದೇ ವಸತಿ ಯೋಜಜನೆಗಳಲ್ಲಿ ಮನೆಗಳ ಮಂಜೂರಾಗುತ್ತಿಲ್ಲ. ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹೆಚ್ಚಿನ ಅನುದಾನಗಳು ನೀಡುತ್ತಿಲ್ಲ ಎಂದರು.

ಹಿರಿಯ ಜನಪರ ಹೋರಾಟಗಾರ ಜಾರ್ಜ್ ಆಸ್ಟಿನ್ ಮಾತನಾಡಿ, ಮನೆ, ಕೃಷಿ ಭೂಮಿಗಳನ್ನು ಉಳಿಸಿಕೊಳ್ಳಲು ನಿವಾಸಿಗಳು ಶತಮಾನದಿಂದಲೇ ಹತ್ತಾರು ಹೋರಾಟಗಳನ್ನು ನಡೆಸಿಕೊಂಡು ಬಂದಿವೆ. ಇದೀಗ ಅರಣ್ಯ ಇಲಾಖೆ ಕಿರುಕುಳದಿಂದ ಇಂದಿಗೂ ಬಹುತೇಕ ಕುಟುಂಬಗಳು ನೆಮ್ಮದಿಯಿಂದ ಬದುಕಲಾಗುತ್ತಿಲ್ಲ ಎಂದು ತಿಳಿಸಿದರು.

ಅರಣ್ಯ ಮಧ್ಯೆ ಬದುಕು ಕಟ್ಟಿಕೊಂಡಿರುವ ಜನರು ಕಾಡಿನ ವಿರೋಧಿಗಳಲ್ಲ. ಪರಿಸರವನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಕಾಫಿ ಸಸಿಗಳನ್ನು ಪೋಷಿಸಲಾಗುತ್ತಿದೆ. ಜನವಸತಿ, ಕೃಷಿ ಮತ್ತು ಅರಣ್ಯದ ಮಧ್ಯೆ ಗೆರೆ ಎಳೆಯಲಾಗಿಲ್ಲ. ಇದೀಗ ಕಾಡಿನಲ್ಲಿ ಜಾನುವಾರುಗಳ ಮೇಯಿಸುವಂತಿಲ್ಲ ಎಂಬ ಆದೇಶಗಳಿವೆ. ಮುಂದೆ ಅರಣ್ಯದಲ್ಲಿ ನಡೆದಾಡುವುದು ಕಷ್ಟಸಾಧ್ಯವಾಗಲಿದೆ ಎಂದು ಎಚ್ಚರಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**